ಡಾ|| ರಾಜ್‌ಕುಮಾರ್ ಅಕಾಡೆಮಿ
ಬೆಂಗಳೂರು

ಡಾ|| ರಾಜ್‌ಕುಮಾರ್ ಕುಟುಂಬದವರ ಕೊಡುಗೆ

# ವಾರದ ಸುದ್ದಿ ಸಂಕಲನ

## ಸ್ಪಷ್ಟ ಮತ್ತು ಸಮಗ್ರ ವಿದ್ಯಮಾನಗಳು



**ಅಕ್ಟೋಬರ್ ೪ನೇ ವಾರ**
20-10-2025 TO 25-10-2025

## ದರೋಜಿ ಬಳಿ ಸ್ಕ್ಯಾಪ್ಸ್ ಗೂಬೆ

- ಎಐ, ಡೀಪ್‌ಫೇಕ್ಗೆ ನಿಯಮ ಬಿಗಿ
- ಏಷ್ಯನ್ ರೋಯಿಂಗ್: ಭಾರತಕ್ಕೆ 10 ಪದಕ
- ₹50 ಸಾವಿರ ಕೋಟಿ ವಿದೇಶಿ ಹೂಡಿಕೆ
- ಮೊಬೈಲ್‌ನಲ್ಲಿ ಟ್ರಾಫಿಕ್ ಸಿಗ್ನಲ್ ಮಾಹಿತಿ


## ❖ ‘ರಾಜ್ಯಕ್ಕೆ ₹384 ಕೋಟಿ ಪ್ರವಾಹ ಪರಿಹಾರ’

**ಸಂದರ್ಭ: ಕರ್ನಾಟಕ ಹಾಗೂ ಮಹಾರಾಷ್ಟ್ರ ರಾಜ್ಯಗಳಿಗೆ ₹1,950.80 ಕೋಟಿ ಪರಿಹಾರವನ್ನು 2025–26ನೇ ಸಾಲಿನ ರಾಜ್ಯ ವಿಪತ್ತು ನಿರ್ವಹಣಾ ನಿಧಿ (ಎಸ್‌ಡಿಆರ್‌ಎಫ್) ಅಡಿ ಮುಂಗಡವಾಗಿ ನೀಡಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಅನುಮೋದನೆ ನೀಡಿದ್ದಾರೆ. ಪರಿಹಾರದ ಎರಡನೇ ಕಂತಿನ ಮೊತ್ತ ಇದಾಗಿದೆ.**

- ಈ ವರ್ಷದ ನೈರುತ್ಯ ಮುಂಗಾರಿನಿಂದ ತೀವ್ರ ಹಾನಿಗೊಳಗಾದ ಜನರಿಗೆ ತ್ವರಿತವಾಗಿ ನೆರವು ಒದಗಿಸಲು ಒಟ್ಟು ಮೊತ್ತದಲ್ಲಿ ಕರ್ನಾಟಕಕ್ಕೆ ₹384.40 ಕೋಟಿ ಹಾಗೂ ಮಹಾರಾಷ್ಟ್ರಕ್ಕೆ ₹1,566.40 ಕೋಟಿ ನೀಡಲು ಅನುಮೋದನೆ ನೀಡಲಾಗಿದೆ.
- ‘**ಪ್ರವಾಹ, ಭೂಕುಸಿತ ಹಾಗೂ ಮೇಘಸ್ಫೋಟಕ್ಕೆ** ಒಳಗಾದ ರಾಜ್ಯಗಳಿಗೆ ಎಲ್ಲ ರೀತಿಯ ನೆರವು ಒದಗಿಸಲು ಪ್ರಧಾನಿ ಹಾಗೂ ಗೃಹ ಸಚಿವ ಸಲಹೆಯಂತೆ ಕೇಂದ್ರ ಸರ್ಕಾರ ತನ್ನ ಬದ್ಧತೆ ವ್ಯಕ್ತಪಡಿಸಿದೆ’ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.
- ಎಸ್‌ಡಿಆರ್‌ಎಫ್‌ನ ಅಡಿಯಲ್ಲಿ ಕೇಂದ್ರದ ಪಾಲಾದ ₹13,603.20 ಕೋಟಿಯನ್ನು 27 ರಾಜ್ಯಗಳಿಗೆ, ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿಯ ಅಡಿಯಲ್ಲಿ 15 ರಾಜ್ಯಗಳಿಗೆ ₹2,189.28 ಕೋಟಿ ಮೊತ್ತವನ್ನು ಕೇಂದ್ರ ಸರ್ಕಾರವು ಈ ವರ್ಷ ಬಿಡುಗಡೆ ಮಾಡಿದೆ.
- ಇದಲ್ಲದೇ, ಹೆಚ್ಚುವರಿಯಾಗಿ ರಾಜ್ಯ ವಿಪತ್ತು ನಿರ್ವಹಣಾ ನಿಧಿ (ಎಸ್‌ಡಿಎಂಎಫ್)ನ ಅಡಿಯಲ್ಲಿ 21 ರಾಜ್ಯಗಳಿಗೆ ₹4,571.30 ಕೋಟಿ, ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿ (ಎನ್‌ಡಿಎಂಎಫ್) ಅಡಿಯಲ್ಲಿ 9 ರಾಜ್ಯಗಳಿಗೆ ₹372.09 ಕೋಟಿ ನೆರವು ನೀಡಲಾಗಿದೆ.

## ❖ ಚಂದ್ರಶೇಖರ ಶಿಲ್ಪಿಗೆ ರಾಷ್ಟ್ರೀಯ ಶಿಲ್ಪಕಲಾ ಪ್ರಶಸ್ತಿ

**ಸಂದರ್ಭ: ಹಿರಿಯ ಕಲಾವಿದ ಚಂದ್ರಶೇಖರ ವೈ.ಶಿಲ್ಪಿ ಅವರಿಗೆ ಜವಳಿ ಸಚಿವಾಲಯವು ನೀಡುವ 2024ನೇ ಸಾಲಿನ ‘ರಾಷ್ಟ್ರೀಯ ಶಿಲ್ಪಕಲಾ ಪ್ರಶಸ್ತಿ’ ದೊರೆತಿದೆ. ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರೂ ಆದ ಶಿಲ್ಪಿ ಅವರು ಕೆತ್ತನೆ ಮಾಡಿದ ವಿಶಿಷ್ಟ ಕಲಾ ನೈಪುಣ್ಯದ ಬಾಗಿಲಿಗೆ ಪ್ರಶಸ್ತಿ ಲಭಿಸಿದೆ.**



ಕಲಾವಿದ ಚಂದ್ರಶೇಖರ ಶಿಲ್ಪಿ ಅವರು ತಾವು ತಯಾರಿಸಿದ ದ್ವಾರ ಬಾಗಿಲಿನೊಂದಿಗೆ

- ಸಾಂಪ್ರದಾಯಿಕ ಕುಸುರಿ ಕೆತ್ತನೆಯ ಹಿರಿಯ ಕಲಾವಿದ ಚಂದ್ರಶೇಖರ ವೈ.ಶಿಲ್ಪಿ ಅವರಿಗೆ **ಜವಳಿ ಸಚಿವಾಲಯವು ನೀಡುವ 2024ನೇ ಸಾಲಿನ ‘ರಾಷ್ಟ್ರೀಯ ಶಿಲ್ಪಕಲಾ ಪ್ರಶಸ್ತಿ’** ದೊರೆತಿದೆ.
- ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರೂ ಆದ ಶಿಲ್ಪಿ ಅವರು ಕೆತ್ತನೆ ಮಾಡಿದ ವಿಶಿಷ್ಟ ಕಲಾ ನೈಪುಣ್ಯದ ಬಾಗಿಲಿಗೆ ಪ್ರಶಸ್ತಿ ಲಭಿಸಿದೆ.
- **ಪ್ರಶಸ್ತಿ ₹2 ಲಕ್ಷ ನಗದು ಮತ್ತು ಫಲಕ** ಒಳಗೊಂಡಿದೆ.
- ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ದೆಹಲಿಯ ವಿಜ್ಞಾನ ಭವನದಲ್ಲಿ ಡಿ.9ರಂದು ನಡೆಯುವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.
- ಕಲ್ಯಾಣ ಕರ್ನಾಟಕದ **ಯಾದಗಿರಿ, ಕಲಬುರಗಿ** ಭಾಗದಲ್ಲಿ ಪ್ರಸಿದ್ಧಿಯಾದ **ಸಗರನಾಡು ಕಲಾ ಶೈಲಿಗೆ ಸಾಂಪ್ರದಾಯಿಕ ಶೈಲಿ ಸಂಯೋಜಿಸಿ** ಚಂದ್ರಶೇಖರ ಶಿಲ್ಪಿ ಅವರು ಎತ್ತರಕ್ಕೆ ಒಯ್ದಿದ್ದಾರೆ ಎಂದು ಆಯ್ಕೆ ಸಮಿತಿಯು ಬಣ್ಣಿಸಿದೆ.
- ಚಂದ್ರಶೇಖರ ಶಿಲ್ಪಿ ಅವರು ಮೂಲತಃ ಯಾದಗಿರಿ ಜಿಲ್ಲೆ ಸುರಪುರ ತಾಲ್ಲೂಕಿನ ಕಕ್ಕೇರಾ ಗ್ರಾಮದವರು. ಕರ್ನಾಟಕ ಶಿಲ್ಪಕಲಾ ಅಕಾಡೆಮಿ ಸದಸ್ಯರು, ಅಮರಶಿಲ್ಪಿ ಜಕಣಾಚಾರಿ ಪ್ರಶಸ್ತಿ ಆಯ್ಕೆ ಸಮಿತಿ ಸದಸ್ಯರಾಗಿಯೂ ಅವರು ಕಾರ್ಯನಿರ್ವಹಿಸಿದ್ದಾರೆ.

Dr Rajkumar IAS/KAS Academy

## ❖ 15 ಜಿಲ್ಲೆಗಳ ಕೈತಪ್ಪಲಿದೆ ‘ಪಿಎಂಜಿಎಸ್‌ವೈ’

**ಸಂದರ್ಭ: ‘ಪಿಎಂಜಿಎಸ್‌ವೈ’ 4ನೇ ಹಂತದ ಮಾರ್ಗಸೂಚಿ ಪ್ರಕಾರ ಜಿಲ್ಲೆಯಲ್ಲಿ ಯಾವುದೇ ರಸ್ತೆಯ ಅಭಿವೃದ್ಧಿಪಡಿಸಲು ಸಾಧ್ಯವಾಗುತ್ತಿಲ್ಲ. ಜನಸಂಖ್ಯೆಯ ಮಾನದಂಡವನ್ನು 200ಕ್ಕೆ ಇಳಿಸಿದರೆ ಅನುಕೂಲ ಸಿಇಒ, ಜಿಲ್ಲಾ ಪಂಚಾಯಿತಿ, ದಾವಣಗೆರೆ**

- ‘500ಕ್ಕೂ ಹೆಚ್ಚು ಜನಸಂಖ್ಯೆಯುಳ್ಳ, ಸಂಪರ್ಕರಹಿತ ವಸತಿ ಪ್ರದೇಶಗಳಲ್ಲಷ್ಟೇ ರಸ್ತೆ ನಿರ್ಮಿಸಬಹುದು’ ಎಂಬ ಮಾರ್ಗಸೂಚಿ ಯಿಂದಾಗಿ **ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆಯು (ಪಿಎಂಜಿಎಸ್‌ವೈ) 4ನೇ ಹಂತ**ದಲ್ಲಿ ರಾಜ್ಯದ 15 ಜಿಲ್ಲೆಗಳ ಕೈತಪ್ಪುವ ಸಾಧ್ಯತೆ ಇದೆ.
- **ಪಿಎಂಜಿಎಸ್‌ವೈ 4ನೇ ಹಂತವನ್ನು 2024ರ ಬಜೆಟ್‌ನಲ್ಲಿ ಕೇಂದ್ರ ಸರ್ಕಾರ ಘೋಷಿಸಿದ್ದು, 25,000 ಜನವಸತಿ ಪ್ರದೇಶಗಳಿಗೆ ಸರ್ವಋತು ಸಂಪರ್ಕ ರಸ್ತೆ ಕಲ್ಪಿಸುವ ಆಶ್ವಾಸನೆ ನೀಡಿತ್ತು. ಸಮೀಕ್ಷೆ ಪ್ರಕಾರ ರಾಜ್ಯದಲ್ಲಿ 16 ಜಿಲ್ಲೆಗಳ 225 ಜನವಸತಿ ಪ್ರದೇಶಗಳು ಮಾತ್ರವೇ ಯೋಜನೆಗೆ ಅರ್ಹತೆ ಪಡೆದಿವೆ.**
- ಕೆಲವು ಜಿಲ್ಲೆಗಳಲ್ಲಿ ರಸ್ತೆ ಅಭಿವೃದ್ಧಿಗಾಗಿ ಕಾಯುತ್ತಿರುವ ಬಹುತೇಕ ಗ್ರಾಮಗಳ ಜನಸಂಖ್ಯೆ 500ಕ್ಕಿಂತ ಕಡಿಮೆ ಇರುವುದರಿಂದ ಹಾಗೂ ಈಗಾಗಲೇ ಆಯಾ ಗ್ರಾಮ ವ್ಯಾಪ್ತಿಯಲ್ಲಿ ಕೆಲವೊಂದು ರಸ್ತೆಗಳು ಅಭಿವೃದ್ಧಿ ಹೊಂದಿರುವುದರಿಂದ ಯೋಜನೆಯಿಂದ ವಂಚಿತವಾಗುತ್ತಿವೆ.
- **ಹಳ್ಳಿಗಳಿಗೆ ಸಂಪರ್ಕ ಕಲ್ಪಿಸಲು 2000–2001ನೇ ಸಾಲಿನಲ್ಲಿ ಯೋಜನೆ ಜಾರಿಗೊಳಿಸಲಾಯಿತು**. ಕರ್ನಾಟಕ ಸೇರಿ ದೇಶದ ಹಲವು ರಾಜ್ಯಗಳಲ್ಲಿ ಇದು ಯಶಸ್ಸು ಕಂಡಿದೆ. **2013ರಲ್ಲಿ 2ನೇ ಹಂತ, 2019ರಲ್ಲಿ 3ನೇ ಹಂತ ಜಾರಿಗೊಳಿಸಲಾಗಿತ್ತು.**
- 4ನೇ ಹಂತವು 2024ರ ಡಿಸೆಂಬರ್‌ನಲ್ಲಿ ಅನುಷ್ಠಾನಕ್ಕೆ ಬಂದಿದೆ. ಐದು ವರ್ಷಗಳಲ್ಲಿ ₹ 70,125 ಕೋಟಿ ಅಂದಾಜು ವೆಚ್ಚದಲ್ಲಿ 62,500 ಕಿ.ಮೀ. ರಸ್ತೆ ಅಭಿವೃದ್ಧಿಪಡಿಸುವ ಗುರಿ ಹೊಂದಲಾಗಿದೆ.
- **ರಾಜ್ಯದಲ್ಲಿ ಸಂಪರ್ಕರಹಿತ ಜನವಸತಿ ಪ್ರದೇಶಗಳ ಸಂಖ್ಯೆ ವಿರಳ. ‘ನಮ್ಮ ಗ್ರಾಮ ನಮ್ಮ ರಸ್ತೆ’ ಸೇರಿದಂತೆ ಹಲವು ಯೋಜನೆಯಡಿ ಬಹುತೇಕ ಹಳ್ಳಿಗಳಿಗೆ ರಸ್ತೆ ಸಂಪರ್ಕ ಕಲ್ಪಿಸಲಾಗಿದೆ**.
- ಹೊಸದಾಗಿ ನಿರ್ಮಾಣವಾಗಿರುವ ಜನವಸತಿ ಪ್ರದೇಶಗಳು 500ಕ್ಕೂ ಕಡಿಮೆ ಜನಸಂಖ್ಯೆ ಹೊಂದಿವೆ. ಪಿಎಂಜಿಎಸ್‌ವೈ 4ನೇ ಹಂತದ ಮಾರ್ಗಸೂಚಿ ಪ್ರಕಾರ ಗ್ರಾಮೀಣ ಪ್ರದೇಶದ ರಸ್ತೆ ಅಭಿವೃದ್ಧಿ ಸಾಧ್ಯವಾಗುತ್ತಿಲ್ಲ ಎಂಬುದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಯೊಬ್ಬರ ಹೇಳಿಕೆ.
- **ಯೋಜನೆಗೆ ಕೇಂದ್ರ ಮತ್ತು ರಾಜ್ಯ 60:40ರ ಅನುಪಾತದಲ್ಲಿ ವೆಚ್ಚ ಭರಿಸಿವೆ**. 2022–23ರಿಂದ 2024–2025ನೇ ಸಾಲಿನವರೆಗೆ ರಾಜ್ಯದಲ್ಲಿ 2,254 ಕಿ.ಮೀ ರಸ್ತೆ ಅಭಿವೃದ್ಧಿಪಡಿಸಲಾಗಿದೆ. ಇದಕ್ಕೆ ಕೇಂದ್ರ ಸರ್ಕಾರ ₹ 837 ಕೋಟಿ, ರಾಜ್ಯ ಸರ್ಕಾರ ₹ 585 ಕೋಟಿ ವ್ಯಯಿಸಿವೆ.
- ‘ಗ್ರಾಮದಲ್ಲಿ ಒಂದು ರಸ್ತೆ ಅಭಿವೃದ್ಧಿಪಡಿಸಿದ್ದರೆ ಮತ್ತೊಂದು ರಸ್ತೆ ನಿರ್ಮಿಸಲು ಯೋಜನೆಯ 4ನೇ ಹಂತದಲ್ಲಿ ಅವಕಾಶವಿಲ್ಲ. ರಸ್ತೆ ದುರಸ್ತಿಗೂ ಅವಕಾಶವಿಲ್ಲ. ಇದರಿಂದ ರಾಜ್ಯವು ಯೋಜನೆಯ ನೆರವು ಪಡೆಯಲು ಸಾಧ್ಯವಾಗುತ್ತಿಲ್ಲ. ಮಾರ್ಗಸೂಚಿಗೆ ತಿದ್ದುಪಡಿ ತಂದರೆ ಮಾತ್ರ ರಾಜ್ಯಕ್ಕೆ ಅನುಕೂಲ ಆಗಲಿದೆ’ ಎಂದು ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

Dr. Rajkumar IAS Academy

## ❖ ದರೋಜಿ ಬಳಿ ಸ್ಕ್ಯಾಪ್ಸ್ ಗೂಬೆ ಗೋಚರ

**ಸಂದರ್ಭ: ತಾಲ್ಲೂಕಿನ ದರೋಜಿ ಕರಡಿಧಾಮದ ಬಳಿ ಈ ಭಾಗದಲ್ಲಿ ಅತ್ಯಂತ ವಿರಳವಾಗಿರುವ ಭಾರತೀಯ ಸ್ಕ್ಯಾಪ್ಸ್ ಗೂಬೆ ಕ್ಯಾಮೆರಾ ಕಣ್ಣಿಗೆ ಸೆರೆಸಿಕ್ಕಿದೆ.**



ಸ್ಕಾಪ್ಸ್ ಗೂಬೆ

- **ಕಿವಿಯಂತಹ ಗರಿಯನ್ನು ಹೊಂದಿರುವ ಬೂದು ಬಣ್ಣದ ಗೂಬೆ 20ರಿಂದ 25 ಸೆಂ.ಮೀ ಉದ್ದವಿದೆ.** ಕಣ್ಣು ಕಡು ಕಪ್ಪು. ದೇಹದ ಬಣ್ಣ ಸುತ್ತಲಿನ ಪರಿಸರಕ್ಕೆ ಹೊಂದಿಕೊಳ್ಳುವುದರಿಂದ ಹಗಲಿನಲ್ಲಿ ಇದನ್ನು ಗುರುತಿಸುವುದು ಕಷ್ಟ. ಈ ಗೂಬೆಗೆ **'ಛದ್ಮವೇಷಧಾರಿ'** ಎಂದೂ ಕರೆಯಲಾಗುತ್ತದೆ.
- ರಾತ್ರಿ ಗೂಬೆಯ 'ವಟ್ ವಟ್' ಸದ್ದಿನಿಂದ ಜಾಗೃತರಾದ ಪಕ್ಷಿ ವೀಕ್ಷಕರಾದ ಸವ್ಯಸಾಚಿ ರಾಯ್, ಶ್ರೀಧರ ಪೆರುಮಾಳ್, ಪಂಪಯ್ಯ ಸ್ವಾಮಿ ಮಳೀಮಠ ಅವರು ಗೂಬೆಯ ಚಲನವಲನ ಹಿಂಬಾಲಿಸಿದ್ದರು. ಶ್ರೀಧರ ಪೆರುಮಾಳ್ ಅವರ ಕ್ಯಾಮೆರಾ ಕಣ್ಣಿನಲ್ಲಿ ಸೆರೆಯಾಯಿತು.
- **'ಪಶ್ಚಿಮಘಟ್ಟದಲ್ಲಿ ಇಂತಹ ಗೂಬೆ ಗೋಚರಿಸುವುದು ಅಪರೂಪ. ಬಳ್ಳಾರಿ- ಹೊಸಪೇಟೆ ವ್ಯಾಪ್ತಿಯಲ್ಲಿ ಇದು ಕಾಣಿಸಿದ್ದೇ ಇಲ್ಲ'** ಎಂದು ಪಂಪಯ್ಯಸ್ವಾಮಿ ಮಳೀಮಠ.

## ❖ 24 ದೇಶಗಳಿಗೆ ಭಾರತದ ರಫ್ತು ಹೆಚ್ಚಳ

**ಸಂದರ್ಭ: ಏಪ್ರಿಲ್-ಸೆಪ್ಟೆಂಬರ್ ಅವಧಿಯಲ್ಲಿ ₹11.37 ಲಕ್ಷ ಕೋಟಿ ಮೌಲ್ಯದ ವಹಿವಾಟು. ಪ್ರಸಕ್ತ ಆರ್ಥಿಕ ವರ್ಷದ ಮೊದಲಾರ್ಧ ದಲ್ಲಿ (ಏಪ್ರಿಲ್‌ನಿಂದ ಸೆಪ್ಟೆಂಬರ್ ಅಂತ್ಯದವರೆಗೆ) 24 ದೇಶಗಳಿಗೆ ದೇಶದ ರಫ್ತು ಏರಿಕೆ ಕಂಡಿದೆ ಎಂದು ಸರ್ಕಾರದ ಅಂಕಿ ಅಂಶಗಳು ತಿಳಿಸಿವೆ.**

- ಇದೇ ಅವಧಿಯಲ್ಲಿ ಹೆಚ್ಚಿನ ಸುಂಕ ದಿಂದಾಗಿ ಅಮೆರಿಕಕ್ಕೆ ರಫ್ತು ಪ್ರಮಾಣ ಇಳಿಕೆಯಾಗಿದೆ. **ಕೊರಿಯಾ, ಯುಎಇ, ಜರ್ಮನಿ, ಈಜಿಪ್ಟ್, ವಿಯೆಟ್ನಾಂ, ಇರಾಕ್, ಮೆಕ್ಸಿಕೊ, ರಷ್ಯಾ, ಕೆನ್ಯಾ, ನೈಜೀರಿಯಾ, ಕೆನಡಾ ಸೇರಿದಂತೆ 24 ರಾಷ್ಟ್ರಗಳಿಗೆ ದೇಶದಿಂದ ಆಗುವ ರಫ್ತು ಹೆಚ್ಚಾಗಿದೆ.**
- ಭಾರತವು ತನ್ನ ಸರಕುಗಳನ್ನು ಬೇರೆ ಬೇರೆ ಮಾರುಕಟ್ಟೆಗಳಿಗೆ ಹೆಚ್ಚಿನ ಪ್ರಮಾಣ ದಲ್ಲಿ ರಫ್ತು ಮಾಡಲು ಆದ್ಯತೆ ನೀಡುತ್ತಿರುವುದನ್ನು ಇದು ತೋರಿಸುತ್ತಿದೆ.
- **ಏಪ್ರಿಲ್-ಸೆಪ್ಟೆಂಬರ್ ಅವಧಿಯಲ್ಲಿ ದೇಶದ ಒಟ್ಟು ರಫ್ತಿನಲ್ಲಿ ಶೇ 3.02ರಷ್ಟು ಹೆಚ್ಚಳವಾಗಿದ್ದು, ₹19.35 ಲಕ್ಷ ಕೋಟಿಯಷ್ಟಾಗಿದೆ. ದೇಶದ ಆಮದು ಶೇ 4.53ರಷ್ಟು ಏರಿಕೆಯಾಗಿದ್ದು, ₹33 ಲಕ್ಷ ಕೋಟಿಯಷ್ಟಾಗಿದೆ. ವ್ಯಾಪಾರ ಕೊರತೆ ₹13.63 ಲಕ್ಷ ಕೋಟಿಯಾಗಿದೆ.**
- ಇದೇ ಅವಧಿಯಲ್ಲಿ ಈ 24 ದೇಶಗಳಿಗೆ ₹11.37 ಲಕ್ಷ ಕೋಟಿ ಮೌಲ್ಯದಷ್ಟು ರಫ್ತು ವಹಿವಾಟು ದೇಶದಿಂದ ನಡೆದಿದೆ. ಇದು ದೇಶದ ಒಟ್ಟು ರಫ್ತಿನಲ್ಲಿ ಶೇ 59ರಷ್ಟಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.
- ಆದರೆ, ಕೇಂದ್ರ ವಾಣಿಜ್ಯ ಸಚಿವಾಲ ಯದ ಅಂಕಿ ಅಂಶಗಳ ಪ್ರಕಾರ, ಈ ಆರ್ಥಿಕ ವರ್ಷದ ಮೊದಲಾರ್ಧದಲ್ಲಿ 16 ದೇಶಗಳಿಗೆ ದೇಶದ ರಫ್ತು ಪ್ರಮಾಣ ಇಳಿಕೆಯಾಗಿದೆ. ಈ ದೇಶಗಳು ದೇಶದ ಒಟ್ಟು ರಫ್ತಿನಲ್ಲಿ ಶೇ 27ರಷ್ಟು ಪಾಲು ಹೊಂದಿವೆ.
- ಅಮೆರಿಕವು ಭಾರತದಿಂದ ಆಮದಾ ಗುವ ಸರಕುಗಳ ಮೇಲೆ ವಿಧಿಸಿರುವ ಶೇ 50ರಷ್ಟು ಸುಂಕವು, ಅಮೆರಿಕಕ್ಕೆ ರಫ್ತು ಮಾಡಲು ತೊಂದರೆ ಉಂಟು ಮಾಡಿದೆ. ಆದರೆ, ರಫ್ತುದಾರರು ಆಫ್ರಿಕಾ, ಲ್ಯಾಟಿನ್ ಅಮೆರಿಕ, ಪಶ್ಚಿಮ ಏಷ್ಯಾ ಸೇರಿದಂತೆ ವಿವಿಧ ದೇಶಗಳಿಗೆ ರಫ್ತು ಮಾಡಲು ಮುಂದಾಗಿದ್ದಾರೆ. ಮುಂದಿನ ದಿನಗಳಲ್ಲೂ ಈ ರಫ್ತು ಹೆಚ್ಚಳವಾಗಲಿದೆ ಎಂದು ರಫ್ತುದಾರರೊಬ್ಬರು ಹೇಳಿದ್ದಾರೆ.
- ಏಪ್ರಿಲ್-ಸೆಪ್ಟೆಂಬರ್ ಅವಧಿಯಲ್ಲಿ ಅಮೆರಿಕಕ್ಕೆ ದೇಶದ ರಫ್ತು ಶೇ 13.37ರಷ್ಟು ಹೆಚ್ಚಳವಾಗಿದೆ. ಇದು ರೂಪಾಯಿ ಮೌಲ್ಯದಲ್ಲಿ ₹4 ಲಕ್ಷ ಕೋಟಿಯಷ್ಟಾಗಿದೆ. ಆಮದು ಶೇ 9ರಷ್ಟು ಏರಿಕೆಯಾಗಿದ್ದು, ₹2.25 ಲಕ್ಷ ಕೋಟಿ ಆಗಿದೆ.

- **2024–25ರ ಆರ್ಥಿಕ ವರ್ಷದಲ್ಲಿ ಅಮೆರಿಕವು ಭಾರತದ ಅತಿದೊಡ್ಡ ವ್ಯಾಪಾರ ಪಾಲುದಾರ ರಾಷ್ಟ್ರವಾಗಿದೆ.**

**ಅಮೆರಿಕಕ್ಕೆ ರಫ್ತು ಇಳಿಕೆ**

- ಸೆಪ್ಟೆಂಬರ್ ತಿಂಗಳಿನಲ್ಲಿ ಅಮೆರಿಕಕ್ಕೆ ದೇಶದ ಸರಕುಗಳ ರಫ್ತು ಇಳಿಕೆ ಆಗಿದೆ. ಇದೇ ಅವಧಿಯಲ್ಲಿ ಅಮೆರಿಕ ಹೊರತುಪಡಿಸಿ ಬೇರೆ ದೇಶಗಳಿಗೆ ರಫ್ತು ಹೆಚ್ಚಳವಾಗಿದೆ ಎಂದು ರೇಟಿಂಗ್ ಸಂಸ್ಥೆ ಕ್ರಿಸಿಲ್ ವರದಿ ಹೇಳಿದೆ.
- ಆಗಸ್ಟ್ ತಿಂಗಳಿನಲ್ಲಿ ಅಮೆರಿಕಕ್ಕೆ ದೇಶದಿಂದ ರಫ್ತಾದ ಸರಕುಗಳಲ್ಲಿ ಶೇ 7ರಷ್ಟು ಬೆಳವಣಿಗೆ ಆಗಿತ್ತು. ಆದರೆ, ಸೆಪ್ಟೆಂಬರ್‌ನಲ್ಲಿ ರಫ್ತು ಪ್ರಮಾಣ ಶೇ 11.9ರಷ್ಟು ಇಳಿಕೆಯಾಗಿದೆ. ಇದು ಹಣಕಾಸಿನ ಮೌಲ್ಯದಲ್ಲಿ ₹48,372 ಕೋಟಿಯಷ್ಟಾಗಿದೆ.
- ಇದೇ ಅವಧಿಯಲ್ಲಿ ಅಮೆರಿಕ ಹೊರತುಪಡಿಸಿ ಬೇರೆ ದೇಶಗಳಿಗೆ, ಭಾರತದಿಂದಾದ ಸರಕುಗಳ ರಫ್ತು ಶೇ 10.9ರಷ್ಟು ಹೆಚ್ಚಳವಾಗಿದೆ. ಆಗಸ್ಟ್‌ನಲ್ಲಿ ರಫ್ತು ಶೇ 6.6ರಷ್ಟು ಮಾತ್ರ ಇತ್ತು.
- ಅಮೆರಿಕದ ಹೆಚ್ಚುವರಿ ಸುಂಕವು ದೇಶದ ಸರಕುಗಳ ರಫ್ತಿನ ಮೇಲೆ ಪರಿಣಾಮ ಬೀರಲಿದೆ ಎಂದು ಕ್ರಿಸಿಲ್ ಎಚ್ಚರಿಸಿದೆ.

## ❖ ಕದನ ವಿರಾಮಕ್ಕೆ ಒಪ್ಪಿದ ಪಾಕ್- ಅಫ್ಗಾನಿಸ್ತಾನ

**ಸಂದರ್ಭ: ಗಡಿಯಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ ಕದನ ವಿರಾಮ ಘೋಷಿಸಿ, ಶಾಂತಿ ಮರುಸ್ಥಾಪನೆಗೆ ಮುಂದಾಗಲು ಪಾಕಿಸ್ತಾನ-ಅಫ್ಗಾನಿಸ್ತಾನ ಒಪ್ಪಿಗೆ ಸೂಚಿಸಿವೆ.**

- ಪಾಕಿಸ್ತಾನದ ರಕ್ಷಣಾ ಸಚಿವ ಖ್ವಾಜಾ ಆಸಿಫ್ ಮತ್ತು ಅಫ್ಗಾನಿಸ್ತಾನದ ಹಂಗಾಮಿ ರಕ್ಷಣಾ ಸಚಿವ ಮುಲ್ಲಾ ಯಾಕೂಬ್ ದೋಹಾದಲ್ಲಿ ಮಾತುಕತೆ ನಡೆಸಿದ ಬೆನ್ನಲ್ಲೇ ಉಭಯ ದೇಶಗಳು ಕದನ ವಿರಾಮಕ್ಕೆ ಒಪ್ಪಿವೆ ಎಂದು ಕತಾರ್‌ನ ವಿದೇಶಾಂಗ ಸಚಿವಾಲಯ ಹೇಳಿದೆ. **ಈ ಸಂಧಾನಕ್ಕೆ ಕತಾರ್ ಮತ್ತು ಟರ್ಕಿ ಮಧ್ಯಸ್ಥಿಕೆ ವಹಿಸಿದ್ದವು.**
- ಶಾಂತಿ ಮರುಸ್ಥಾಪನೆ ಮತ್ತು ಸ್ಥಿರತೆ ತರುವ ವಿಚಾರದಲ್ಲಿ ಸಭೆಗಳು ನಡೆಯಲಿವೆ ಎಂದು ಉಭಯ ದೇಶಗಳು ಹೇಳಿವೆ. ನಿಷೇಧಿತ ತೆಹ್ರೀಕ್-ಎ-ತಾಲಿಬಾನ್ ಪಾಕಿಸ್ತಾನ್‌ನ (ಟಿಟಿಪಿ) ವಿರುದ್ಧ ಕ್ರಮ ಕೈಗೊಳ್ಳುವಂತೆ ಪಾಕಿಸ್ತಾನವು ದೋಹಾ ಸಭೆಯಲ್ಲಿ ಅಫ್ಗಾನಿಸ್ತಾನವನ್ನು ಒತ್ತಾಯಿಸಿದೆ.

## ❖ ಕದನ ವಿರಾಮದ ನಡುವೆಯೇ ಇಸ್ರೇಲ್ ದಾಳಿ

**ಸಂದರ್ಭ: ಕದನ ವಿರಾಮದ ನಡುವೆಯೇ ಇಸ್ರೇಲ್ ಸೇನೆ ಹಮಾಸ್ ಬಂಡುಕೋರರನ್ನು ಗುರಿಯಾಗಿಸಿ ಗಾಜಾಪಟ್ಟಿಯ ಹಲವೆಡೆ ದಾಳಿ ನಡೆಸಿದೆ.**

- ಸೇನೆಯ ನಿಯಂತ್ರಣದಲ್ಲಿರುವ ಗಾಜಾದಲ್ಲಿ ಹಮಾಸ್ ಬಂಡುಕೋರರು ಇಸ್ರೇಲ್ ಸೈನಿಕರ ಮೇಲೆ ಗುಂಡಿನ ದಾಳಿ ನಡೆಸಿ, ಕದನ ವಿರಾಮ ಉಲ್ಲಂಘಿಸಿದ್ದಕ್ಕಾಗಿ ಈ ದಾಳಿ ನಡೆಸಿರುವುದಾಗಿ ಇಸ್ರೇಲ್ ಸೇನೆ ಹೇಳಿದೆ. ಆದರೆ, ಗಾಜಾಪಟ್ಟಿಯ ದಕ್ಷಿಣ ಭಾಗದ ರಫಾದಲ್ಲಿ ಯಾವುದೇ ಘರ್ಷಣೆಯಲ್ಲಿ ಭಾಗಿಯಾಗಿಲ್ಲ ಎಂದು ಹಮಾಸ್ ಹೇಳಿದೆ.
- 'ಹಮಾಸ್‌ನಿಂದ ಕದನ ವಿರಾಮ ಉಲ್ಲಂಘನೆಯಾದರೆ ಕಠಿಣ ಕ್ರಮ ಕೈಗೊಳ್ಳಿ' ಎಂದು ಪ್ರಧಾನಿ ಬೆಂಜಮಿನ್ ನೆತನ್ಯಾಹು ಇಸ್ರೇಲ್ ಸೇನಾ ಮುಖ್ಯಸ್ಥರಿಗೆ ಸೂಚಿಸಿದ್ದಾರೆ. ಆದರೆ, ಮತ್ತೊಮ್ಮೆ ಯುದ್ಧ ಪುನರಾರಂಭಿಸುವ ಬೆದರಿಕೆ ಒಡ್ಡಿಲ್ಲ. ಇದರ ಬೆನ್ನಲ್ಲೇ, ಕದನ ವಿರಾಮಕ್ಕೆ ಸಂಬಂಧಿಸಿದ ಎರಡನೆಯ ಸುತ್ತಿನ ಮಾತುಕತೆ ಆರಂಭಗೊಂಡಿದೆ ಎಂದು ಪ್ಯಾಲೆಸ್ಟೀನ್ ಹೇಳಿದೆ. ಹಮಾಸ್‌ನ ಸಂಪೂರ್ಣ ನಿಶ್ಶಸ್ತ್ರೀಕರಣ, ಗಾಜಾದ ಭವಿಷ್ಯದ ಆಡಳಿತ ಎರಡನೆಯ ಸುತ್ತಿನ ಕದನ ವಿರಾಮ ಮಾತುಕತೆಯ ಪ್ರಮುಖ ಅಂಶಗಳು.

- ಬಾಕಿ ಉಳಿದಿದ್ದ ಇಬ್ಬರು ಇಸ್ರೇಲ್ ಒತ್ತೆಯಾಳುಗಳನ್ನು ಹಮಾಸ್ ಶನಿವಾರ ರಾತ್ರೋರಾತ್ರಿ ಬಿಡುಗಡೆ ಮಾಡಿತ್ತು. ಇದರ ಬೆನ್ನಲ್ಲೇ, ಇಸ್ರೇಲ್ ಸೇನೆಯಿಂದ ದಾಳಿ ನಡೆದಿದೆ. ಹಮಾಸ್ ಕದನ ವಿರಾಮ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವರೆಗೆ ಗಾಜಾ-ಈಜಿಪ್ಟ್ ನಡುವಿನ ರಫಾ ಗಡಿಯನ್ನು ಮುಚ್ಚುವುದಾಗಿ ಇಸ್ರೇಲ್ ಎಚ್ಚರಿಸಿದೆ.
- ಮೃತದೇಹ ಹಸ್ತಾಂತರ: ಕದನ ವಿರಾಮ ಘೋಷಣೆಯಾದ ನಂತರ, ಕಳೆದ ಒಂದು ವಾರದಲ್ಲಿ ಹಮಾಸ್ ಇಸ್ರೇಲ್‌ಗೆ 13 ಮೃತದೇಹಗಳನ್ನು ಹಸ್ತಾಂತರಿಸಿದೆ. ಇದರಲ್ಲಿ 12 ಮೃತದೇಹಗಳು ಒತ್ತೆಯಾಳುಗಳದ್ದು ಎಂದು ಇಸ್ರೇಲ್ ಸೇನೆ ಗುರುತಿಸಿದೆ. ಇಸ್ರೇಲ್, ಹಮಾಸ್‌ಗೆ 150 ಪ್ಯಾಲೆಸ್ಟೀನಿಯರ ಮೃತದೇಹಗಳನ್ನು ಹಸ್ತಾಂತರಿಸಿದೆ ಎಂದು ಗಾಜಾದ ಆರೋಗ್ಯ ಸಚಿವಾಲಯ ಹೇಳಿದೆ.

## ❖ ಬೆಳ್ಳಿ ಪದಕ ಗೆದ್ದ ತನ್ವಿ ಶರ್ಮಾ

**ಸಂದರ್ಭ: ವಿಶ್ವ ಜೂ. ಬ್ಯಾಡ್ಮಿಂಟನ್: ಥಾಯ್ಲೆಂಡ್‌ನ ಅನ್ಯಪತ್‌ಗೆ ಚಿನ್ನ: ಥಾಯ್ಲೆಂಡ್‌ನ ಅನ್ಯಪತ್ ಫಿಚಿಟ್‌ಪ್ರೀಚಸಕ್ ಅವರು ವಿಶ್ವ ಜೂನಿಯರ್ ಬ್ಯಾಡ್ಮಿಂಟನ್ ಚಾಂಪಿಯನ್‌ಷಿಪ್ ಮಹಿಳಾ ಸಿಂಗಲ್ಸ್ ಫೈನಲ್‌ನಲ್ಲಿ ನೇರ ಆಟಗಳಿಂದ ಅಗ್ರ ಶ್ರೇಯಾಂಕದ ಭಾರತದ ಆಟಗಾರ್ತಿಯನ್ನು ಅವರನ್ನು ಮಣಿಸಿ ಚಾಂಪಿಯನ್ ಆದರು.**

- ವಿಶ್ವದ ಮಾಜಿ ಅಗ್ರಮಾನ್ಯ ಆಟಗಾರ್ತಿ ಸೈನಾ ನೆಹ್ವಾಲ್ ಮತ್ತು ಅಪರ್ಣಾ ಪೊಪಟ್ ಬಳಿಕ ಈ ಟೂರ್ನಿಯ ಫೈನಲ್ ತಲುಪಿದ ಭಾರತದ ಮೂರನೇ ಆಟಗಾರ್ತಿಎನಿಸಿರುವ 16 ವರ್ಷ ವಯಸ್ಸಿನ ತನ್ವಿ 7–15, 12–15 ರಲ್ಲಿ ಎರಡನೇ ಶ್ರೇಯಾಂಕದ ಆಟಗಾರ್ತಿಗೆ ಸೋತರು.
- **ಇದು 17 ವರ್ಷಗಳಲ್ಲಿ ಭಾರತದ ಆಟಗಾರ್ತಿಯೊಬ್ಬರು ವಿಶ್ವ ಜೂನಿಯರ್ ಚಾಂಪಿಯನ್‌ಷಿಪ್‌ನಲ್ಲಿ ಗೆಲ್ಲುತ್ತಿರುವ ಮೊದಲ ಬೆಳ್ಳಿ ಪದಕವಾಗಿದೆ. ಸೈನಾ (2008ರಲ್ಲಿ ಚಿನ್ನ, 2006ಲ್ಲಿ ಬೆಳ್ಳಿ), ಅಪರ್ಣಾ (1996ರಲ್ಲಿ ಬೆಳ್ಳಿ) ಈ ಹಿಂದೆ ಪದಕ ಗೆದ್ದ ಭಾರತದ ಇನ್ನಿಬ್ಬರು ಆಟಗಾರ್ತಿಯರಾಗಿದ್ದಾರೆ.**



ಬೆಳ್ಳಿ ಪದಕ ಗೆದ್ದ ಭಾರತದ ತನ್ವಿ ಶರ್ಮಾ ಪಿಟಿಐ ಚಿತ್ರ

- ಲಿಯು ಯಾಂಗ್‌ಗೆ ಪ್ರಶಸ್ತಿ: ಇದೇ ಟೂರ್ನಿಯ ಪುರುಷರ ಸಿಂಗಲ್ಸ್ ಫೈನಲ್‌ನಲ್ಲಿ ಚೀನಾದ ಲಿಯು ಯಾಂಗ್ ಮಿಂಗ್ ಯು ಅವರು 15–10, 15–11 ರಿಂದ ಇಂಡೊನೇಷ್ಯಾದ ಮೊಹಮ್ಮದ್ ಝುಕಿ ಉಬೈದಿಲ್ಲಾ ಅವರನ್ನು ಸೋಲಿಸಿದರು. ಮೂರನೇ ಶ್ರೇಯಾಂಕದ ಆಟಗಾರ, ಅಗ್ರ ಶ್ರೇಯಾಂಕದ ಉಬೈದಿಲ್ಲಾ ಅವರನ್ನು ಮಣಿಸಲು 35 ನಿಮಿಷ ತೆಗೆದುಕೊಂಡರು.

## ❖ ಏಷ್ಯನ್ ರೋಯಿಂಗ್: ಭಾರತಕ್ಕೆ 10 ಪದಕ

**ಸಂದರ್ಭ: ಒಲಿಂಪಿಯನ್ ಬಲರಾಜ್ ಪನ್ವರ್ ನೇತೃತ್ವದಲ್ಲಿ ವಿಯೆಟ್ನಾಮಿನ ಹಾಯ್ ಫಾಂಗ್‌ನಲ್ಲಿ ನಡೆದ ಏಷ್ಯನ್ ರೋಯಿಂಗ್ ಚಾಂಪಿಯನ್‌ಷಿಪ್‌ನಲ್ಲಿ ಭಾರತ ಉತ್ತಮ ಸಾಧನೆ ತೋರಿತು. ಈ ಕೂಟದಲ್ಲಿ ಮೂರು ಚಿನ್ನ, ಐದು ಬೆಳ್ಳಿ, ಎರಡು ಕಂಚು ಸೇರಿ ಒಟ್ಟು 10 ಪದಕಗಳನ್ನು ಗೆದ್ದುಕೊಂಡಿತು.**

- ಇತ್ತೀಚಿನ ವರ್ಷಗಳಲ್ಲಿ ಭಾರತ ತಂಡದ ಶ್ರೇಷ್ಠ ಪ್ರದರ್ಶನ ಇದೆನಿಸಿತು. ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಭಾಗಿಯಾಗಿದ್ದ ಪನ್ವರ್ ಪುರುಷರ ಸಿಂಗಲ್ ಸ್ಕಲ್ (ಎಂ1ಎಕ್ಸ್) ರೇಸ್‌ನಲ್ಲಿ ಅಧಿಕಾರಯುತ ಪ್ರದರ್ಶನದೊಡನೆ ಚಿನ್ನ ಗೆದ್ದರು.
- ಲೈಟ್‌ವೇಟ್ ಮೆನ್ಸ್ ಡಬಲ್ ಸ್ಕಲ್‌ನಲ್ಲಿ ಭಾರತ ಮತ್ತೊಂದು ಚಿನ್ನ ಗೆದ್ದುಕೊಂಡಿತು. ಲಕ್ಷಯ್ ಮತ್ತು ಅಜಯ್ ತ್ಯಾಗಿ ಈ ತಂಡದಲ್ಲಿದ್ದರು. ಪುರುಷರ ಕ್ವಾಡ್ರಾಪಲ್ ಸ್ಕಲ್ ಸ್ಪರ್ಧೆ ಯಲ್ಲೂ ತಂಡದ (ಕುಲ್ವಿಂದರ್ ಸಿಂಗ್, ನವದೀಪ್ ಸಿಂಗ್, ಸತ್ನಾಮ್ ಸಿಂಗ್ ಮತ್ತು ಜೇಕರ್ ಖಾನ್) ಉತ್ತಮ ಸಮನ್ವಯದಿಂದ ಚಿನ್ನ ಒಲಿಯಿತು.

## ❖ ಭಾರಿ ಸುಂಕ: ಟ್ರಂಪ್ ಎಚ್ಚರಿಕೆ: ತೈಲ ಖರೀದಿ ಹೆಚ್ಚಳ

**ಸಂದರ್ಭ: 2022ರಲ್ಲಿ ಉಕ್ರೇನ್ ಮೇಲೆ ರಷ್ಯಾ ಸಮರ ಸಾರಿದ ಬಳಿಕ ಭಾರತವು ರಷ್ಯಾದಿಂದ ಖರೀದಿಸುವ ಕಚ್ಚಾತೈಲದ ಪ್ರಮಾಣದಲ್ಲಿ ಹೆಚ್ಚಳ ಕಂಡುಬಂದಿದೆ.**

- 2025ರ ಮೊದಲ ಒಂಬತ್ತು ತಿಂಗಳಲ್ಲಿ ರಷ್ಯಾದಿಂದ ಪ್ರತಿದಿನ 19 ಲಕ್ಷ ಬ್ಯಾರಲ್‌ನಷ್ಟು ತೈಲ ಖರೀದಿಸಿದೆ ಎಂದು ಅಂತರರಾಷ್ಟ್ರೀಯ ಇಂಧನ ಸಂಸ್ಥೆ (ಐಇಎ) ಹೇಳಿದೆ. ಆದರೆ, ಈ ಅವಧಿಯಲ್ಲಿ ರಷ್ಯಾದ ಒಟ್ಟು ರಫ್ತಿನ ಶೇ 40ರಷ್ಟು ತೈಲ ಭಾರತಕ್ಕೆ ಬಂದಿದೆ.
- ಉಕ್ರೇನ್ ಸೇನೆಯು ರಷ್ಯಾದ ಇಂಧನ ಮೂಲಸೌಕರ್ಯಗಳನ್ನು ಗುರಿಯಾಗಿಸಿ ದಾಳಿಯನ್ನು ಹೆಚ್ಚಿಸಿದೆ. ಇದರ ನಡುವೆಯೇ ಭಾರತದ ಮೇಲೆ ಅಮೆರಿಕದ ಒತ್ತಡ ಬಂದಿದೆ.

## ❖ ತಾಯಂದಿರ ಮರಣ ದರ ಇಳಿಸಲು ಅಭಿಯಾನ

**ಸಂದರ್ಭ: ರಾಜ್ಯದಲ್ಲಿ ತಡೆಗಟ್ಟಬಹುದಾದ ತಾಯಂದಿರ ಮರಣ ಪ್ರಮಾಣವನ್ನು ಶೂನ್ಯಕ್ಕೆ ಇಳಿಸಲು ಆರೋಗ್ಯ ಇಲಾಖೆಯು ವಿಶೇಷ ಅಭಿಯಾನ ಹಮ್ಮಿಕೊಂಡಿದ್ದು, ಈ ಸಂಬಂಧ ತಾಯಿ ಮತ್ತು ಮಕ್ಕಳ ಆಸ್ಪತ್ರೆ (ಎಂಸಿಎಚ್) ಬಲವರ್ಧನೆ, ಉಪಕರಣಗಳ ಖರೀದಿ ಸೇರಿ ವಿವಿಧ ಕ್ರಮಗಳಿಗೆ ₹139 ಕೋಟಿ ಅನುದಾನ ಬಳಸಿಕೊಳ್ಳಲು ಅನುಮೋದನೆ ದೊರೆತಿದೆ.**

- ರಾಜ್ಯದಲ್ಲಿ ತಾಯಂದಿರ ಮರಣ ಪ್ರಮಾಣ ಇಳಿಮುಖವಾಗಿವೆ. **2024–25ನೇ ಸಾಲಿನಲ್ಲಿ ರಾಜ್ಯದಲ್ಲಿ 9.31 ಲಕ್ಷ ಹೆರಿಗೆಗಳಾಗಿದ್ದು, 530 ತಾಯಂದಿರ ಮರಣ ಪ್ರಕರಣ ವರದಿಯಾಗಿದೆ**. ಈ ಸಾವಿನ ನಿಖರ ಕಾರಣ ತಿಳಿಯಲು ಸಾವಿನ ಲೆಕ್ಕಗಳ ವರದಿ (ಡೆತ್ ಆಡಿಟ್) ಸಿದ್ಧಪಡಿಸಲಾಗುತ್ತಿದೆ ಎಂದು ಇಲಾಖೆ ತಿಳಿಸಿದೆ.
- ರಕ್ತಸ್ರಾವ, ಗರ್ಭಪಾತ, ಅಧಿಕ ರಕ್ತದೊತ್ತಡ ಸೇರಿ ವಿವಿಧ ಕಾರಣಗಳಿಂದ ತಾಯಂದಿರ ಮರಣ ವರದಿ ಆಗುತ್ತಿದ್ದು, ಶೇ 70 ರಷ್ಟು ಪ್ರಕರಣಗಳಲ್ಲಿ ಮರಣವನ್ನು ತಡೆಯಬಹುದಾಗಿದೆ. ಪ್ರಸವಪೂರ್ವ ಮತ್ತು ಪ್ರಸವ ನಂತರದ ಆರೈಕೆಯ ಗುಣಮಟ್ಟ ಸುಧಾರಿಸಲು ಕ್ರಮ ವಹಿಸಲಾಗಿದೆ ಎಂದು ಹೇಳಿದೆ.
- ಗರ್ಭಿಣಿಯರಲ್ಲಿ ಮತ್ತು ಪ್ರಸೂತಿ ವೇಳೆಯಲ್ಲಿನ ತೀವ್ರತರಹದ ರಕ್ತಸ್ರಾವ ತಡೆಗಟ್ಟಲು, ಚಿಕಿತ್ಸೆ ನೀಡಲು ಅಗತ್ಯ ಇರುವ ಉಪಕರಣಗಳ ಖರೀದಿ, ಹಾಸಿಗೆಗಳ ಹೆಚ್ಚಳ, ಆಸ್ಪತ್ರೆಗಳ ಮೇಲ್ದರ್ಜೆ, ಮೇಲ್ವಿಚಾರಣೆ ಸೌಲಭ್ಯ, ವಿಶ್ರಾಂತಿ ಕೊಠಡಿ, ಸಹಾಯವಾಣಿ ಸೇರಿ ವಿವಿಧ ವ್ಯವಸ್ಥೆಗೆ ಅನುದಾನ ಹಂಚಿಕೆ ಮಾಡಲಾಗಿದೆ.

## ❖ ‘₹50 ಸಾವಿರ ಕೋಟಿ ವಿದೇಶಿ ಹೂಡಿಕೆ’

**ಸಂದರ್ಭ: ದೇಶದ ಹಣಕಾಸು ಮತ್ತು ಬ್ಯಾಂಕಿಂಗ್ ವಲಯಗಳಲ್ಲಿ ₹50 ಸಾವಿರ ಕೋಟಿಗೂ ಹೆಚ್ಚು ಹೂಡಿಕೆ ಮಾಡುವ ಯೋಜನೆಯನ್ನು ವಿದೇಶಿ ಹೂಡಿಕೆದಾರರು ಕಳೆದ ಕೆಲವು ತಿಂಗಳುಗಳಲ್ಲಿ ಪ್ರಕಟಿಸಿದ್ದಾರೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪೀಯೂಷ್ ಗೋಯಲ್ ಹೇಳಿದ್ದಾರೆ.**

- ಜಾಗತಿಕ ಮಟ್ಟದಲ್ಲಿ ಹಲವು ಸವಾಲುಗಳು ಎದುರಾಗುತ್ತಿದ್ದರೂ ಭಾರತವು ಹೂಡಿಕೆಯ ಒಯಸಿಸ್‌ನಂತೆ ಕಾಣುತ್ತಿದೆ ಎಂದು ಅವರು ಸಂತಸ ವ್ಯಕ್ತಪಡಿಸಿದ್ದಾರೆ. ಇಂದು ಭಾರತವು ಆದ್ಯತೆಯ ಹೂಡಿಕೆ ತಾಣವಾಗಿ ಮುಂದೆ ಬರುತ್ತಿದೆ ಎಂದು ಹೇಳಿದ್ದಾರೆ.
- ಅಸ್ಥಿರತೆಯ ಕಾಲಘಟ್ಟದಲ್ಲಿಯೂ **ವಿದೇಶಿ ನೇರ ಬಂಡವಾಳ ಹೂಡಿಕೆಯ (ಎಫ್‌ಡಿಐ) ಹರಿವು ಚೆನ್ನಾಗಿಯೇ ಇದೆ. ಎಫ್‌ಡಿಐನಲ್ಲಿನ ಹೆಚ್ಚಳವು ದೇಶದ ಅರ್ಥ ವ್ಯವಸ್ಥೆಯು ಹೂಡಿಕೆದಾರರಿಗೆ ಹೆಚ್ಚೆಚ್ಚು ಆಕರ್ಷಕವಾಗಿ ಕಾಣುತ್ತಿದೆ** ಎಂಬುದನ್ನು ಹೇಳುತ್ತಿದೆ ಎಂದು ಕೂಡ ಅವರು ಅಭಿಪ್ರಾಯಪಟ್ಟಿದ್ದಾರೆ.

## ❖ ಏಷ್ಯನ್ ಯೂತ್ ಗೇಮ್ಸ್: ಭಾರತಕ್ಕೆ ಎರಡು ಪದಕ

**ಸಂದರ್ಭ: ಹದಿನಾಲ್ಕು ವರ್ಷದ ಕನಿಷ್ಕಾ ಬಿಧುರಿ ಮತ್ತು ಅರವಿಂದ್ ಅವರು ಏಷ್ಯನ್ ಯೂತ್ ಗೇಮ್ಸ್‌ನ ಕುರಾಶ್ ಸ್ಪರ್ಧೆಯಲ್ಲಿ ಕ್ರಮವಾಗಿ ಬೆಳ್ಳಿ ಮತ್ತು ಕಂಚಿನ ಪದಕಗಳನ್ನು ಗೆದ್ದರು.**

- ಕನಿಷ್ಕಾ ಅವರು ಬಾಲಕಿಯರ 52 ಕೆ.ಜಿ. ವಿಭಾಗದ ಫೈನಲ್‌ನಲ್ಲಿ 0–3ರಿಂದ ಉಜ್ಬೇಕಿಸ್ತಾನದ ಕರಿಮೋವಾ ಮುಬಿನಾಬೋನುಗೆ ಅವರಿಗೆ ಮಣಿದು, ಬೆಳ್ಳಿ ಪದಕ ತಮ್ಮದಾಗಿಸಿಕೊಂಡರು.
- ಇದಕ್ಕೂ ಮೊದಲು ಸೆಮಿಫೈನಲ್ ನಲ್ಲಿ ಕನಿಷ್ಕಾ 10–0 ಅಂತರದಿಂದ ಜಲಲೋದ್ದೀನ್ ಸೆಟಾಯೇಶ್ ವಿರುದ್ಧ ಗೆದ್ದು ಪ್ರಶಸ್ತಿ ಸುತ್ತು ಪ್ರವೇಶಿಸಿದ್ದರು. ಕ್ವಾರ್ಟರ್ ಫೈನಲ್‌ನಲ್ಲಿ ಥಾಯ್ಲೆಂಡ್‌ನ ಖುಂಡಿ ವಾರಾಚಯಾ ಎದುರು ಗೆಲುವು ಸಾಧಿಸಿದ್ದರು.
- ಬಾಲಕರ 83 ಕೆ.ಜಿ. ವಿಭಾಗದಲ್ಲಿ ಅರವಿಂದ ಅವರು ಕಂಚಿನ ಪದಕದ ಹೋರಾಟದಲ್ಲಿ 10–0ಯಿಂದ ದವ್ಲಾಟ್ಬೋಡಾ ವಿರುದ್ಧ ಗೆಲುವು ಸಾಧಿಸಿದರು. ಸೆಮಿಫೈನಲ್‌ನಲ್ಲಿ ಅರವಿಂದ 0–10ರಿಂದ ಉಜ್ಬೇಕಿಸ್ತಾನದ ಗೋಲಿಬೊವ್ ಶೋಹ್ರಾ ಹೋನ್ ವಿರುದ್ಧ ಸೋತಿದ್ದರು.
- 15 ವರ್ಷದ ಖುಷಿ ಭಾನುವಾರ ಬಾಲಕಿಯರ 70 ಕೆ.ಜಿ. ಕುರಾಶ್ ಸ್ಪರ್ಧೆಯಲ್ಲಿ ಕಂಚಿನ ಪದಕದೊಂದಿಗೆ ಭಾರತದ ಪರ ಮೊದಲ ಪದಕ ಗೆದ್ದಿದ್ದರು.
- ಇದೇ 31ರವರೆಗೆ ನಡೆಯಲಿರುವ ಕೂಟದಲ್ಲಿ 222 ಮಂದಿಯ ಭಾರತ ಅಥ್ಲೀಟುಗಳ ತಂಡ ಭಾಗವಹಿಸುತ್ತಿದೆ. ಇದರಲ್ಲಿ ಅರ್ಧಕ್ಕೂ ಹೆಚ್ಚು ಮಂದಿ ಮಹಿಳೆಯರಿದ್ದಾರೆ.
- ಒಲಿಂಪಿಕ್ ಪದಕ ವಿಜೇತ ಕುಸ್ತಿಪಟು ಯೋಗೇಶ್ವರ ದತ್ ಅವರು ತಂಡದ ಷೆಫ್-ಡಿ- ಮಿಷನ್ ಆಗಿದ್ದಾರೆ.

## ❖ ವಿಷವನ್ನು ಸೋಸೋಣ ಬನ್ನಿ!

**ಸಂದರ್ಭ: ಪರಿಸರ ಸಮಸ್ಯೆಗಳಲ್ಲಿ ಕುಡಿಯುವ ನೀರಿನ ಮಾಲಿನ್ಯ ಹಾಗೂ ಕೊಳಚೆ ನೀರಿನ ಸಂಸ್ಕರಣೆ ಪ್ರಮುಖವಾದವು. ನದಿ, ಕೊಳ, ಕೆರೆ, ಸಾಗರಗಳಲ್ಲದೆ, ಅಂತರ್ಜಲಮೂಲಗಳೂ ಮಲಿನವಾಗಿವೆ. ಈ ಮಾಲಿನ್ಯಗಳಲ್ಲಿ 'ಪರ್‌ಫ್ಲೂರೋಆಲ್ಕೈಲ್' ನ ಮಾಲಿನ್ಯವೂ ಒಂದು.**

- ನಾವು ನಿತ್ಯವೂ ಬಳಸುವ ಹಲವಾರು ವಸ್ತುಗಳಿಂದ ಸೋರುವ ಈ ಬಗೆಯ ರಾಸಾಯನಿಕಗಳು ಬಡಪೆಟ್ಟಿಗೆ ನಾಶವಾಗುವುದಿಲ್ಲ. ಇಂತಹ ಶಾಶ್ವತ ಮಲಿನಕಗಳನ್ನೂ ನೀರಿನಿಂದ ಹೊರ ತೆಗೆದು ಶುಚಿಗೊಳಿಸುವ ಹೊಸ ವಿಧಾನವೊಂದನ್ನು ದಕ್ಷಿಣ ಕೊರಿಯಾದ ಕೊರಿಯಾ ಅಡ್ವಾನ್ಸಡ್ ಇನ್ ಸ್ಟಿಟ್ಯೂಟ್ ಆಫ್ ಸೈನ್ಸ್ ಆ್ಯಂಡ್ ಟೆಕ್ನಾಲಜಿ ಸಂಸ್ಥೆಯ ಸೋಟೆ ಕಾಂಗ್ ಮತ್ತು ಸಂಗಡಿಗರು ರೂಪಿಸಿದ್ದಾರಂತೆ.
- ನೀರು ಹಾಗೂ ಕೊಳಚೆ ನೀರಿನಲ್ಲಿ ಇರುವ ಪರ್‌ಫ್ಲೂರೋಆಲ್ಕೈಲ್ ಹಾಗೂ ಪಾಲಿಫ್ಲೂರೋಆಲ್ಕೈಲ್ ರಾಸಾಯನಿಕಗಳನ್ನು ಸಾವಿರ ಪಟ್ಟು ಹೆಚ್ಚು ಹಾಗೂ ನೂರು ಪಟ್ಟು ವೇಗವಾಗಿ ಈ ವಿಧಾನ ಶುಚಿಗೊಳಿಸಲಿದೆ.
- **'ಪರ್‌ಫ್ಲೂರೋಆಲ್ಕೈಲ್' ಹಾಗೂ 'ಪಾಲಿಫ್ಲೂರೋ ಆಲ್ಕೈಲ್'** ಎನ್ನುವವು ವಿಶಿಷ್ಟ ರಾಸಾಯನಿಕಗಳು. 'ಪಿಎಫ್ಎ' ಎಂದು ಚುಟುಕಾಗಿ ಕರೆಸಿಕೊಳ್ಳುವ ಇವು ಫ್ಲೂರೀನಿನ ಜೊತೆಗೆ ಇಥಿಲೀನಿನಂತಹ ಅಣುಗಳು ಬೆಸೆದುಕೊಂಡು ರೂಪುಗೊಂಡ ರಾಸಾಯನಿಕಗಳ ವರ್ಗ.
- ಈ ವರ್ಗದಲ್ಲಿರುವ ರಾಸಾಯನಿಕಗಳು ನೀರಿನಂತಹ ದ್ರವಗಳಿಂದ, ಗಟ್ಟಿಯಾದ ಅಂಟುಗಳವರೆಗೂ ಹಲವು ರೀತಿಯಲ್ಲಿ ರೂಪುಗೊಳ್ಳಬಲ್ಲವು. ನಾವು ನಿತ್ಯವೂ ಬಳಸುವ ಹಲವಾರು ವಸ್ತುಗಳಲ್ಲಿ ಇವು ಬೆರೆತಿರುತ್ತವೆ. ಉದಾಹರಣೆಗೆ, ಅಡುಗೆಮನೆಯಲ್ಲಿ ಬಳಸುವ ನಾನ್ ಸ್ಟಿಕ್ ಪಾತ್ರೆಗಳಿಗೆ ಹಚ್ಚಿರುವ ನಯವಾದ ಲೇಪಗಳಲ್ಲಿ, ಚಾಟ್ ಅಂಗಡಿಗಳಿಂದ ತರುವ ತಿನಿಸುಗಳನ್ನು ಪ್ಯಾಕ್ ಮಾಡಿದ ಪೇಪರ್ ಪ್ಯಾಕಿನ ಒಳಭಾಗದಲ್ಲಿನ ತೇವ ಅಂಟದ ನಯವಾದ ಲೇಪಗಳಲ್ಲಿ, ಕಲೆಗಳು ಹತ್ತದಂತಹ ನೆಲಹಾಸು

Dr. Rajkumar's KAS Academy

ಕಂಬಳಿ, ಉಡುಪುಗಳಲ್ಲಿ, ನೀರಿನ ಕೊಳವೆಗಳನ್ನು ಅಂಟಿಸುವ ಗೋಂದುಗಳಲ್ಲಿ, ಬೆಂಕಿಯನ್ನು ಆರಿಸುವ ಫೋಮುಗಳಲ್ಲಿ, ಎಲೆಕ್ಟ್ರಾನಿಕ್ ಸಾಧನಗಳಲ್ಲಿ ಈ ವರ್ಗದ ರಾಸಾಯನಿಕಗಳು ಬಳಕೆಯಾಗುತ್ತವೆ.

- ಇಷ್ಟೊಂದು ಉಪಯುಕ್ತವಾಗಿರುವ ಈ ರಾಸಾಯನಿಕಗಳಲ್ಲೊಂದು ದೋಷವಿದೆ. ಇವು ಒಮ್ಮೆ ನೀರು-ಮಣ್ಣುಗಳನ್ನು ಸೇರಿದರೆ ಹಾಗೆಯೇ ಉಳಿದುಬಿಡುತ್ತವೆ. ಬೇರೆ ವಸ್ತುಗಳು ಬಿಸಿಲು, ನೀರು, ಆಕ್ಸಿಜನ್ ನಿಂದಾಗಿ ಶಿಥಿಲವಾಗಬಹುದು. ಆದರೆ ಪರ್‌ಫ್ಲೂರೋಆಲ್ಕೈಗಳು ಹಾಗಲ್ಲ. ಇವು ಸುಲಭವಾಗಿ ಬೇರೆ ರಾಸಾಯನಿಗಳ ಜೊತೆಗೆ ಪ್ರತಿಕ್ರಿಯಿಸುವುದಿಲ್ಲ, ಕೊಳೆಯುವುದಿಲ್ಲ, ಸುಟ್ಟರೆ ಬೂದಿಯೂ ಆಗುವುದಿಲ್ಲ. ಹೀಗಾಗಿ ನಿತ್ಯ ಬಳಸುವ ಎಲ್ಲ ವಸ್ತುಗಳಿಂದಲೂ ಸ್ವಲ್ಪ, ಸ್ವಲ್ಪವೇ ಸೋರಿ ಎಲ್ಲ ಜಲಮೂಲಗಳಲ್ಲೂ, ಆಹಾರಮೂಲ ಗಳಲ್ಲಿಯೂ ಬೆರೆತಿರುತ್ತವೆ.
- ಮಾಲಿನ್ಯವೊಂದೇ ಸಮಸ್ಯೆ ಅಲ್ಲ. ಮಾಲಿನ್ಯದಿಂದ ಹೊರಸೂಸುವ ರಾಸಾಯನಿಕಗಳು ದೇಹದ ಮೇಲೆ ದುಷ್ಪರಿಣಾಮಗಳನ್ನು ಬೀರುತ್ತವೆ ಎನ್ನುವುದು ಆತಂಕದ ವಿಷಯ. ಪರ್‌ಫ್ಲೂರೋಆಲ್ಕೈಲುಗಳ ಸೇವನೆಯಿಂದಾಗಿ ಲಿವರ್‌ನ ಚಟುವಟಿಕೆಗಳಲ್ಲಿ ವ್ಯತ್ಯಾಸ ಉಂಟಾಗಬಹುದು. ದೇಹದ ರೋಗನಿರೋಧಕ ಶಕ್ತಿ ಕುಗ್ಗಬಹುದು. ಕೆಲವು ಕ್ಯಾನ್ಸರ್‌ಗಳು ಕೂಡ ಉಂಟಾಗುತ್ತವೆಂದು ಸುಳಿವುಗಳು ತಿಳಿಸಿವೆ. ಅಮೆರಿಕದಲ್ಲಿ ಹತ್ತು ವರ್ಷಗಳ ಹಿಂದೆ ನಡೆದ ಅಧ್ಯಯನವೊಂದು, ಒಂದು ಬಗೆಯ ಲ್ಯೂಕೀಮಿಯ ಹಾಗೂ ವಿಲ್ಮ್ಸ್ ಟ್ಯೂಮರ್ ಎನ್ನುವ ಕ್ಯಾನ್ಸರಿಗೆ ತುತ್ತಾಗಿದ್ದ ಎಳೆಯರ ತಾಯಂದಿರು ಬಸುರಾಗಿದ್ದಾಗ ಪರ್‌ಫ್ಲೂರೋಆಕ್ಟೇನ್ ಸಲ್ಫೂನಿಕ್ ಆಮ್ಲ ಹಾಗೂ ಪರ್‌ಫ್ಲೂರೋಆಕ್ಟನಾಯಿಕ್ ಆಮ್ಲಗಳ ಪ್ರಮಾಣ ಹೆಚ್ಚಿದ್ದ ನೀರನ್ನು ಸೇವಿಸಿದ್ದರು ಎಂದು ತಿಳಿಸಿದೆ.


- ಅತ್ಯಲ್ಪ ಪ್ರಮಾಣದಲ್ಲಿಯೂ ಇಂತಹ ರಾಸಾಯನಿಕಗಳ ಸೇವನೆ ಅಪಾಯಕಾರಿಯಾಗಿದ್ದರಿಂದ ಕುಡಿಯುವ ನೀರಿನಲ್ಲಿ ಅವುಗಳ ಪ್ರಮಾಣವನ್ನು ಮಿತಿಗೊಳಿಸಲಾಗಿದೆ. ಪಿಎಫ್‌ಎ ಇರುವಂತಹ ನೀರನ್ನು ಶುಚಿಗೊಳಿಸಿ ಸರಬರಾಜು ಮಾಡಬೇಕೆನ್ನುವ ನಿಯಮವೂ ಇದೆ. ಈ ರಾಸಾಯನಿಕಗಳು ನೀರಿನ ಮೂಲಕ ಹಸುವಿನ ಹಾಲು, ತಾಯಿಯ ಹಾಲಿನಲ್ಲಿಯೂ ಸೇರಿಕೊಳ್ಳುತ್ತವೆ. ಮಕ್ಕಳು ಹಾಗೂ ದೊಡ್ಡವರ ರಕ್ತದಲ್ಲಿಯೂ ಇವುಗಳನ್ನು ಪತ್ತೆ ಮಾಡಲಾಗಿದೆ.
- ಕುಡಿಯುವ ನೀರನ್ನು ಈ ವಿಷವಸ್ತುಗಳಿಂದ ಮುಕ್ತಗೊಳಿಸಲು ಹಲವು ವಿಧಾನಗಳನ್ನು ಬಳಸಲಾಗುತ್ತಿದೆ. ಪ್ರಮುಖವಾಗಿ ಆಕ್ಟಿವೇಟೆಡ್ ಕಾರ್ಬನ್ ಅಥವಾ ಅತಿ ಕ್ರಿಯಾಶೀಲವಾದ ಇದ್ದಿಲಿನಿಂದ ಅವನ್ನು ಪ್ರತ್ಯೇಕಿಸಬಹುದು. ಅಥವಾ ರಿವರ್ಸ್ ಆಸ್ಮಾಸಿಸ್ ತಂತ್ರದ ಮೂಲಕ, ಅತಿ ಸೂಕ್ಷ್ಮವಾದ ಕೃತಕ ಪೊರೆಗಳನ್ನು ಬಳಸಿ ನೀರನ್ನು ಶುಚಿ ಗೊಳಿಸಬಹುದು. ಆದರೆ ಇವು ಅಲ್ಪ ಪ್ರಮಾಣದಲ್ಲಿ ಆಗಬಹುದೇ ಹೊರತು, ಕೊಳಚೆ ನೀರಿನಲ್ಲಿರುವಷ್ಟು ಪ್ರಮಾಣದ ಪಿಎಫ್‌ಎಗಳನ್ನು ಈ ವಿಧಾನಗಳಿಂದ ಶುಚಿಗೊಳಿಸುವುದು ಕಷ್ಟ. ಈ ನಿಟ್ಟಿನಲ್ಲಿ ಹೊಸದೊಂದು ವಿಧಾನದ ಅಗತ್ಯವಿತ್ತು. ಕಾಂಗ್ ಮತ್ತು ಸಂಗಡಿಗರು ಅದನ್ನು ಈಗ ಒದಗಿಸಿದ್ದಾರೆ.
- ಕಾಂಗ್ ತಂಡವು ತಾಮ್ರ ಹಾಗೂ ಅಲ್ಯುಮಿನಿಯಂ ಲೋಹಗಳ ನೈಟ್ರೇಟ್‌ಗಳು ಹೈಡ್ರಾಕ್ಸೈಡ್‌ಗಳ ಜೊತೆಗೆ ಬೆಸೆದುಕೊಂಡು, ಪದರ ಪದರವಾಗಿ ಇರುವಂತಹ ವಿಶೇಷ ರಾಸಾಯ ನಿಕವನ್ನು ತಯಾರಿಸಿದ್ದಾರೆ. ಈ ವರ್ಷ ರಸಾಯನಶಾಸ್ತ್ರದ ನೊಬೆಲ್ ಪಾರಿತೋಷಕವನ್ನು ಗಳಿಸಿದ ಸಂಶೋಧನೆಗಳ ಫಲ ಇದು ಎನ್ನಬಹುದು. ಈ ಲೋಹ ಹಾಗೂ ಸಾವಯವ ಬೆರೆತ ರಾಸಾಯನಿಕಗಳಲ್ಲಿ ಆಕ್ಟಿವೇಟೆಡ್ ಕಾರ್ಬನ್‌ನಲ್ಲಿ ಇರುವುದ ಕ್ಕಿಂತಲೂ ಹೆಚ್ಚು ರಂಧ್ರಗಳೂ, ಪಿಎಫ್‌ಎ ಅಣುಗಳು ಕೂಡಲು ಅವಕಾಶಗಳೂ ಇರುತ್ತವೆ. ಪ್ರತಿ ಗ್ರಾಂ ವಸ್ತುವೂ ಗರಿಷ್ಠ ಸುಮಾರು 1.72 ಗ್ರಾಂನಷ್ಟು ಪಿಎಫ್‌ಎಯನ್ನು ಅಂಟಿಸಿಕೊಳ್ಳಬಹುದು. ಅದುವೂ ಇದನ್ನು ಬಿಸಿ ಮಾಡಬೇಕಿಲ್ಲ. ನೀರಿನ ಆಮ್ಲೀಯತೆಯಲ್ಲಿಯೇ ಇಷ್ಟು ಪಿಎಫ್‌ಎಯನ್ನು ಅದು ಹೀರಿಕೊಳ್ಳುತ್ತದೆ. ಅಂಟಿಕೊಂಡ ಪಿಎಫ್‌ಎಯನ್ನು ಕಾಯಿಸಿ ಬೇರ್ಪಡಿಸಿ, ಅದರಲ್ಲಿರುವ ಫ್ಲೂರೀನನ್ನು ಕಿತ್ತೊಗೆದು, ಸುರಕ್ಷಿತ ರಾಸಾಯನಿಕವನ್ನಾಗಿಸಬಹುದು. ಹೀಗೆ ಕೇವಲ ನೀರನ್ನು ಶುಚಿಗೊಳಿಸುವುದಷ್ಟೆ ಅಲ್ಲ, ಪಿಎಫ್‌ಎಯನ್ನೂ ನಾಶಗೊಳಿಸುವ ವಿಧಾನ ಇದು ಎನ್ನುತ್ತಾರೆ, ಕಾಂಗ್.
- ಪಿಎಫ್‌ಎಯನ್ನು ಕಿತ್ತೊಗೆದ ನಂತರ ಅದು ಮತ್ತೆ ಮೊದಲಿನಂತೆಯೇ ಆಗುತ್ತದೆ. ಇನ್ನಷ್ಟು ಪಿಎಫ್‌ಎ ಅಂಟಿಸಿಕೊಳ್ಳಲು ಸಿದ್ಧವಾಗುತ್ತದೆ. ಹೀಗೆ ಆರೇಳು ಬಾರಿ ಈ ವಸ್ತುವನ್ನು ಬಳಸಿ ನೀರನ್ನು

Dr. Rajkumar IAS/KAS Academy

ಶುಚಿಗೊಳಿಸಬಹುದು. ತಾವೇ ನಿರ್ದಿಷ್ಟ ಪ್ರಮಾಣದ ಪಿಎಫ್ಎ ಬೆರೆಸಿ ಮಲಿನಗೊಳಿಸಿದ ನೀರನ್ನು ಈ ವಸ್ತುವಿನ ಮೂಲಕ ಸೋಸಿ, ಎಷ್ಟು ಶುಚಿಗೊಳ್ಳುತ್ತದೆ ಎಂದು ಗಮನಿಸಿದ್ದಾರೆ. ಒಂದು ನಿಮಿಷದಲ್ಲಿ ಅರ್ಧ ಲೀಟರ್ ನೀರಿನಿಂದ ಏಳುನೂರು ಮಿಲಿಗ್ರಾಮಿನಷ್ಟು ಪಿಎಫ್ಎಯನ್ನು ಈ ವಸ್ತು ಶುಚಿಗೊಳಿಸುತ್ತದೆ. ಹೀಗೆ ಸೋಸುವ ಹಾಗೂ ಅನಂತರ ಬಿಸಿ ಮಾಡಿ ಪಿಎಫ್ಎ ಬೇರ್ಪಡಿಸುವ ಮೂಲಕ, ನಿರಂತರವಾಗಿ ನೀರನ್ನು ಶುಚಿಗೊಳಿಸಬಹುದು.

## ❖ ಓದಿನ ಒಘಕ್ಕೆ ಒಗ್ಗೊಟ್ಟ ಓಮರ್ ಯಾಘಿ

**ಸಂದರ್ಭ: ಅದು ನಮ್ಮದೇ ಕಾಶ್ಮೀರವಾಗಲೀ, ದೂರದ ಗಾಜಾ ಆಗಲೀ, ಪರ-ವಿರೋಧಗಳ ನಡುವೆ, ಕುತಂತ್ರ-ಕುಯುಕ್ತಿಗಳ ನಡುವೆ, ಯಾರದ್ದೋ ಹಟಕ್ಕೆ, ಯಾರದ್ದೋ ಮೂಲಭೂತವಾದಕ್ಕೆ ಸಿಲುಕಿ ಸಮಸ್ಯೆ ಅನುಭವಿಸುವವರು ಸಾಮಾನ್ಯ ಜನರೇ.**




- ಗಾಜಾದಲ್ಲಿ ಈಗಿರುವಂತಹ ಯುದ್ಧದ ಪರಿಸ್ಥಿತಿಯಲ್ಲಿಯೇ ಗುಳೇ ಹೊರಟ ಕುಟುಂಬದ ಸಾಮಾನ್ಯ ಹುಡುಗನೊಬ್ಬ, ಇಂದು ರಸಾಯನnವಿಜ್ಞಾನದಲ್ಲಿ ನೊಬೆಲ್ ಪ್ರಶಸ್ತಿ ಪಡೆದ ಕಥೆಯಿದು.
- **ಈ ವರ್ಷದ ರಸಾಯನವಿಜ್ಞಾನ ನೊಬೆಲ್ ಸಿಕ್ಕಿದ್ದು 'ಲೋಹ-ಸಾವಯವ ಚೌಕಟ್ಟು' ಗಳ ಬಗೆಗಿನ ಸಂಶೋಧನೆ**ಗೆ ಎಂಬುದು ನಿಮಗೀಗಾಲೇ ತಿಳಿದಿರಬಹುದು. ಅದಕ್ಕೆ **ಮುನ್ನುಡಿ ಬರೆದದ್ದು ರಿಚರ್ಡ್ ರಾಬ್ಸನ್**. ಆದರೆ ಅವರ ಸಿದ್ಧಾಂತಕ್ಕೆ ಅನ್ವಯಿಕತೆ ಮತ್ತು ಪ್ರಾಯೋಗಿಕತೆಗಳನ್ನು ತಂದದ್ದು ಓಮರ್ ಯಾಘಿ ಮತ್ತು ಸುಸುಮು ಕಿಟಾಗವಾ ಎಂಬ ಇಬ್ಬರು ರಸಾಯನವಿಜ್ಞಾನಿಗಳು. ಓಮರ್ ಯಾಘಿ ಅವರ ಬದುಕು ವಿಜ್ಞಾನದ ವಿದ್ಯಾರ್ಥಿಗಳಿಗೆ ಮಾತ್ರವಲ್ಲ, ಮುಂದಿನ ಪೀಳಿಗೆಗೂ ಸ್ಫೂರ್ತಿದಾಯಕ.
- **ಓಮರ್ ಯಾಘಿಯವರು 1965ರ ಫೆಬ್ರುವರಿ 9ರಂದು ಪ್ಯಾಲೆಸ್ತೀನ್ ಮೂಲದ ಯುದ್ಧನಿರಾಶ್ರಿತ ಕುಟುಂಬದಲ್ಲಿ ಜನಿಸಿದರು**. ವಿದ್ಯುತ್ತು, ಸ್ವಚ್ಛವಾದ ಕುಡಿಯುವ ನೀರಿನಂತಹ ಮೂಲಭೂತ ಸಂಪನ್ಮೂಲಗಳೂ ಲಭ್ಯವಿಲ್ಲದ ಪರಿಸ್ಥಿತಿಯಲ್ಲಿ ಓಮರ್ ತಮ್ಮ ಬಾಲ್ಯ ಕಳೆದರು. ದನದ ಕೊಟ್ಟಿಗೆಯಲ್ಲಿ ಹತ್ತಾರು ಮಕ್ಕಳ ಜೊತೆ ಮಲಗಬೇಕಿದ್ದ ಪರಿಸ್ಥಿತಿ. ಇಂಥ ಕಷ್ಟಗಳ ನಡುವೆಯೇ ತಮ್ಮ ತಂದೆಯ ಪ್ರೋತ್ಸಾಹ ಓಮರ್ ಅವರನ್ನು ಓದಿನ ಕಡೆಗೆ ಹೊರಳಿಸಿತು. ಕೆಳಕ್ಕೆಳೆಯುವ ಕೆಸರಿನೊಳಗೆ ಇದ್ದುಕೊಂಡೂ ಮೇಲಕ್ಕೇಳುವ ಉಮೇದಿಯಲ್ಲಿ ಅರಳುವ ಕಮಲದಂತೆ, 'ತಾನು ಓದಬೇಕು' ಎಂಬ ಹಂಬಲ ಓಮರ್ ಅವರನ್ನು ಇತರರಿಗಿಂತ ಭಿನ್ನವಾಗಿ ಬೆಳೆಯುವಂತೆ ಮಾಡಿತು. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದ ಹಂತದಲ್ಲೇ ವಿಜ್ಞಾನದ ಬಗ್ಗೆ ಮತ್ತು ಕಲಿಕೆಯ ಬಗ್ಗೆ ಇವರಿಗಿದ್ದ ಆಸಕ್ತಿಯ ಮೇರೆಗೆ, ಓಮರ್ ಅವರ ತಂದೆ ಈ 15 ವರ್ಷದ ಹುಡುಗನನ್ನು ಅಮೆರಿಕಕ್ಕೆ ಮುಟ್ಟಿಸಿದರು. ಕಷ್ಟದ ಬದುಕನ್ನೇ ಉಂಡು ಬಂದಿದ್ದ ಓಮರ್ ಅವರಿಗೆ, ಅಮೆರಿಕದಲ್ಲಿ ದಿನನಿತ್ಯದ ಅನಿವಾರ್ಯ ಅಸೌಕರ್ಯಗಳು ಕಂಗೆಡಿಸಲಿಲ್ಲ. ಅವರ ಲಕ್ಷ್ಯವೇನಿದ್ದರೂ ಓದಿನ ಕಡೆಗೆ, ರಸಾಯನವಿಜ್ಞಾನದ ಅದ್ಭುತಲೋಕದ ಕಡೆಗೆ. ಹಡ್ಸನ್ ವ್ಯಾಲಿ ಸಾಮುದಾಯಿಕ ಕಾಲೇಜು, ನ್ಯೂಯಾರ್ಕ್ ರಾಜ್ಯ ವಿಶ್ವವಿದ್ಯಾಲಯದಲ್ಲಿ ಶಿಕ್ಷಣವನ್ನು ಮುಂದುವರೆಸುತ್ತಾ, ಇಲಿನಾಯ್ ವಿಶ್ವವಿದ್ಯಾಲಯದಲ್ಲಿ ರಸಾಯನ ವಿಜ್ಞಾನದ ಪದವಿ ಪಡೆದರು. ನೀರನ್ನು ಹೊರತು ಪಡಿಸಿ, ಇತರ ಮಾಧ್ಯಮದಲ್ಲಿ 'ಪಾಲಿ-ಆಕ್ಸೋವಾನಡೇಟ್' ಗಳ ಸಂಶ್ಲೇಷಣೆ, ರಚನೆ, ರಾಸಾಯನಿಕತೆಯ ಸಾಧ್ಯತೆಯ ಬಗ್ಗೆ ಸಂಶೋಧನೆ ನಡೆಸಿ 1990ರಲ್ಲಿ ಪಿಎಚ್‌ಡಿ ಪದವಿಯನ್ನೂ ಪಡೆದರು.
- ಅರಿಝೋನಾ ವಿಶ್ವವಿದ್ಯಾಲಯದಲ್ಲಿ ಪ್ರಾಧ್ಯಾಪಕರಾಗಿ ತಮ್ಮ ವೃತ್ತಿಯನ್ನು ಆರಂಭಿಸಿದ ಓಮರ್, ನಂತರ ಮಿಶಿಗನ್ ವಿಶ್ವವಿದ್ಯಾಲಯ, ಕ್ಯಾಲಿಫೋರ್ನಿಯಾ ವಿಶ್ವವಿದ್ಯಾಲಯದಂತಹ ಅನೇಕ ಪ್ರತಿಷ್ಠಿತ ವಿದ್ಯಾಲಯಗಳ ಭಾಗವಾಗಿ, ಪ್ರಾಧ್ಯಾಪಕರಾಗಿ ಮಾತ್ರವಲ್ಲದೇ, ಕಮಿಟಿಗಳ, ಅಧ್ಯಯನಪೀಠಗಳ ಅಧ್ಯಕ್ಷರಾಗಿ, ನಿರ್ದೇಶಕರಾಗಿ ಕೂಡ ಕಾರ್ಯ ನಿರ್ವಹಿಸಿದರು.

- ಒಮರ್ ಅವರು ಹೆಚ್ಚು ಸಂಶೋಧನೆ ನಡೆಸಿದ್ದು, **'ರೆಟಿಕ್ಯುಲಾರ್ ಕೆಮಿಸ್ಟ್ರಿ'** ಎಂಬ ರಸಾಯನವಿಜ್ಞಾನದ ಶಾಖೆಯಲ್ಲಿ. ವಿವಿಧ ಸಾವಯವ ಸಂಯುಕ್ತ ಪದಾರ್ಥಗಳಿಗೆ, ಲೋಹದ ಸಂಯುಕ್ತಗಳಿಗೆ ಪರಮಾಣುಗಳನ್ನು ಸೇರಿಸುವ, ರಾಸಾಯನಿಕ ಬಂಧಗಳನ್ನು ರಚಿಸುವ, ಹೊಸ ರಚನೆಗಳನ್ನು ಸೃಜಿಸುವ ಕ್ರಿಯಾತ್ಮಕ ಶಾಖೆಯಿದು. ಇಲ್ಲಿ ಮೂರು ಆಯಾಮದ ಸ್ಫಟಿಕಗಳ ರಚನೆಗೆ ಪ್ರಾಶಸ್ತ್ಯ; ಅದೇ ನಿಟ್ಟಿನಲ್ಲಿ ಸಂಶೋಧನೆಯಲ್ಲಿ ತೊಡಗಿದ್ದ ಒಮರ್ ಅವರನ್ನು ನೊಬೆಲ್ ಪ್ರಶಸ್ತಿಯ ಹೊಸ್ತಿಲಿಗೆ ತಂದು ನಿಲ್ಲಿಸಿದ್ದು, ಲೋಹ-ಸಾವಯವ ಚೌಕಟ್ಟುಗಳ ಧೃಡತೆಯ ಬಗ್ಗೆ ಅವರ ವಿಶಿಷ್ಟವಾದ ಅನ್ವೇಷಣೆಯೇ!
- ರಸಾಯನವಿಜ್ಞಾನದ ಭಾಷೆಯಲ್ಲಿ **'ಕೋಆರ್ಡಿನೇಶನ್ ಪಾಲಿಮರ್'** ಎಂಬ ಹೆಸರಿನಿಂದ ಗುರುತಿಸಲಾಗುವ ರಚನೆಗಳಿಗೆ ಭೌತಿಕ ದೃಢತೆ ತಂದುಕೊಡುವುದು ಕಷ್ಟದ ಮಾತೇ ಸರಿ. ಇಲ್ಲಿ ಲೋಹವೂ ಉಂಟು, ಸಾವಯವ ಗುಣ ತಂದುಕೊಡುವ ಇಂಗಾಲವೂ ಉಂಟು; ಜೊತೆಗೆ ಅನೇಕ ಅಯಾನುಗಳ, ಎಲೆಕ್ಟ್ರಾನುಗಳ ಕೊಡು-ಕೊಳ್ಳುವಿಕೆ, ಹಂಚಿಕೊಳ್ಳುವಿಕೆ ಮತ್ತು ಧನಾತ್ಮಕ-ಋಣಾತ್ಮಕ ಚಾರ್ಜ್‌ಗಳ ನರ್ತನ - ಇವೆಲ್ಲದರ ನಡುವೆ ರಾಸಾಯನಿಕ ಕ್ರಿಯಾತ್ಮಕತೆಗೂ ಮೀರಿ ಭೌತಿಕ ದೃಢತೆ ಅತಿ ಮುಖ್ಯವೆನಿಸುತ್ತದೆ. ಹೇಗೆಂದರೆ, ಫಳಫಳ ಪೈಂಟು, ಥಳ ಥಳ ಟೈಲ್ಸು, ಮಿರ ಮಿರ ಮಿಂಚುವ ಒಳಾಂಗಣ ವಿನ್ಯಾಸವೆಲ್ಲವೂ ಇದ್ದು ಮನೆಯ ಭೌತಿಕ ರಚನೆಗೆ, ಬುನಾದಿಗೆ, ಗೋಡೆಗೆ ಬಲವಿಲ್ಲದಿದ್ದರೆ ಪ್ರಯೋಜನವೇನು? ಹಾಗೆಯೇ, ಈ ಲೋಹ-ಸಾವಯವ ಚೌಕಟ್ಟುಗಳು ತಮ್ಮ ರಚನೆಯಿಂದ ಕೈಗಾರಿಕೆಗಳಲ್ಲಿ, ವೈದ್ಯಕೀಯ ಲೋಕದಲ್ಲಿ, ಪ್ರಯೋಗಾಲಯಗಳಲ್ಲಿ ಅನೇಕ ಅನ್ವಯಿಕೆಗಳನ್ನು ಸಾಧ್ಯವಾಗಿಸಬಹುದಾಗಿದ್ದರೂ, ಅದರ ಮೂಲಭೂತ ರಚನೆಗೆ ಭೌತಿಕವಾಗಿ ಬಲವಿಲ್ಲದಿಲ್ಲರೆ ಪ್ರಯೋಜನವೇನು?
- ಹೀಗಾಗಿ, ಒಮರ್ ಅವರು ಆ ಸಮಸ್ಯೆಯನ್ನು ಪರಿಹರಿಸಲು ಮೂರು ಮುಖ್ಯ ಬದಲಾವಣೆಗಳನ್ನು ತಂದರು. ಈ ಚೌಕಟ್ಟುಗಳನ್ನು ತಯಾರಿಸುವಾಗ, ಲೋಹ ಮತ್ತು ಕಾರ್ಬಾಕ್ಸಿಲೇಟ್ ಅಯಾನುಗಳ ನಡುವೆ ರಾಸಾಯನಿಕ ಬಂಧವನ್ನು ಗಟ್ಟಿಗೊಳಿಸಿದರು. ಸ್ಫಟಿಕೀಕರಣದ ವೇಳೆ ಹೆಚ್ಚುವರಿ ಆಧಾರ ಸ್ತಂಭಗಳಾಗಿ ಲೋಹ-ಕಾರ್ಬಾಕ್ಸಿಲೇಟ್ ಗುಂಪುಗಳನ್ನು ಬಳಸಿದರು. ಈ ಚೌಕಟ್ಟಿನೊಳಗಿರುವ ಪರಮಾಣುಗಳ, ಅಣುಗಳ ನಡುವೆ ಇರುವ ಅಂತರವು, ಹೆಚ್ಚು ರಂಧ್ರ ಮಯವಾಗಿರುವಂತೆ ನೋಡಿಕೊಂಡರು. ಈ ಮೂರೂ ಬದಲಾವಣೆಗಳು ಅಪರಿಮಿತ ಹೊಸ ಸಾಧ್ಯತೆಗಳಿಗೆ ಎಡೆಮಾಡಿಕೊಟ್ಟಿತು. ಇದರಿಂದಾಗಿ ರಿಚರ್ಡ್ ರಾಬ್ಸನ್ ಅವರ ಸಿದ್ಧಾಂತವು 3-ಡಿ ರೂಪವನ್ನು ಪಡೆದು, ಹೊಸ ಅನ್ವಯಿಕೆಗಳಿಗೆ ತೆರೆದುಕೊಂಡಿತು. ವಿಷಾನಿಲ ಸೋರುವಲ್ಲಿ ಅನಿಲದ ಅಣುಗಳನ್ನು ಹಿಡಿದಿಡಲು, ಬಿರುಬಿಸಿಲ ಮರಳುಗಾಡಲ್ಲಿ ಗಾಳಿಯಿಂದ ನೀರನ್ನು ತಯಾರಿಸಲು, ದೇಹದ ನಿರ್ದಿಷ್ಟ ಭಾಗಕ್ಕೆ ಔಷಧವನ್ನು ತಲುಪಿಸಲು ಸಹಾಯಕವಾದ ಲೋಹ-ಸಾವಯವ ಚೌಕಟ್ಟಿಗೆ ಒಮರ್ ಅವರ ಈ ಸಂಶೋಧನೆಯು ಬಲ ತಂದಿದೆ; ಆಧುನಿಕ ಮಾನವನ ಅನೇಕ ಸಮಸ್ಯೆಗಳಿಗೆ ಇದು ಪರಿಹಾರಗಳನ್ನೂ ತಂದಿದೆ.

## ❖ ಕಾಸರಗೋಡು ಚಿನ್ನಾಗೆ ಕಲಾಕಾರ್ ಪುರಸ್ಕಾರ

**ಸಂದರ್ಭ: ಕುಂದಾಪುರದ ಕಾರ್ವಾಲ್ ಮನೆತನ ಹಾಗೂ ಮಾಂಡ್ ಸೊಭಾಣ್ ಜಂಟಿಯಾಗಿ ನೀಡುವ 21ನೇ ವರ್ಷದ ಕಲಾಕಾರ್ ಪುರಸ್ಕಾರಕ್ಕೆ ಕಾಸರಗೋಡು ಚಿನ್ನಾ (ಶ್ರೀನಿವಾಸ ರಾವ್ ಎಸ್.) ಅವರನ್ನು ಆಯ್ಕೆ ಮಾಡಲಾಗಿದೆ.**

- ಪುರಸ್ಕಾರ ₹50 ಸಾವಿರ ನಗದು ಒಳಗೊಂಡಿದೆ. ನ.2ರಂದು ನಗರದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಮಾಂಡ್ ಸೊಭಾಣ್ ಅಧ್ಯಕ್ಷ ಲುವಿ ಜೆ. ಪಿಂಟೊ ತಿಳಿಸಿದ್ದಾರೆ.

## ❖ ರೂಪಾಯಿ ಮೌಲ್ಯ ಕುಸಿತ ತಡೆಯಲು 7.7 ಬಿಲಿಯನ್ ಡಾಲರ್ ಮಾರಾಟ

**ಸಂದರ್ಭ: ವಿನಿಮಯ ದರದ ಏರಿಳಿತವನ್ನು ನಿಯಂತ್ರಿಸಲು ಹಾಗೂ ಡಾಲರ್ ಎದುರು ರೂಪಾಯಿ ಮೌಲ್ಯ ಕುಸಿತವನ್ನು ತಡೆಯಲು ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಆಗಸ್ಟ್ ತಿಂಗಳಿನಲ್ಲಿ 7.7 ಬಿಲಿಯನ್ ಡಾಲರ್‌ಗಳನ್ನು ಮಾರಾಟ ಮಾಡಿದೆ. ಇದು ರೂಪಾಯಿ ಲೆಕ್ಕದಲ್ಲಿ ₹67,751 ಕೋಟಿ ಆಗುತ್ತದೆ.**

- ಈ ಡಾಲರ್ ಮಾರಾಟವು ಜುಲೈ ತಿಂಗಳಿಗೆ ಹೋಲಿಸಿದರೆ ಮೂರು ಪಟ್ಟು ಅಧಿಕ ಎಂದು ಆರ್‌ಬಿಐ ಬುಲೆಟಿನ್ ತಿಳಿಸಿದೆ. ಜುಲೈ ಮತ್ತು ಆಗಸ್ಟನಲ್ಲಿ ಆರ್‌ಬಿಐ ಡಾಲರ್‌ಗಳನ್ನು ಖರೀದಿಸಿಲ್ಲ ಎಂದು ಸಹ ತಿಳಿಸಿದೆ. ಆಗಸ್ಟನಲ್ಲಿ, ಡಾಲರ್ ಎದುರು ರೂಪಾಯಿ ಮೌಲ್ಯ ಶೇ 1.6ರಷ್ಟು ಕುಸಿದಿತ್ತು.
- ಹೆಚ್ಚಿದ ವ್ಯಾಪಾರ ಬಿಕ್ಕಟ್ಟು, ಜಾಗತಿಕ ಅನಿಶ್ಚಿತತೆ ಮತ್ತು ವಿದೇಶಿ ಬಂಡವಾಳದ ನಿರಂತರ ಹೊರಹರಿವಿನಿಂದ ರೂಪಾಯಿ ಮೌಲ್ಯ ಇಳಿಕೆಯಾಗಿದೆ.

## ❖ ಸಿಆರ್‌ಜೆಡ್ ಮಿತಿ ಕಡಿತ ಪ್ರಸ್ತಾವಕ್ಕೆ ವಿರೋಧ

**ಸಂದರ್ಭ: ದೇಶದ 'ಕರಾವಳಿ ನಿಯಂತ್ರಣ ವಲಯ' ದ(ಸಿಆರ್‌ಜೆಡ್) ಮಿತಿಯನ್ನು ಕಡಿತಗೊಳಿಸುವ ನೀತಿ ಆಯೋಗದ ಪ್ರಸ್ತಾವಕ್ಕೆ ಪರಿಸರ ಪರ ಗುಂಪುಗಳಿಂದ ತೀವ್ರ ಆಕ್ಷೇಪ ವ್ಯಕ್ತವಾಗಿದೆ. ಇದರ ಬೆನ್ನಲ್ಲೇ, ಪ್ರಧಾನಮಂತ್ರಿ ಕಚೇರಿಯು (ಪಿಎಂಒ) ಮಧ್ಯಪ್ರವೇಶಿಸಿದ್ದು, ಪರಿಸರ ಪರ ಸಂಘಟನೆಗಳು ಎತ್ತಿರುವ ಆಕ್ಷೇಪಗಳ ಕುರಿತು ಗಮನ ಹರಿಸುವಂತೆ ಕೇಂದ್ರ ಪರಿಸರ, ಅರಣ್ಯ ಹಾಗೂ ಹವಾಮಾನ ಬದಲಾವಣೆ ಸಚಿವಾಲಯಕ್ಕೆ ಸೂಚಿಸಿದೆ.**

- ಈ ವಿಚಾರವನ್ನು ಸಚಿವಾಲಯದ ಸಿಆರ್‌ಜೆಡ್ ಪರಿಣಾಮ ಮೌಲ್ಯಮಾಪನ ವಿಭಾಗಕ್ಕೆ ಶಿಫಾರಸು ಮಾಡಿರುವುದು ಪಿಎಂಒ ಪೋರ್ಟಲ್‌ನಿಂದ ತಿಳಿದುಬರುತ್ತದೆ.
- **ಕರಾವಳಿ ನಿಯಂತ್ರಣ ವಲಯದ ಮಿತಿಯನ್ನು ಈಗಿನ 500 ಮೀಟರ್‌ನಿಂದ 200 ಮೀಟರ್‌ಗೆ ಕಡಿತಗೊಳಿಸುವಂತೆ ನೀತಿ ಆಯೋಗ ಪ್ರಸ್ತಾವ ಮುಂದಿಟ್ಟಿದೆ. ಮುಂಬೈ** ಮೂಲದ ಪರಿಸರ ಸಂರಕ್ಷಣೆಗೆ ಹೋರಾಡುವ ಸಂಘಟನೆಗಳಾದ 'ನ್ಯಾಟ್‌ಕನೆಕ್ಟ್ ಫೌಂಡೇಷನ್' ಹಾಗೂ 'ಸಾಗರ ಶಕ್ತಿ', ಈ ಪ್ರಸ್ತಾವಕ್ಕೆ ಭಾರಿ ವಿರೋಧ ವ್ಯಕ್ತಪಡಿಸಿವೆ.
- 'ನೀತಿ ಆಯೋಗದ ಈ ಶಿಫಾರಸು ದೇಶದ ಕರಾವಳಿಗಳ ಪರಿಸರಕ್ಕೆ ಮಾರಕ' ಎಂದು ಹೇಳಿರುವ ಈ ಸಂಘಟನೆಗಳು, ಈ ವಿಚಾರದಲ್ಲಿ ಪ್ರಧಾನಿ ನರೇಂದ್ರ ಮೋದಿ ಕೂಡಲೇ ಮಧ್ಯಪ್ರವೇಶಿಸಬೇಕು ಹಾಗೂ ಆಯೋಗದ ಶಿಫಾರಸನ್ನು ತಿರಸ್ಕರಿಸ ಬೇಕು ಎಂದು ಆಗ್ರಹಿಸಿವೆ.
- **'ಕರಾವಳಿ ನಿಯಂತ್ರಣ ವಲಯದ ಮಿತಿಯು ಸದ್ಯ 'ಹೈ ಟೈಡ್ ಲೈನ್'(ಎಚ್‌ಟಿಎಲ್)ನಿಂದ 500 ಮೀಟರ್ ಇದೆ. ಇದನ್ನು 200 ಮೀಟರ್‌ಗೆ ಕಡಿತಗೊಳಿಸಬೇಕು' ಎಂದು ನೀತಿ ಆಯೋಗದ ಸದಸ್ಯ ರಾಜೀವ್ ಗೌಬಾ ನೇತೃತ್ವದ ಉನ್ನತಾಧಿಕಾರ ಸಮಿತಿಯು ಸಲಹೆ ನೀಡಿತ್ತು.**
- **'ಈಗ ಇರುವ ಸಿಆರ್‌ಜೆಡ್ ಮಿತಿಯು ಅಗತ್ಯಕ್ಕಿಂತ ಹೆಚ್ಚು ನಿರ್ಬಂಧ ಹೇರುತ್ತದೆ. ಸಣ್ಣ ಪ್ರಮಾಣದ ಪ್ರವಾಸೋದ್ಯಮ, ಮೀನುಗಾರಿಕೆ, ಹೋಂ ಸ್ಟೇಗಳ ಕಾರ್ಯಾಚರಣೆ ಹಾಗೂ ಕರಾವಳಿ ಉದ್ದಕ್ಕೂ ಮೂಲಸೌಕರ್ಯ ಅಭಿವೃದ್ಧಿ ಯೋಜನೆ ಕೈಗೆತ್ತಿಕೊಳ್ಳುವುದಕ್ಕೆ ಇದರಿಂದ ಅಡ್ಡಿ ಉಂಟಾಗಿದೆ'** ಎಂದು ಸಮಿತಿಯು ತನ್ನ ವರದಿಯಲ್ಲಿ ಹೇಳಿದೆ.

**<u>ನ್ಯಾಟ್‌ಕನೆಕ್ಟ್ ಫೌಂಡೇಷನ್ ವಾದವೇನು?</u>**

- ಸಿಆರ್‌ಜೆಡ್ ಮಿತಿಯನ್ನು ಕಡಿತ ಮಾಡುವುದರಿಂದ ಸಮುದ್ರತೀರದ ಸಮೀಪ ಅಪಾಯಕಾರಿ ಎನಿಸುವಷ್ಟು ವಿಪರೀತ ನಿರ್ಮಾಣ ಕಾರ್ಯಕ್ಕೆ ಅವಕಾಶ ನೀಡಿದಂತಾಗಲಿದೆ ಎಂದು ನ್ಯಾಟ್‌ಕನೆಕ್ಟ್ ಫೌಂಡೇಷನ್ ನಿರ್ದೇಶಕ ಬಿ.ಎನ್.ಕುಮಾರ್ ಹೇಳುತ್ತಾರೆ.
- **'ಕರ್ನಾಟಕದ ಕರಾವಳಿ ಪೈಕಿ ಶೇ 23.7ರಷ್ಟು ಪ್ರದೇಶ ಸವೆಯುತ್ತಿದೆ. ದೇಶದ ಕರಾವಳಿಯ ಶೇ33.6ರಷ್ಟು ಪ್ರದೇಶ ಸವೆಯುವ ಅಪಾಯ ಎದುರಿಸುತ್ತಿದೆ** ಎಂಬುದಾಗಿ ಸಂಸತ್‌ನಲ್ಲಿ ಕಳೆದ ವರ್ಷ ಜೂನ್‌ನಲ್ಲಿ ಮಂಡಿಸಿದ ವರದಿಯಲ್ಲಿ ಹೇಳಲಾಗಿದೆ' ಎನ್ನುತ್ತಾರೆ.



Dr Rajkumar IAS KAS Academy

## ❖ ‘ವಾಸ್ತವ್ಯ ಅವಧಿ ವಿಸ್ತರಣೆ ಪ್ರಕರಣಗಳಿಗೆ ಅನ್ವಯಿಸದು’

**ಸಂದರ್ಭ: ಎಚ್‌-1ಬಿ ವೀಸಾಕ್ಕೆ ಹೊಸದಾಗಿ ಸಲ್ಲಿಕೆಯಾಗುವ ಅರ್ಜಿಗಳಿಗೆ ಸಂಬಂಧಿಸಿ ಮಾಡಲಾಗಿರುವ ಶುಲ್ಕ ಹೆಚ್ಚಳವು ‘ಸ್ಥಾನ ಬದಲಾವಣೆ’ ಅಥವಾ ‘ವಾಸ್ತವ್ಯದ ಅವಧಿಯ ವಿಸ್ತರಣೆ’ ಕೋರಿದ ಅರ್ಜಿಗಳಿಗೆ ಅನ್ವಯಿಸುವುದಿಲ್ಲ ಎಂದು ಅಮೆರಿಕ ಹೇಳಿದೆ.**

- ಅಮೆರಿಕ ಪೌರತ್ವ ಹಾಗೂ ವಲಸೆ ಸೇವೆಗಳ (ಯುಎಸ್‌ಸಿಐಎಸ್) ಇಲಾಖೆಯು ಬಿಡುಗಡೆ ಮಾಡಿರುವ ಹೊಸ ಮಾರ್ಗಸೂಚಿಗಳು ಇಂತಹ ಹಲವಾರು ಅಂಶಗಳನ್ನು ಒಳಗೊಂಡಿದೆ.
- ಎಚ್‌-1ಬಿ ವೀಸಾಕ್ಕಾಗಿ ಹೊಸದಾಗಿ ಸಲ್ಲಿಸುವ ಅರ್ಜಿಗಳಿಗೆ ಸಂಬಂಧಿಸಿದ ಶುಲ್ಕವನ್ನು 1 ಲಕ್ಷ ಡಾಲರ್‌ಗೆ (ಅಂದಾಜು ₹88 ಲಕ್ಷ) ಹೆಚ್ಚಿಸಿ ಅಮೆರಿಕ ಅಧ್ಯಕ್ಷ ಡೊನಾಲ್ಡ್‌ ಟ್ರಂಪ್‌ ಅವರು ಸೆಪ್ಟೆಂಬರ್‌ 19ರಂದು ಆದೇಶ ಹೊರಡಿಸಿದ್ದರು.
- ‘ವೀಸಾ ಅರ್ಜಿ ಶುಲ್ಕ ಹೆಚ್ಚಳ ಕುರಿತ ಆದೇಶವು ಈ ಮೊದಲು ನೀಡಲಾಗಿರುವ ಎಚ್‌-1ಬಿ ವೀಸಾಗಳು ಅಥವಾ ವೀಸಾ ಕೋರಿ ಅಮೆರಿಕ ಕಾಲಮಾನ ಪ್ರಕಾರ ಸೆಪ್ಟೆಂಬರ್‌ 21ರ ತಡರಾತ್ರಿ 12.01ಕ್ಕೂ ಮೊದಲು ಸಲ್ಲಿಸಿರುವ ಅರ್ಜಿಗಳಿಗೆ ಅನ್ವಯವಾಗುವುದಿಲ್ಲ’ ಎಂದು ಯುಎಸ್‌ಸಿಐಎಸ್‌ ಹೇಳಿದೆ.
- ಎಚ್‌-1ಬಿ ವೀಸಾ ಹೊಂದಿರುವವರು ಅಮೆರಿಕಕ್ಕೆ ಬರಲು ಇಲ್ಲವೇ ಅಮೆರಿಕದಿಂದ ಇತರ ದೇಶಗಳಿಗೆ ಸಂಚರಿಸುವುದಕ್ಕೆ ಕೂಡ ಈ ಆದೇಶ ನಿರ್ಬಂಧ ಹೇರುವುದಿಲ್ಲ ಎಂದೂ ತಿಳಿಸಿದೆ.
- ಹೊಸ ಶುಲ್ಕ ನೀತಿ ಪ್ರಶ್ನಿಸಿ ಅಮೆರಿಕ ವಾಣಿಜ್ಯ ಮಂಡಳಿ ಅಕ್ಟೋಬರ್‌ 16ರಂದು ನ್ಯಾಯಾಲಯದ ಮೆಟ್ಟಿಲೇರಿತ್ತು. ಇದರ ಬೆನ್ನಲ್ಲೇ, ಈ ಹೊಸ ಮಾರ್ಗಸೂಚಿಗಳನ್ನು ಯುಎಸ್‌ಸಿಐಎಸ್‌ ಬಿಡುಗಡೆ ಮಾಡಿದೆ.

## ❖ ಜಪಾನ್: ಸನೇ ತಕೈಚಿ ಮೊದಲ ಮಹಿಳಾ ಪ್ರಧಾನಿ

**ಸಂದರ್ಭ: ಜಪಾನ್‌ ದೇಶದ ಮೊದಲ ಮಹಿಳಾ ಪ್ರಧಾನಿಯಾಗಿ, ಲಿಬರಲ್‌ ಡೆಮಾಕ್ರಟಿಕ್‌ ಪಕ್ಷದ ಕಟ್ಟಾ ಸಂಪ್ರದಾಯವಾದಿ ಸನೇ ತಕೈಚಿ (64) ಅವರನ್ನು ಸಂಸತ್ತು ಆಯ್ಕೆ ಮಾಡಿತು.**



ಸನೇ ತಕೈಚಿ

- ಪ್ರಧಾನಿಯಾಗಿ ಕೇವಲ ಒಂದು ವರ್ಷ ಸೇವೆ ಸಲ್ಲಿಸಿದ ಶಿಗೇರು ಇಶಿಬಾ ಅವರ ನೇತೃತ್ವದಲ್ಲಿ ಲಿಬರಲ್‌ ಡೆಮಾಕ್ರಟಿಕ್‌ ಪಕ್ಷ ನಿರಂತರ ಸೋಲುಗಳನ್ನು ಕಂಡಿತು. ಈ ಕಾರಣದಿಂದ ಬೇಸತ್ತ ಅವರು ಸಂಪುಟಕ್ಕೆ ಬೆಳಿಗ್ಗೆ ರಾಜೀನಾಮೆ ನೀಡಿ, ತಮ್ಮ ಉತ್ತರಾಧಿಕಾರಿ ಆಯ್ಕೆಗೆ ದಾರಿ ಮಾಡಿಕೊಟ್ಟರು.
- ಇತರ ಪಾಲುದಾರರ ಜತೆ ಲಿಬರಲ್‌ ಡೆಮಾಕ್ರಟಿಕ್‌ ಪಕ್ಷವು ಮೈತ್ರಿ ಒಪ್ಪಂದವನ್ನು ಮಾಡಿಕೊಂಡ ಬಳಿಕ ಸನೇ ತಕೈಚಿ ಅವರ ಆಯ್ಕೆಯಾಗಿದೆ.
- ಜಪಾನಿನ ಕೆಳಮನೆಯಲ್ಲಿ ತಕೈಚಿ ಅವರು 237 ಮತಗಳನ್ನು ಪಡೆದರೆ, ಅವರ ವಿರುದ್ಧ ಸ್ಪರ್ಧಿಸಿದ್ದ ವಿರೋಧ ಪಕ್ಷ ‘ಕಾನ್‌ಸ್ಟಿಟ್ಯೂಷನಲ್‌ ಡೆಮಾಕ್ರಟಿಕ್‌ ಪಕ್ಷ’ ದ ಮುಖ್ಯಸ್ಥ ಯೋಶಿಕೊಕೊ ನೋಡಾ ಅವರು 149 ಮತ ಪಡೆದರು.
- ವಿರೋಧ ಪಕ್ಷಗಳಲ್ಲಿ ಒಗ್ಗಟ್ಟು ಇಲ್ಲದೇ ಇದ್ದದ್ದು ತಕೈಚಿ ಆಯ್ಕೆಗೆ ವರದಾನವಾಯಿತು. ಎಲ್‌ಡಿಪಿಯು ‘ಜಪಾನ್‌ ಇನ್ನೋವೇಷನ್‌ ಪಾರ್ಟಿ’ (ಜೆಐಪಿ) ಜತೆ ಮೈತ್ರಿ ಮಾಡಿಕೊಂಡು, ಪ್ರಧಾನಿ ಆಯ್ಕೆ ಖಚಿತಪಡಿಸಿಕೊಂಡಿತು.

## ❖ ‘ರಷ್ಯಾದಿಂದ ಭಾರತದ ತೈಲ ಖರೀದಿ ಶೀಘ್ರದಲ್ಲೇ ಸ್ಥಗಿತ’

**ಸಂದರ್ಭ: ಭಾರತವು ಈ ವರ್ಷದ ಅಂತ್ಯದ ವೇಳೆಗೆ ರಷ್ಯಾದಿಂದ ಕಚ್ಚಾ ತೈಲ ಖರೀದಿ ಮಾಡುವುದನ್ನು ಸಂಪೂರ್ಣವಾಗಿ ನಿಲ್ಲಿಸಲಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್‌ ಟ್ರಂಪ್‌ ಮತ್ತೆ ಹೇಳಿದ್ದಾರೆ.**

- ಶ್ವೇತಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿರುವ ಅವರು, ‘ಕಚ್ಚಾತೈಲ ಖರೀದಿ ಪ್ರಕ್ರಿಯೆ ಸಂಪೂರ್ಣವಾಗಿ ಸ್ಥಗಿತಗೊಳಿಸಲು ಸಮಯ ಬೇಕಾಗುತ್ತದೆ’ ಎಂದೂ ಹೇಳಿದ್ದಾರೆ.

Dr. Rajkumar's KAS Academy

- ರಷ್ಯಾದಿಂದ ಕಚ್ಚಾತೈಲ ಖರೀದಿಗೆ ಸಂಬಂಧಿಸಿ ಟ್ರಂಪ್ ಅವರ ಹೇಳಿಕೆಗೆ ಭಾರತ ತಕ್ಷಣಕ್ಕೆ ಪ್ರತಿಕ್ರಿಯೆ ನೀಡಿಲ್ಲ. ಆದಾಗ್ಯೂ,'ಈ ಪ್ರಕ್ರಿಯೆ ನಡೆಯಲು ಸ್ವಲ್ಪ ಕಾಲಾವಕಾಶದ ಅಗತ್ಯವಿದೆ. ಈ ವಿಚಾರದಲ್ಲಿ ಚೀನಾದ ಮನವೊಲಿಸಲು ಯತ್ನಿಸುತ್ತಿದ್ದೇನೆ' ಎಂದು ತಿಳಿಸಿದ್ದಾರೆ.
- ರಷ್ಯಾದಿಂದ ಚೀನಾ ಹಾಗೂ ಭಾರತವು ದೊಡ್ಡ ಪ್ರಮಾಣದಲ್ಲಿ ಕಚ್ಚಾತೈಲ ಖರೀದಿಸುತ್ತಿರುವ ರಾಷ್ಟ್ರಗಳಾಗಿವೆ.
- ರಷ್ಯಾದಿಂದ ಕಚ್ಚಾತೈಲ ಖರೀದಿಸುವ ಮೂಲಕ ಉಕ್ರೇನ್ ವಿರುದ್ಧದ ಸಂಘರ್ಷಕ್ಕೆ ಭಾರತವು ಪರೋಕ್ಷವಾಗಿ ಆರ್ಥಿಕ ನೆರವು ಒದಗಿಸುತ್ತಿದೆ ಎಂದು ಅಮೆರಿಕ ಆರೋಪಿಸುತ್ತಿದೆ.

**ವ್ಯಾಪಾರ: ಮೋದಿ, ಟ್ರಂಪ್ ಮಾತುಕತೆ**

- ಭಾರತ ಮತ್ತು ಅಮೆರಿಕ ನಡುವಿನ ವ್ಯಾಪಾರ ಕುರಿತು ಪ್ರಧಾನಿ ನರೇಂದ್ರ ಮೋದಿ ಹಾಗೂ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಚರ್ಚಿಸಿದ್ದಾರೆ.
- ಸುಂಕ ಹೇರಿಕೆ ಬಳಿಕ ಉಭಯ ರಾಷ್ಟ್ರಗಳ ನಡುವಿನ ಸಂಬಂಧ ಹದಗೆಟ್ಟಿರುವ ಮಧ್ಯೆಯೇ, ಶ್ವೇತಭವನದಲ್ಲಿ ಹಮ್ಮಿಕೊಂಡಿದ್ದ ದೀಪಾವಳಿ ಕಾರ್ಯಕ್ರಮದಲ್ಲಿ ದೀಪ ಬೆಳಗಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಟ್ರಂಪ್, 'ಮೋದಿ ಅವರೊಂದಿಗೆ ವ್ಯಾಪಾರ ಕುರಿತು ಮಾತನಾಡಿರುವೆ ' ಎಂದು ಹೇಳಿದ್ದಾರೆ.

**ಹಿನ್ನೆಲೆ**

- **ಭಾರತವು ವಿಶ್ವದ ಮೂರನೇ ಅತಿದೊಡ್ಡ ತೈಲ ಆಮದು ಮತ್ತು ಬಳಕೆಯ ದೇಶವಾಗಿದೆ. ಇದು ದಿನಕ್ಕೆ ಸುಮಾರು 5.5 ಮಿಲಿಯನ್ ಬ್ಯಾರೆಲ್‌ಗಳಷ್ಟು ಕಚ್ಚಾ ತೈಲ ಬಳಕೆಯಲ್ಲಿ 87 ಪ್ರತಿಶತವನ್ನು ಆಮದು ಮಾಡಿಕೊಳ್ಳುತ್ತದೆ.**
- **ರಷ್ಯಾ ವಿಶ್ವದ ಅತಿದೊಡ್ಡ ಕಚ್ಚಾ ತೈಲ ಉತ್ಪಾದಕರು ಮತ್ತು ರಫ್ತುದಾರರಲ್ಲಿ ಒಂದಾಗಿದೆ.**

**ತೈಲ ವ್ಯಾಪಾರ**

- **ಸಾಂಪ್ರದಾಯಿಕವಾಗಿ, ಭಾರತವು ತನ್ನ ಎಲ್ಲಾ ಕಚ್ಚಾ ತೈಲದ ಮೂರನೇ ಎರಡರಷ್ಟು ಭಾಗವನ್ನು ಮಧ್ಯಪ್ರಾಚ್ಯ ದೇಶಗಳಾದ ಇರಾಕ್, ಸೌದಿ ಅರೇಬಿಯಾ ಮತ್ತು ಯುಎಇಯಿಂದ ಖರೀದಿಸಿತು.**
- **ಪಾಶ್ಚಿಮಾತ್ಯ ದೇಶಗಳು ಮಾಸ್ಕೋ ಮೇಲೆ ನಿರ್ಬಂಧಗಳನ್ನು ವಿಧಿಸಿದ ನಂತರ ಮತ್ತು ಫೆಬ್ರವರಿ 2022 ರಲ್ಲಿ ಉಕ್ರೇನ್ ಆಕ್ರಮಣದ ನಂತರ ಅದರ ಪೂರೈಕೆಯನ್ನು ದೂರವಿಟ್ಟ ನಂತರ ಭಾರತವು ರಿಯಾಯಿತಿಯಲ್ಲಿ ಮಾರಾಟವಾದ ರಷ್ಯಾದ ತೈಲವನ್ನು ಖರೀದಿಸಲು ತಿರುಗಿತು.**
- **ಪರಿಣಾಮವಾಗಿ, 2019-20 (FY20) ನಲ್ಲಿ ಒಟ್ಟು ತೈಲ ಆಮದುಗಳಲ್ಲಿ ಕೇವಲ 1.7 ಪ್ರತಿಶತದಷ್ಟು ಪಾಲನ್ನು ಹೊಂದಿದ್ದ ರಷ್ಯಾದ ಪಾಲು 2023-24 ರಲ್ಲಿ 40 ಪ್ರತಿಶತಕ್ಕೆ ಏರಿತು ಮತ್ತು ಈಗ ಅದು ಭಾರತಕ್ಕೆ ಅತಿದೊಡ್ಡ ತೈಲ ಪೂರೈಕೆದಾರ.**
- **ಪರಿಮಾಣದ ವಿಷಯದಲ್ಲಿ, ಭಾರತವು FY25 ರಲ್ಲಿ ರಷ್ಯಾದಿಂದ 88 ಮಿಲಿಯನ್ ಟನ್‌ಗಳನ್ನು ಆಮದು ಮಾಡಿಕೊಂಡಿತು, ಇದು ಒಟ್ಟು 245 ಮಿಲಿಯನ್ ಟನ್‌ಗಳ ಸಾಗಣೆಯಾಗಿದೆ.**
- **ರಷ್ಯಾದ ತೈಲ ಖರೀದಿಗೆ ಚಾಲನೆ ನೀಡಲು ಪ್ರಮುಖ ಕಾರಣವೆಂದರೆ ಅಂತರರಾಷ್ಟ್ರೀಯವಾಗಿ ವ್ಯಾಪಾರ ಮಾಡುವ ಇತರ ಕಚ್ಚಾ ತೈಲಕ್ಕೆ ಹೋಲಿಸಿದರೆ ರಿಯಾಯಿತಿಗಳು. ರಿಯಾಯಿತಿಗಳು 2023 ರಲ್ಲಿ ಪ್ರತಿ ಬ್ಯಾರೆಲ್‌ಗೆ USD 19-20 ಕ್ಕೆ ತಲುಪಿದವು, ಆದರೆ ಅಂದಿನಿಂದ ಪ್ರತಿ ಬ್ಯಾರೆಲ್‌ಗೆ USD 3.5-5 ಕ್ಕೆ ಕುಗ್ಗಿದೆ.**

**ರಿಲಯನ್ಸ್ ಇಂಡಸ್ಟ್ರೀಸ್ ಲಿಮಿಟೆಡ್**

- ರಷ್ಯಾದ ತೈಲ ಕಂಪನಿಗಳ ಮೇಲೆ ಅಮೆರಿಕವು ನಿರ್ಬಂಧ ಹೇರಿರುವ ಪರಿಣಾಮವಾಗಿ ರಿಲಯನ್ಸ್ ಇಂಡಸ್ಟ್ರೀಸ್ ಲಿಮಿಟೆಡ್ ರಷ್ಯಾದಿಂದ ತೈಲ ಆಮದನ್ನು ಕಡಿಮೆ ಮಾಡುವ ಆಲೋಚನೆಯಲ್ಲಿದೆ ಎಂದು ಮೂಲಗಳು ಹೇಳಿವೆ.
- ರಷ್ಯಾ ಕಂಪನಿಗಳ ಮೇಲಿನ ನಿರ್ಬಂಧದ ಪರಿಣಾಮಗಳ ಬಗ್ಗೆ ಸರ್ಕಾರಿ ಸ್ವಾಮ್ಯದ ಕಂಪನಿಗಳು ಪರಿಶೀಲನೆ ನಡೆಸುತ್ತಿವೆ. ಆದರೆ ಅವು ಬಹುಪಾಲು ಕಚ್ಚಾ ತೈಲವನ್ನು ಯುರೋಪಿನ ವರ್ತಕರಿಂದ (ಇವರ ಮೇಲೆ ನಿರ್ಬಂಧ ಇಲ್ಲ) ಖರೀದಿಸುತ್ತಿವೆ. ಹೀಗಾಗಿ ಅವು ರಷ್ಯಾದಿಂದ ಕಚ್ಚಾ ತೈಲ ಖರೀದಿಯನ್ನು ತಕ್ಷಣಕ್ಕೆ ನಿಲ್ಲಿಸಲಿಕ್ಕಿಲ್ಲ ಎಂದು ಮೂಲಗಳು ಹೇಳಿವೆ.
- ರಿಲಯನ್ಸ್ ಕಂಪನಿಯು ರಷ್ಯಾದಿಂದ ಪ್ರತಿದಿನ ಸರಿಸುಮಾರು 8.5 ಲಕ್ಷ ಬ್ಯಾರಲ್ ಕಚ್ಚಾ ತೈಲವನ್ನು ರಿಯಾಯಿತಿ ಬೆಲೆಗೆ ಖರೀದಿಸಿದೆ. ಈ ಕಚ್ಚಾ ತೈಲವನ್ನು ಸಂಸ್ಕರಿಸಿ ಅದು ಪೆಟ್ರೋಲ್, ಡೀಸೆಲ್ ಮತ್ತು ಎಟಿಎಫ್‌ಅನ್ನು ಅಮೆರಿಕ, ಯುರೋಪಿನ ಮಾರುಕಟ್ಟೆಯಲ್ಲಿ ಮಾರಾಟ ಮಾಡುತ್ತಿದೆ. ಇದರಿಂದ ಉತ್ತಮ ಲಾಭ ಗಳಿಸುತ್ತಿದೆ.
- ಆದರೆ ಅಮೆರಿಕವು ರಷ್ಯಾದ ರೊಸ್ನೆಫ್ಟ್ ಮತ್ತು ಲುಕಾಯಿಲ್ ಕಂಪನಿಗಳ ಮೇಲೆ ನಿರ್ಬಂಧ ವಿಧಿಸಿರುವ ಪರಿಣಾಮವಾಗಿ, ರಿಲಯನ್ಸ್‌ನ ವಹಿವಾಟಿನ ಮೇಲೆ ಪರಿಣಾಮ ಉಂಟಾಗುವ ಸಾಧ್ಯತೆ ಇದೆ. ರಷ್ಯಾದ ಈ ಎರಡು ಕಂಪನಿಗಳಿಂದ ಕಚ್ಚಾ ತೈಲ ಖರೀದಿಸುವವರು ಸಿವಿಲ್ ಹಾಗೂ ಕ್ರಿಮಿನಲ್ ಕ್ರಮ ಎದುರಿಸಬೇಕಾಗುತ್ತದೆ.
- ರಿಲಯನ್ಸ್ ಕಂಪನಿಯು ರಷ್ಯಾದಿಂದ ಕಚ್ಚಾ ತೈಲ ಆಮದು ಮಾಡಿಕೊಳ್ಳುವುದನ್ನು ಕಡಿಮೆ ಮಾಡುವ, ಸ್ಥಗಿತಗೊಳಿಸುವ ಸಾಧ್ಯತೆ ಇದೆ ಎಂದು ಮೂಲಗಳು ಹೇಳಿವೆ. ರಿಲಯನ್ಸ್ ಕಂಪನಿಯು ಅಮೆರಿಕದಲ್ಲಿ ಹೆಚ್ಚಿನ ವಾಣಿಜ್ಯ ಹಿತಾಸಕ್ತಿ ಹೊಂದಿದೆ. ಈ ವಿಚಾರವಾಗಿ ರಿಲಯನ್ಸ್‌ನಿಂದ ಪ್ರತಿಕ್ರಿಯೆ ಲಭ್ಯವಾಗಿಲ್ಲ.
- ರಿಲಯನ್ಸ್ ಕಂಪನಿಯು ಕಚ್ಚಾ ತೈಲ ಖರೀದಿಯನ್ನು ಇತರ ಕಡೆಗಳಿಂದ ಮಾಡುವ ಪ್ರಕ್ರಿಯೆ ಶುರುಮಾಡಿದೆ ಎಂದು ಗೊತ್ತಾಗಿದೆ. ರೊಸ್ನೆಫ್ಟ್ ಹಾಗೂ ಲುಕಾಯಿಲ್ ಕಂಪನಿಗಳ ಜೊತೆಗಿನ ವಹಿವಾಟನ್ನು ನವೆಂಬರ್ 21ಕ್ಕೆ ಮೊದಲು ನಿಲ್ಲಿಸಬೇಕಿದೆ.
- ರಷ್ಯಾದಿಂದ ಕಚ್ಚಾ ತೈಲ ಆಮದು ಮಾಡಿಕೊಳ್ಳುವ ನಯಾರಾ ಎನರ್ಜಿ (ಇದಕ್ಕೆ ರೊಸ್ನೆಫ್ಟ್ ಹೂಡಿಕೆ ಇದೆ) ಕಂಪನಿ ಕೂಡ ಅಮೆರಿಕ ಹೇರಿರುವ ನಿರ್ಬಂಧದ ಬಿಸಿ ಅನುಭವಿಸಬೇಕಿದೆ.
- ರಷ್ಯಾದ ಕಚ್ಚಾ ತೈಲ ಸಂಸ್ಕರಿಸಿ ಸಿದ್ಧಪಡಿಸಿದ ಇಂಧನ ಆಮದನ್ನು ಜನವರಿ 21ರಿಂದ ಅನ್ವಯವಾಗುವಂತೆ ಐರೋಪ್ಯ ಒಕ್ಕೂಟ ನಿರ್ಬಂಧಿಸಿದೆ. ರಿಲಯನ್ಸ್ ಮತ್ತು ಎಂಆರ್‌ಪಿಎಲ್ ಐರೋಪ್ಯ ಒಕ್ಕೂಟಕ್ಕೆ ಇಂಧನ ರಫ್ತು ಮಾಡಬೇಕು ಎಂದಾರೆ ರಷ್ಯಾದಿಂದ ಕಚ್ಚಾ ತೈಲ ಖರೀದಿಸುವುದನ್ನು ಕಡಿಮೆ ಮಾಡಬೇಕಾಗುತ್ತದೆ ಎಂದು ಮೂಲಗಳು ಹೇಳಿವೆ.

## <u>**ಸರ್ಕಾರಿ ಕಂಪನಿಗಳಿಂದ ಖರೀದಿ ಅಬಾಧಿತ?**</u>

- ಸರ್ಕಾರಿ ಸ್ವಾಮ್ಯದ ತೈಲ ಸಂಸ್ಕರಣಾ ಕಂಪನಿಗಳು ಮಧ್ಯವರ್ತಿ ವರ್ತಕರ ಮೂಲಕ ರಷ್ಯಾದ ಕಚ್ಚಾ ತೈಲ ಖರೀದಿಸುವುದನ್ನು ಸದ್ಯಕ್ಕಂತೂ ಮುಂದುವರಿಸುವ ನಿರೀಕ್ಷೆ ಇದೆ.
- ಸರ್ಕಾರಿ ಸ್ವಾಮ್ಯದ ಕಂಪನಿಗಳು ರೊಸ್ನೆಫ್ಟ್ ಅಥವಾ ಲುಕಾಯಿಲ್ ಕಂಪನಿ ಜೊತೆ ಒಪ್ಪಂದ ಹೊಂದಿಲ್ಲ. ಅವು ಟೆಂಡರ್ ಮೂಲಕ ರಷ್ಯಾದ ಕಚ್ಚಾ ತೈಲ ಖರೀದಿಸುತ್ತಿವೆ. ಈ ಟೆಂಡರ್ ಪ್ರಕ್ರಿಯೆಗಳಲ್ಲಿ ಯುರೋಪಿನ ಅಥವಾ ದುಬೈ, ಸಿಂಗಪುರ ಮೂಲದ ತೈಲ ವ್ಯಾಪಾರಿಗಳು ಇರುತ್ತಾರೆ. ನಿರ್ಬಂಧದ ವ್ಯಾಪ್ತಿಯಲ್ಲಿ ಈ ವ್ಯಾಪಾರಿಗಳು ಇಲ್ಲ.
- ಸರ್ಕಾರಿ ಸ್ವಾಮ್ಯದ ಇಂಡಿಯನ್ ಆಯಿಲ್, ಭಾರತ್ ಪೆಟ್ರೋಲಿಯಂ, ಹಿಂದುಸ್ತಾನ್ ಪೆಟ್ರೋಲಿಯಂ, ಎಂಆರ್‌ಪಿಎಲ್ ಹಾಗೂ ಎಚ್‌ಪಿಸಿಎಲ್-ಮಿತ್ತಲ್ ಎನರ್ಜಿ ಕಂಪನಿಗಳು ರಷ್ಯಾದ ಕಚ್ಚಾ ತೈಲ ಖರೀದಿಸುತ್ತಿವೆ.
- ಕೆಲವು ವರ್ತಕರು ರಷ್ಯಾದ ಕಚ್ಚಾ ತೈಲ ಖರೀದಿಸಲು ಹಿಂದೇಟು ಹಾಕಿದರೂ, ದುಬೈನಲ್ಲಿ ಹೊಸ ವರ್ತಕರನ್ನು ರಾತ್ರೋರಾತ್ರಿ ನೋಂದಾಯಿಸುವ ಶಕ್ತಿ ರಷ್ಯಾಕ್ಕೆ ಇದೆ. ಈ ವರ್ತಕರು ರಷ್ಯಾದ

Dr. Rajkumar IAS/KAS Academy


ಕಂಪನಿಗಳಿಂದ ಕಚ್ಚಾ ತೈಲ ಖರೀದಿಸಿ, ಅದನ್ನು ಭಾರತ ಮತ್ತು ಚೀನಾಕ್ಕೆ ಮಾರಾಟ ಮಾಡಬಲ್ಲರು ಎಂದು ಮೂಲಗಳು ವಿವರಿಸಿವೆ.

- ತೈಲ ಮಾರುಕಟ್ಟೆಯು ಅಮೆರಿಕದ ನಿರ್ಬಂಧದ ಬಗ್ಗೆ ಹೆಚ್ಚು ತಲೆಕೆಡಿಸಿಕೊಂಡಂತೆ ಕಾಣುತ್ತಿಲ್ಲ. ನಿರ್ಬಂಧಗಳು ಬಹಳ ಕಠಿಣ ಎಂದಾಗಿದ್ದರೆ ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆಯು ಬ್ಯಾರಲ್‌ಗೆ 5ರಿಂದ 10 ಡಾಲರ್‌ನಷ್ಟು ಹೆಚ್ಚಾಗುತ್ತಿತ್ತು. ಆದರೆ 2 ಡಾಲರ್‌ನಷ್ಟೇ ಹೆಚ್ಚಳ ಆಗಿದೆ. ಅಂದರೆ, ರಷ್ಯಾದಿಂದ ಸಿಗುವ ಅಷ್ಟೂ ಕಚ್ಚಾ ತೈಲ ಇನ್ನು ಮುಂದೆ ಸಿಗುವುದೇ ಇಲ್ಲ ಎಂಬ ಪರಿಸ್ಥಿತಿ ಇಲ್ಲ ಎಂದು ಮೂಲವೊಂದು ವಿವರಿಸಿದೆ.

## ❖ ಹೊಸ ಸಿಜೆಐ ಪ್ರಕ್ರಿಯೆಗೆ ಚಾಲನೆ

**ಸಂದರ್ಭ: ಇದೇ ನವೆಂಬರ್ 23ರಂದು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್ .ಗವಾಯಿ ಅವರ ಅವಧಿ ಮುಕ್ತಾಯಗೊಳ್ಳುತ್ತಿದ್ದು, ಮುಂದಿನ ಸಿಜೆಐ ಆಯ್ಕೆ ಪ್ರಕ್ರಿಯೆಗೆ ಸರ್ಕಾರ ಚಾಲನೆ ನೀಡಿದೆ.**

- ತಮ್ಮ ಉತ್ತರಾಧಿಕಾರಿ ಯಾರಾಗಬೇಕು ಎಂಬುದರ ಕುರಿತು ಹಾಲಿ ಮುಖ್ಯ ನ್ಯಾಯಮೂರ್ತಿ ಗವಾಯಿ ಅವರು ಜ್ಞಾಪನಾಪತ್ರ, ದಾಖಲಾತಿಗಳನ್ನು ಕಾನೂನು ಸಚಿವಾಲಯಕ್ಕೆ ಕಳುಹಿಸಬೇಕು.
- ಸುಪ್ರೀಂ ಕೋರ್ಟ್‌ನಲ್ಲಿರುವ ಅತ್ಯಂತ ಹಿರಿಯ ನ್ಯಾಯಮೂರ್ತಿಯನ್ನು ಮುಂದಿನ ಸಿಜೆಐ ಆಗಿ ನೇಮಿಸಲು ಹಾಲಿ ಸಿಜೆಐ ಸಾಮಾನ್ಯವಾಗಿ ಶಿಫಾರಸು ಮಾಡುತ್ತಾರೆ. ತನ್ನ ಉತ್ತರಾಧಿಕಾರಿಯ ಕುರಿತಂತೆ ಮುಖ್ಯ ನ್ಯಾಯಮೂರ್ತಿಗಳು ಸೂಕ್ತ ಸಮಯದಲ್ಲಿ ಶಿಫಾರಸು ಕೋರಲಿದ್ದಾರೆ ಎಂದು ಕಾನೂನು ಸಚಿವಾಯವು ತಿಳಿಸಿದೆ.
- ಹಾಲಿ ಸಿಜೆಐ ನಿವೃತ್ತಿಯಾಗುವ ತಿಂಗಳು ಮುನ್ನ ಈ ಪತ್ರವನ್ನು ಕಳುಹಿಸುವ ಪದ್ಧತಿಯಿದೆ.
- **ಗವಾಯಿ ನಂತರ ಸೂರ್ಯಕಾಂತ್ ಅವರೇ ಸುಪ್ರೀಂ ಕೋರ್ಟ್‌ನ ಅತ್ಯಂತ ಹಿರಿಯ ನ್ಯಾಯಮೂರ್ತಿಗಳಾಗಿದ್ದು,** ದೇಶದ ನ್ಯಾಯಾಂಗ ವ್ಯವಸ್ಥೆಯ ಅತ್ಯುನ್ನತ ಹುದ್ದೆ ಅಲಂಕರಿಸುವ ಸಾಲಿನಲ್ಲಿ ಮುಂಚೂಣಿಯಲ್ಲಿದ್ದಾರೆ.
- **ಸೂರ್ಯಕಾಂತ್ ಅವರು ನವೆಂಬರ್ 24ರಂದು ಮುಂದಿನ ಸಿಜೆಐ ಆಗಿ ನೇಮಕಗೊಂಡರೆ, ಮುಂದಿನ 15 ತಿಂಗಳು ಅಥವಾ 2027ರ ಫೆಬ್ರುವರಿ 9ರ ತನಕ** ಈ ಜವಾಬ್ದಾರಿ ನಿರ್ವಹಿಸಲಿದ್ದಾರೆ.

## ❖ ಮರಣದಂಡನೆ ಯಾವುದು 'ಮಾನವೀಯ' ವಿಧಾನ?



# ಮರಣದಂಡನೆ

## ಯಾವುದು 'ಮಾನವೀಯ' ವಿಧಾನ?

• ಬಿ.ವಿ.ಶ್ರೀನಾಥ್

ಭಾರತದಲ್ಲಿ ಮರಣದಂಡನೆ ವಿಧಿಸಲಾಗಿರುವ ಅಪರಾಧಿಗಳಿಗೆ ಯಾವ ವಿಧಾನದ ಮೂಲಕ ಪ್ರಾಣಹರಣ ಮಾಡಬೇಕು ಎನ್ನುವುದು ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣೆಯ ಹಂತದಲ್ಲಿದ್ದು, ಚರ್ಚೆಗೆ ಗ್ರಾಸವಾಗಿದೆ. ಗಲ್ಲಿಗೇರಿಸುವುದರ ಬದಲು ವಿಷದ ಇಂಜೆಕ್ಷನ್ ನೀಡುವ ಮೂಲಕ ಅಪರಾಧಿ ಸಾಯುವಂತೆ ಮಾಡಬೇಕು ಎನ್ನುವ ವಾದ ಕೇಳಿಬಂದಿದೆ. ಆದರೆ, ಕೇಂದ್ರ ಸರ್ಕಾರವು ಈ ವಿಚಾರದಲ್ಲಿ ಯಾವ ಬದಲಾವಣೆಗೂ ಸಿದ್ಧವಿರುವಂತೆ ಕಾಣುತ್ತಿಲ್ಲ

ಮರಣದಂಡನೆಯನ್ನು ಅನೇಕ ದೇಶಗಳಲ್ಲಿ ರದ್ದುಪಡಿಸಲಾಗಿದೆ. ಭಾರತದಲ್ಲಿ ವಿರಳ ಪ್ರಕರಣಗಳಲ್ಲಿ ಮಾತ್ರವೇ ಮರಣದಂಡನೆ ವಿಧಿಸಲಾಗುತ್ತಿದೆ. ಈ ಶಿಕ್ಷೆ ವಿಧಿಸಲ್ಪಟ್ಟವರ ಪ್ರಾಣಹರಣವನ್ನು ಯಾವ ವಿಧಾನದ ಮೂಲಕ ಮಾಡಬೇಕು ಎನ್ನುವುದು ದೇಶದಲ್ಲಿ ಬಹಳ ಹಿಂದಿನಿಂದಲೂ ಚರ್ಚೆಯಾಗುತ್ತಲೇ ಇದೆ.

ಅಪರಾಧಿಗಳಿಗೆ ನೇಣು ಹಾಕುವುದು ಅತ್ಯಂತ ಕ್ರೂರ ಹಾಗೂ ಅನಾಗರಿಕ ಪದ್ಧತಿ. ಇದು ಹಳೆಯ ಹಾಗೂ ಅತ್ಯಂತ ಯಾತನಾದಾಯಕ ಪದ್ಧತಿಯಾಗಿದೆ ಎನ್ನುವ ಆಕ್ಷೇಪಣೆಗಳು ಹಿಂದೆಯೇ ಕೇಳಿಬಂದಿದ್ದವು. ಗಲ್ಲಿಗೇರಿಸುವಾಗ ಕುತ್ತಿಗೆಯ ಮೂಳೆ ಮುರಿಯುವುದು, ಕಣ್ಣುಗುಡ್ಡೆ ಹೊರಬರುವುದು, ನಾಲಗೆ ಹೊರಚಾಚಿಕೊಂಡಿರುವುದು, ದೇಹದ ಭಾಗಗಳು ನೋಡಲಾಗದಂತೆ ವಿರೂಪಗೊಳ್ಳುವುದು ವರದಿಯಾಗಿವೆ. ಹೆಚ್ಚಿನ ಸಂದರ್ಭಗಳಲ್ಲಿ ಅಪರಾಧಿಗಳು ಮಲ, ಮೂತ್ರ ವಿಸರ್ಜನೆಯನ್ನೂ ಮಾಡಿಕೊಳ್ಳುತ್ತಾರೆ. ಈ ವಿಧಾನದಲ್ಲಿ ಅಪರಾಧಿಯ ಪ್ರಾಣ ಹೋಗಲು ಹೆಚ್ಚು ಸಮಯ ತೆಗೆದುಕೊಳ್ಳುತ್ತದೆ. ಹಾಗಾಗಿ ಕ್ಷಿಪ್ರವಾದ, ಕಡಿಮೆ ಯಾತನೆಯ ಮಾರ್ಗಗಳನ್ನು ಹುಡುಕಬೇಕು; ವಿಷದ ಚುಚ್ಚುಮದ್ದು ನೀಡುವುದು, ಗುಂಡು ಹಾರಿಸಿ ಸಾಯಿಸುವುದು, ವಿದ್ಯುತ್ ಸ್ಪರ್ಶದ ಮೂಲಕ ಸಾವು, ಸಾರಜನಕದಿಂದ ಉಸಿರುಗಟ್ಟಿಸಿ ಸಾಯುವಂತೆ ಮಾಡುವುದು.. ಹೀಗೆ ಮರಣದಂಡನೆ ಜಾರಿಗೆ ಹಲವು ಪರ್ಯಾಯ ಮಾರ್ಗಗಳಿದ್ದು, ಅವುಗಳನ್ನು ಪರಿಗಣಿಸಬೇಕು ಎನ್ನುವ ಒತ್ತಾಯ ಕೇಳಿಬಂದಿತ್ತು.

**ಗಲ್ಲು ಶಿಕ್ಷೆಯ ಸಾಂವಿಧಾನಿಕತೆ:** ಮರಣದಂಡನೆಯ ವಿಧಾನವು ನಾಲ್ಕು ಮುಖ್ಯ ಆಶಯಗಳನ್ನು ಒಳಗೊಳ್ಳಬೇಕು ಎಂದು 1983ರ ದೀನಾ ಮತ್ತು ಭಾರತ ಸರ್ಕಾರದ ನಡುವಿನ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ಹೇಳಿತ್ತು. ಸಾವಿನ ವಿಧಾನವು ಸರಳವಾಗಿರಬೇಕು ಮತ್ತು ಕ್ಷಿಪ್ರವಾಗಿ ಸಾವು ತರುವಂತಿರಬೇಕು, ಅಪರಾಧಿಯು ಬೇಗ ಪ್ರಜ್ಞಾಶೂನ್ಯನಾಗಿ ಸಾವಿಗೀಡಾಗಬೇಕು, ಘನತೆಯಿಂದ ಕೂಡಿರಬೇಕು ಮತ್ತು ದೇಹ/ಅಂಗ ವಿರೂಪಗೊಳ್ಳುವಂತೆ ಇರಬಾರದು ಎಂದು ಉನ್ನತ ನ್ಯಾಯಾಲಯ ಸೂಚಿಸಿತ್ತು. ಕೊನೆಗೆ, ಸುಪ್ರೀಂ ಕೋರ್ಟ್ ಇದೇ ಪ್ರಕರಣದಲ್ಲಿ ಗಲ್ಲು ಶಿಕ್ಷೆಯ ವಿಧಾನದ ಸಾಂವಿಧಾನಿಕತೆಯನ್ನು ಎತ್ತಿಹಿಡಿದಿತ್ತು. ದೇಶದಲ್ಲಿ ಗಲ್ಲು ಶಿಕ್ಷೆಯೊಂದೇ ಮರಣದಂಡನೆಯ ಜಾರಿ ವಿಧಾನ ಎಂದು ಸ್ಪಷ್ಟಪಡಿಸಿತ್ತು. ವಿಷದ ಇಂಜೆಕ್ಷನ್ ಮೂಲಕ ಪ್ರಾಣಹರಣ ಮಾಡುವ ವಿಧಾನವು ಎಲ್ಲ ಸಂದರ್ಭಗಳಲ್ಲಿಯೂ ಕ್ಷಿಪ್ರವಾಗಿ ಸಾವು ತರುತ್ತದೆ ಎನ್ನುವುದಕ್ಕೆ ಆಧಾರವಿಲ್ಲ ಎಂದು ನ್ಯಾಯಾಲಯ ಅಭಿಪ್ರಾಯ ಪಟ್ಟಿತ್ತು.

ಆದರೆ, ಗಲ್ಲಿಗೇರಿಸುವ ವಿಧಾನವನ್ನು ಪುನರ್ ಪರಿಶೀಲಿಸಬೇಕು ಎಂದು ಭಾರತದ ಕಾನೂನು ಆಯೋಗವು 2003ರಲ್ಲಿ ಸೂಚಿಸಿತು. ಇದು ಹೆಚ್ಚು ಮಾನವೀಯವಾಗಿದ್ದು, ಅಮೆರಿಕ ಸೇರಿದಂತೆ ಹಲವು ದೇಶಗಳಲ್ಲಿ ಈ ವಿಧಾನವನ್ನು ಬಳಸಲಾಗುತ್ತಿದೆ ಎನ್ನುವುದು ಆಯೋಗದ ಅಭಿಪ್ರಾಯವಾಗಿತ್ತು.

**ಗಲ್ಲು ಏಕೆ ಬೇಡ?:** 2017ರಲ್ಲಿ ಹಿರಿಯ ವಕೀಲ ರಿಷಿ ಮಲ್ಹೋತ್ರಾ ಸುಪ್ರೀಂ ಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿಯ ಅರ್ಜಿ ಸಲ್ಲಿಸಿ, ನೇಣಿಗೆ ಬದಲು ಮರಣದಂಡನೆಗೆ ಪರ್ಯಾಯ ಮಾರ್ಗ ಅನುಸರಿಸಲು ಆದೇಶಿಸಬೇಕು ಎಂದು ಕೋರಿದರು. ಗಲ್ಲಿಗೇರಿಸಿದರೆ, ಅವರ ದೇಹವು ನೇಣು ಹಗ್ಗದಲ್ಲಿಯೇ 40 ನಿಮಿಷಗಳವರೆಗೆ ಇರುತ್ತದೆ; ಅದು ಕ್ರೂರ ಮತ್ತು ಬರ್ಬರ. ಅದರ ಬದಲು ಮಾನವೀಯವಾದ, ಘನತೆಯಿಂದ ಕೂಡಿದ ವಿಷದ ಚುಚ್ಚುಮದ್ದಿನ ಮಾರ್ಗ ಅನುಸರಿಸುವುದು ಉತ್ತಮ. ಸಂವಿಧಾನದ 21ನೇ ವಿಧಿಯು ಜೀವಿಸುವ ಹಕ್ಕು ಮತ್ತು ಘನತೆಯ ಹಕ್ಕುಗಳನ್ನು ಒಳಗೊಂಡಿರುವಂತೆಯೇ ಘನತೆಯಿಂದ ಸಾಯುವ ಹಕ್ಕನ್ನೂ ನೀಡಿದೆ; ಅಮೆರಿಕದ ಹೆಚ್ಚಿನ ರಾಜ್ಯಗಳಲ್ಲಿ ವಿಷದ ಇಂಜೆಕ್ಷನ್ ನೀಡುವ ಪದ್ಧತಿ ಇದೆ ಎನ್ನುವುದು ಅವರ ವಾದ.

ನೇಣಿಗೇರಿಸುವುದಕ್ಕಿಂತ ಇತರ ಮಾರ್ಗಗಳು ಕಡಿಮೆ ಯಾತನಾದಾಯಕ ಎನ್ನುವುದನ್ನು ನಿರಾಕರಿಸಿದ್ದ ಕೇಂದ್ರ ಸರ್ಕಾರವು, ಈ ಬಗ್ಗೆ ಸುಪ್ರೀಂ ಕೋರ್ಟ್‌ಗೆ 2018ರಲ್ಲಿ ತನ್ನ ನಿಲುವು ಸ್ಪಷ್ಟಪಡಿಸಿತ್ತು. ಇದರ ಬಗ್ಗೆ ತಜ್ಞರ ಸಮಿತಿ ರಚನೆಗೆ ಕ್ರಮ ಕೈಗೊಳ್ಳಬೇಕು ಎಂದು 2023ರಲ್ಲಿ ತಿಳಿಸಿದ್ದ ನ್ಯಾಯಾಲಯವು, ಈ ಕುರಿತು ಸಮಗ್ರ ಮಾಹಿತಿ ಒದಗಿಸುವಂತೆ ಕೇಂದ್ರವನ್ನು ಕೇಳಿತ್ತು. ಆದರೆ, ಅಪರಾಧಿಗಳಿಗೆ ಶಿಕ್ಷೆ ನೀಡುವ ವಿಧಾನದ ಬಗ್ಗೆ ನ್ಯಾಯಾಂಗವು ಶಾಸಕಾಂಗಕ್ಕೆ ನಿರ್ದೇಶಿಸಲಾಗದು ಎಂದು ಅಭಿಪ್ರಾಯಪಟ್ಟಿತ್ತು.

**ಬದಲಾಗದ ಕೇಂದ್ರದ ಧೋರಣೆ:** ತಾನು ಯಾವ ವಿಧಾನದ ಮೂಲಕ ಸಾಯಬೇಕು ಎನ್ನುವ ಆಯ್ಕೆಯನ್ನು ಮರಣದಂಡನೆ ವಿಧಿಸಲ್ಪಟ್ಟಿರುವ ಅಪರಾಧಿಗೇ ನೀಡಬೇಕು ಎನ್ನುವುದು ಮಲ್ಹೋತ್ರಾ ಅವರ ವಾದ. ಆದರೆ, ಅದು ಕಾರ್ಯಸಾಧುವಲ್ಲ ಎಂದು ಕೇಂದ್ರವು ಪ್ರತಿಕ್ರಿಯಿಸಿದೆ.

ಪ್ರಸ್ತುತ ಈ ಕುರಿತ ವಾದ–ಪ್ರತಿವಾದ ನಡೆಯುತ್ತಿದ್ದು, ನ್ಯಾಯಾಲಯ ವಿಚಾರಣೆ ಮುಂದುವರಿಸುತ್ತಿದೆ. ಕಾಲ ಬದಲಾಗಿದೆ; ಅದಕ್ಕೆ ತಕ್ಕಂತೆ ಕೇಂದ್ರ ಸರ್ಕಾರದ ಮನೋಭಾವವು ವಿಕಾಸಗೊಂಡಿಲ್ಲ ಎಂದು ಸುಪ್ರೀಂ ಕೋರ್ಟ್ ಸೂಚ್ಯವಾಗಿ ಹೇಳಿದೆ. ಇನ್ನೊಂದೆಡೆ, ಮರಣದಂಡನೆಯೇ ಅಮಾನವೀಯ ಶಿಕ್ಷಾ ಪದ್ಧತಿಯಾಗಿದ್ದು, ಅದನ್ನು ರದ್ದುಪಡಿಸಬೇಕು ಎನ್ನುವ ಬೇಡಿಕೆ ಇದೆ.

ಆಧಾರ: ಪಿಟಿಐ, ಎಎಫ್‌ಪಿ, ಇಂಡಿಯನ್ ಜರ್ನಲ್ ಆಫ್ ಮೆಡಿಕಲ್ ಎಥಿಕ್ಸ್, ಅಮ್ನೆಸ್ಟಿ ಇಂಟರ್‌ನ್ಯಾಷನಲ್, ದೆಹಲಿಯ ನ್ಯಾಷನಲ್ ಲಾ ಕಾಲೇಜ್ ಯೂನಿವರ್ಸಿಟಿ ವರದಿ

### ಮರಣದಂಡನೆಗೆ ಗುರಿಯಾಗಿರುವವರು

**120** — ಭಾರತದಲ್ಲಿ ಮರಣದಂಡನೆ ವಿಧಿಸಲ್ಪಟ್ಟವರ ಸಂಖ್ಯೆ (2023)

**139** — ಭಾರತದಲ್ಲಿ ಮರಣದಂಡನೆ ವಿಧಿಸಲ್ಪಟ್ಟವರ ಸಂಖ್ಯೆ (2024)

**564** — ಮರಣದಂಡನೆ ಜಾರಿಗಾಗಿ ಎದುರುನೋಡುತ್ತಾ ಭಾರತದ ಜೈಲುಗಳಲ್ಲಿ ಇರುವವರ ಸಂಖ್ಯೆ

**28,085** — ಜಗತ್ತಿನಲ್ಲಿ ಮರಣದಂಡನೆ ವಿಧಿಸಲ್ಪಟ್ಟವರ ಸಂಖ್ಯೆ (2024ರ ಅಂತ್ಯಕ್ಕೆ)

**2,087** — 2024ರಲ್ಲಿ 46 ದೇಶಗಳಲ್ಲಿ ಮರಣದಂಡನೆ ವಿಧಿಸಲ್ಪಟ್ಟವರ ಸಂಖ್ಯೆ

**1,518** — 2024ರಲ್ಲಿ ಮರಣದಂಡನೆ ಶಿಕ್ಷೆ ಜಾರಿಯಿಂದ ಸಾವಿಗೀಡಾದವರ ಸಂಖ್ಯೆ



**32%** 2023ಕ್ಕಿಂತ 2024ರಲ್ಲಿ ಜಗತ್ತಿನಲ್ಲಿ ಮರಣದಂಡನೆಯಿಂದ ಸಾವಿಗೀಡಾದವರ ಪ್ರಮಾಣ ಹೆಚ್ಚಳ

### ಭಾರತದಲ್ಲಿ ಹೆಚ್ಚು

ಜಗತ್ತಿನಲ್ಲಿ ಅತಿ ಹೆಚ್ಚು ಮರಣದಂಡನೆ ವಿಧಿಸುತ್ತಿರುವ ರಾಷ್ಟ್ರಗಳಲ್ಲಿ ಭಾರತವೂ ಒಂದಾಗಿದೆ. ಅದರಲ್ಲೂ ಕೆಳಹಂತದ ನ್ಯಾಯಾಲಯಗಳು ಹೆಚ್ಚಿನ ಪ್ರಮಾಣದಲ್ಲಿ ಮರಣದಂಡನೆ ವಿಧಿಸುತ್ತಿವೆ. ಮರಣದಂಡನೆ ವಿಧಿಸಲ್ಪಟ್ಟ ಪ್ರತಿ ನಾಲ್ವರಲ್ಲಿ ಒಬ್ಬರು ಉತ್ತರ ಪ್ರದೇಶಕ್ಕೆ (130) ಸೇರಿದವರು. ನಂತರದ ಸ್ಥಾನಗಳಲ್ಲಿ ಗುಜರಾತ್ (71), ಮಹಾರಾಷ್ಟ್ರ (42), ಹರಿಯಾಣ (38), ಪಶ್ಚಿಮ ಬಂಗಾಳ (37), ಕೇರಳ (35), ಮಧ್ಯಪ್ರದೇಶ ಇವೆ. ಕರ್ನಾಟಕದಲ್ಲಿ 22 ಮಂದಿಗೆ ಈ ಶಿಕ್ಷೆ ವಿಧಿಸಲಾಗಿದ್ದು, ಜೈಲುವಾಸ ಅನುಭವಿಸುತ್ತಿದ್ದಾರೆ. ಪ್ರಸ್ತುತ ಭಾರತದ ವಿವಿಧ ಜೈಲುಗಳಲ್ಲಿ ಮರಣದಂಡನೆ ವಿಧಿಸಲ್ಪಟ್ಟ 564 ಮಂದಿ (2024ರ ಕೊನೆಗೆ) ಇದ್ದು, ಶಿಕ್ಷೆ ಜಾರಿಯನ್ನು ಎದುರು ನೋಡುತ್ತಿದ್ದಾರೆ. ಇದು ಎರಡು ದಶಕಗಳಲ್ಲಿಯೇ ಅತಿ ದೊಡ್ಡ ಸಂಖ್ಯೆಯಾಗಿದೆ.

### 2024ರಲ್ಲಿ ಮರಣದಂಡನೆಗೆ ಬಳಸಿದ ವಿಧಾನಗಳು



**ಶಿರಚ್ಛೇದ** — ಸೌದಿ ಅರೇಬಿಯಾ

**ನೇಣು** — ಈಜಿಪ್ಟ್, ಇರಾನ್, ಇರಾಕ್, ಕುವೈತ್, ಸಿಂಗಪುರ, ಸಿರಿಯಾ

**ವಿಷದ ಇಂಜೆಕ್ಷನ್** — ಚೀನಾ, ಅಮೆರಿಕ, ವಿಯೆಟ್ನಾಂ

**ಗುಂಡು ಹಾರಿಸಿ ಸಾವು** — ಅಫ್ಘಾನಿಸ್ತಾನ, ಚೀನಾ, ಉತ್ತರ ಕೊರಿಯಾ, ಓಮನ್, ಸೊಮಾಲಿಯಾ, ಯೆಮನ್

**ಸಾರಜನಕದಿಂದ (ನೈಟ್ರೋಜನ್) ಉಸಿರುಕಟ್ಟಿಸುವುದು** — ಅಮೆರಿಕ

### ಮರಣದಂಡನೆ ಹೆಚ್ಚಳ

ಜಗತ್ತಿನ ಶೇ 70ರಷ್ಟು ರಾಷ್ಟ್ರಗಳಲ್ಲಿ ಮರಣದಂಡನೆಯನ್ನು ರದ್ದುಪಡಿಸಲಾಗಿದೆ. ಆದರೂ, ಸುಮಾರು 50 ದೇಶಗಳಲ್ಲಿ ಈ ಶಿಕ್ಷೆ ಕಾನೂನುಬದ್ಧವಾಗಿದೆ. ಇದರಲ್ಲಿ ಭಾರತ, ಅಮೆರಿಕ, ಚೀನಾ, ಅಫ್ಘಾನಿಸ್ತಾನ, ಬಾಂಗ್ಲಾದೇಶ, ಪಾಕಿಸ್ತಾನ, ಜಪಾನ್, ಇರಾನ್, ಇರಾಕ್, ಸೌದಿ ಅರೇಬಿಯಾ, ಥಾಯ್ಲೆಂಡ್ ಮುಂತಾದ ದೇಶಗಳಿವೆ. 2024ರಲ್ಲಿ ಚೀನಾ, ಇರಾನ್, ಸೌದಿ ಅರೇಬಿಯಾ, ಇರಾಕ್, ಯೆಮನ್‌ನಲ್ಲಿ ಹೆಚ್ಚು ಮಂದಿಗೆ ಮರಣದಂಡನೆ ವಿಧಿಸಲಾಗಿದೆ.

ಚೀನಾದಲ್ಲಿ ಅತಿ ಹೆಚ್ಚು ಮಂದಿಗೆ ಸಾವಿನ ಶಿಕ್ಷೆ ನೀಡಲಾಗಿದೆ.ಹೆಚ್ಚು ರಾಷ್ಟ್ರಗಳಲ್ಲಿ ಮರಣದಂಡನೆ ರದ್ದುಪಡಿಸಲಾಗುತ್ತಿದೆಯಾದರೂ ಈ ಶಿಕ್ಷೆಗೆ ಗುರಿಯಾಗುತ್ತಿರುವವರ ಸಂಖ್ಯೆಯೂ ಹೆಚ್ಚಾಗುತ್ತಿದೆ. ಸೌದಿ ಅರೇಬಿಯಾದಲ್ಲಿ ಶಿಕ್ಷೆಯ ಪ್ರಮಾಣವು ಹೆಚ್ಚಾಗುತ್ತಿದ್ದು, 2025ರಲ್ಲಿ ಜಾಗತಿಕ ಮಟ್ಟದಲ್ಲಿ ಈ ಸಂಖ್ಯೆ ಇನ್ನೂ ಏರಿಕೆ ಕಾಣಲಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ.

ಅಮೆರಿಕದಲ್ಲಿ ಪ್ರಸಕ್ತ ವರ್ಷ 39 ಮಂದಿಯನ್ನು ಮರಣದಂಡನೆಗೆ ಈಡು ಮಾಡಲಾಗಿದೆ. ಅವುಗಳಲ್ಲಿ 33 ಮಂದಿಗೆ ವಿಷದ ಇಂಜೆಕ್ಷನ್ ನೀಡಿ, ಇಬ್ಬರಿಗೆ ಗುಂಡು ಹೊಡೆದು, ನಾಲ್ವರ ಮಾಸ್ಕ್‌ಗಳ ಒಳಗೆ ಸಾರಜನಕ ಪೂರೈಸಿ ಉಸಿರುಗಟ್ಟಿಸಿ ಸಾಯಿಸಲಾಗಿದೆ. ಸಾರಜನಕದಿಂದ ಉಸಿರುಗಟ್ಟಿಸುವ ವಿಧಾನವು ಕ್ರೂರ ಮತ್ತು ಅಮಾನವೀಯ ಎಂದು ವಿಶ್ವಸಂಸ್ಥೆ ಆಕ್ಷೇಪಿಸಿದೆ. ಅಮೆರಿಕದ 50 ರಾಜ್ಯಗಳ ಪೈಕಿ 23ರಲ್ಲಿ ಮರಣದಂಡನೆಯನ್ನು ರದ್ದುಪಡಿಸಲಾಗಿದೆ.

### ವೈದ್ಯರ ವಿರೋಧ

ಗಲ್ಲು ಶಿಕ್ಷೆಯ ವಿಧಾನದಲ್ಲಿ, ಅಪರಾಧಿ ಸತ್ತಿದ್ದಾನೆಯೇ ಇಲ್ಲವೇ ಎನ್ನುವುದನ್ನು ದೃಢೀಕರಿಸುವುದಕ್ಕಷ್ಟೇ ವೈದ್ಯರ ಪಾತ್ರವು ಸೀಮಿತವಾಗಿರುತ್ತದೆ. ಆದರೆ, ವಿಷದ ಇಂಜೆಕ್ಷನ್ ಚುಚ್ಚುವ ವಿಧಾನದಲ್ಲಿ ವೈದ್ಯರೇ ಮರಣದಂಡನೆ ಜಾರಿ ಮಾಡುವವರೂ ಆಗಿರುತ್ತಾರೆ. ಹಲವು ದೇಶಗಳಲ್ಲಿ ವೈದ್ಯರು ಇದಕ್ಕೆ ಆಕ್ಷೇಪಣೆ ವ್ಯಕ್ತಪಡಿಸಿದ್ದಾರೆ. ವೈದ್ಯರ ಕಾರ್ಯವು ಜೀವ ಉಳಿಸುವುದೇ ವಿನಾ ಜೀವ ತೆಗೆಯುವುದಲ್ಲ ಎನ್ನುವುದು ಅವರ ವಾದ. ಮರಣದಂಡನೆ ಜಾರಿಯಲ್ಲಿ ವೈದ್ಯರ ಪಾತ್ರ ಪ್ರಮುಖವಾಗಿರುವ ಯಾವುದೇ ವಿಧಾನವನ್ನು ತಾನು ವಿರೋಧಿಸುವುದಾಗಿ ಬ್ರಿಟಿಷ್ ಮೆಡಿಕಲ್ ಕೌನ್ಸಿಲ್ ಹೇಳಿತ್ತು. ವಿಶ್ವ ವೈದ್ಯಕೀಯ ಸಂಘವೂ ಇದರ ವಿರುದ್ಧ ನಿಲುವು ತಳೆದಿದೆ. ಅಮೆರಿಕದಲ್ಲಿಯೂ ಇದಕ್ಕೆ ವಿರೋಧ ವ್ಯಕ್ತವಾಗಿದೆ. ಅಮೆರಿಕದಲ್ಲಿ ವೈದ್ಯರು ಜೈಲು ಅಧಿಕಾರಿಗಳಿಗೇ ಚುಚ್ಚುಮದ್ದು ನೀಡುವ ತರಬೇತಿ ನೀಡುವ ಪದ್ಧತಿ ಅನುಸರಿಸಲಾಯಿತು. ಆದರೆ, ವೈದ್ಯರ ಅನುಪಸ್ಥಿತಿಯಲ್ಲಿ ಈ ವಿಧಾನವು ದೀರ್ಘವೂ ತ್ರಾಸದಾಯಕವೂ ಆಗಿದೆ ಎನ್ನುವ ವರದಿಗಳಿವೆ.

## ❖ ಎಐ, ಡೀಪ್‌ಫೇಕ್‌ಗೆ ನಿಯಮ ಬಿಗಿ

**ಸಂದರ್ಭ: ಸಾಮಾಜಿಕ ಜಾಲತಾಣಗಳಲ್ಲಿ ಕೃತಕ ಬುದ್ಧಿಮತ್ತೆ (ಎಐ) ದುರ್ಬಳಕೆ ತಡೆಯಲು ಮತ್ತು 'ಡೀಪ್‌ಫೇಕ್' ಗಳನ್ನು ನಿಯಂತ್ರಿಸಲು ಸರ್ಕಾರ ಮಾಹಿತಿ ತಂತ್ರಜ್ಞಾನ (ಐಟಿ) ನಿಯಮದಲ್ಲಿ ಬದಲಾವಣೆ ತರುವುದಾಗಿ ಹೇಳಿದೆ.**

- 'ಎಐ' ಬಳಸಿಕೊಂಡು ಸಾಮಾಜಿಕ ಜಾಲತಾಣಗಳ ಮೂಲಕ ಸುಳ್ಳು ಮಾಹಿತಿ ಹರಡುವುದು ಹೆಚ್ಚುತ್ತಿದ್ದು, ಜನರನ್ನು ದಾರಿ ತಪ್ಪಿಸಲು, ಚುನಾವಣಾ ಅಕ್ರಮಗಳಿಗೆ, ಹಣಕಾಸು ವಂಚನೆಗಳಿಗೆ ಎಐ ದುರ್ಬಳಕೆ ಆಗುತ್ತಿದೆ. ಈ ಹಿನ್ನೆಲೆಯಲ್ಲಿ ಐಟಿ ನಿಯಮ ಗಳನ್ನು ಬಿಗಿಗೊಳಿಸುತ್ತಿರುವುದಾಗಿ ಸಚಿವಾಲಯ ಹೇಳಿದೆ.
- ಪ್ರಸ್ತಾವಿತ ಐಟಿ ನಿಯಮದಲ್ಲಿ ಯೂಟ್ಯೂಬ್, ಫೇಸ್‌ಬುಕ್ ಸೇರಿದಂತೆ ಸಾಮಾಜಿಕ ಜಾಲತಾಣಗಳಲ್ಲಿ ಎಐ ಆಧಾರಿತ ಕಂಟೆಂಟ್‌ಗಳನ್ನು ಗುರುತಿಸಲು ಲೇಬಲಿಂಗ್ ಕಡ್ಡಾಯಗೊಳಿಸಲಾಗಿದೆ. ಕಂಟೆಂಟ್ ತೆಗೆದು ಹಾಕುವ ಅಧಿಕಾರವು ಉನ್ನತ ಅಧಿಕಾರಿಗಳಿಗೆ ಮಾತ್ರ ಇರುತ್ತದೆ.
- ಈ ನಿಯಮವು ಜಾಲತಾಣದಲ್ಲಿ ಡೀಪ್‌ಫೇಕ್ ವಿಡಿಯೊ, ತಿದ್ದುಪಡಿ ಮಾಡಿದ ಚಿತ್ರ, ಧ್ವನಿಯನ್ನು ಪತ್ತೆಹಚ್ಚಲೂ ನೆರವಾಗಲಿದೆ. ಕರಡು ಪ್ರಸ್ತಾವಕ್ಕೆ ಆಕ್ಷೇಪಗಳಿದ್ದಲ್ಲಿ ನವೆಂಬರ್ 6ರೊಳಗೆ ದಾಖಲಿಸುವಂತೆ ಸಚಿವಾಲಯವು ಸಾಮಾಜಿಕ ಜಾಲತಾಣ, ಎಐ ಕಂಟೆಂಟ್ ಸೃಷ್ಟಿಸುವ ಸಂಸ್ಥೆಗಳಿಗೆ ಸೂಚಿಸಿದೆ.

## ❖ ಭಾರತ ಮೂಲದ ಸುನೀಲ್ ಅಮೃತ್‌ಗೆ 'ಬ್ರಿಟಿಷ್ ಅಕಾಡೆಮಿ' ಪುಸ್ತಕ ಪ್ರಶಸ್ತಿ

**ಸಂದರ್ಭ: ಭಾರತೀಯ ಮೂಲದ ಇತಿಹಾಸಕಾರ ಸುನೀಲ್ ಅಮೃತ್ ಅವರ 'ದಿ ಬರ್ನಿಂಗ್ ಅರ್ಥ್: ಆ್ಯನ್ ಎನ್ವಿರಾನ್‌ಮೆಂಟಲ್ ಹಿಸ್ಟರಿ ಆಫ್ ದಿ ಲಾಸ್ಟ್ 500 ಇಯರ್ಸ್' ಕೃತಿಯು ಈ ವರ್ಷದ 'ಬ್ರಿಟಿಷ್ ಅಕಾಡೆಮಿ' ಪುಸ್ತಕ ಪ್ರಶಸ್ತಿಗೆ ಭಾಜನವಾಗಿದೆ.**

- ಸೃಜನೇತರ ಕೃತಿಗಳಿಗಾಗಿ ನೀಡುವ ಈ ಅಂತರರಾಷ್ಟ್ರೀಯ ಪ್ರಶಸ್ತಿಯು ಒಟ್ಟು 25 ಸಾವಿರ ಪೌಂಡ್ (ಅಂದಾಜು ₹29 ಲಕ್ಷ) ಮೊತ್ತವನ್ನು ಒಳಗೊಂಡಿದೆ. ಅಮೆರಿಕದ ಯೇಲ್ ವಿಶ್ವವಿದ್ಯಾಲಯದಲ್ಲಿ ಇತಿಹಾಸ ಪ್ರಾಧ್ಯಾಪಕರಾಗಿರುವ ಅಮೃತ್, ದಕ್ಷಿಣ ಭಾರತ ಮೂಲದ ದಂಪತಿಗೆ ಕೆನ್ಯಾದಲ್ಲಿ ಜನಿಸಿದರು.
- ಸಿಂಗಪುರದಲ್ಲಿ ಆರಂಭಿಕ ಶಿಕ್ಷಣ ಪಡೆದ ಅವರು, ಕೇಂಬ್ರಿಜ್ ವಿಶ್ವವಿದ್ಯಾಲಯದಿಂದ ಪದವಿ ಪಡೆದಿದ್ದಾರೆ. ಬುಧವಾರ ಸಂಜೆ ಲಂಡನ್‌ನ ಬ್ರಿಟಿಷ್ ಅಕಾಡೆಮಿಯಲ್ಲಿ ನಡೆದ ಸಮಾರಂಭದಲ್ಲಿ ತೀರ್ಪುಗಾರರ ತಂಡದ ಅಧ್ಯಕ್ಷೆ ರೆಬೆಕಾ ಅರ್ಲ್ ಈ ಪ್ರಶಸ್ತಿ ಘೋಷಿಸಿದರು.

## ❖ ಎಸ್‌ಬಿಐಗೆ ವಿಶ್ವದ ಅತ್ಯುತ್ತಮ ಗ್ರಾಹಕ ಬ್ಯಾಂಕ್ ಪ್ರಶಸ್ತಿ

**ಸಂದರ್ಭ: 2025ನೇ ಸಾಲಿನ 'ವಿಶ್ವದ ಅತ್ಯುತ್ತಮ ಗ್ರಾಹಕ ಬ್ಯಾಂಕ್' ಮತ್ತು 'ಭಾರತದಲ್ಲಿನ ಅತ್ಯುತ್ತಮ ಬ್ಯಾಂಕ್' ಪ್ರಶಸ್ತಿಗೆ ಸರ್ಕಾರಿ ಸ್ವಾಮ್ಯದ ಭಾರತೀಯ ಸ್ಟೇಟ್ ಬ್ಯಾಂಕ್ (ಎಸ್‌ಬಿಐ) ಭಾಜನವಾಗಿದೆ.**

- **ವಿಶ್ವ ಬ್ಯಾಂಕ್, ಅಂತರರಾಷ್ಟ್ರೀಯ ಹಣಕಾಸು ನಿಧಿಯ (ಐಎಂಎಫ್)** ವಾರ್ಷಿಕ ಸಭೆಯಲ್ಲಿ ನ್ಯೂಯಾರ್ಕ್ ಮೂಲದ ಗ್ಲೋಬಲ್ ಫೈನಾನ್ಸ್ ಸಂಸ್ಥೆ ಈ ಪ್ರಶಸ್ತಿ ಪ್ರದಾನ ಮಾಡಿದೆ.
- ಈ ಎರಡು ಪ್ರಶಸ್ತಿಗಳು ನಾವೀನ್ಯ, ಆರ್ಥಿಕ ಒಳಗೊಳ್ಳುವಿಕೆ ಮತ್ತು ಗ್ರಾಹಕರಿಗೆ ಶ್ರೇಷ್ಠವಾಗಿದ್ದನ್ನು ನೀಡುವುದಕ್ಕೆ ಬದ್ಧವಾಗಿರುವ ಜಾಗತಿಕ ಬ್ಯಾಂಕಿಂಗ್ ನಾಯಕನಾಗಿ ಎಸ್‌ಬಿಐ ಸ್ಥಾನವನ್ನು ಸದೃಢಗೊಳಿಸುತ್ತದೆ ಎಂದು ಬ್ಯಾಂಕ್ ಗುರುವಾರ ತಿಳಿಸಿದೆ.
- ಗ್ಲೋಬಲ್ ಫೈನಾನ್ಸ್‌ನಿಂದ ಎಸ್‌ಬಿಐಗೆ ಈ ಪ್ರಶಸ್ತಿ ಬಂದಿದ್ದಕ್ಕಾಗಿ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪೀಯೂಷ್ ಗೋಯಲ್ ಅವರು ಸಾಮಾಜಿಕ ಜಾಲತಾಣ 'ಎಕ್ಸ್' ಮೂಲಕ ಅಭಿನಂದನೆ ಸಲ್ಲಿಸಿದ್ದಾರೆ. **ಪ್ರಸ್ತುತ ಬ್ಯಾಂಕ್ 52 ಕೋಟಿ ಗ್ರಾಹಕರನ್ನು ಹೊಂದಿದೆ.**

Dr. Rajkumar IAS Academy

## ❖ ರಾಣಿ ಚನ್ನಮ್ಮ ನೆನಪಿನ ವಿಶೇಷ ನಾಣ್ಯ

**ಸಂದರ್ಭ: ಬ್ರಿಟಿಷರ ವಿರುದ್ಧ ಹೋರಾಡಿದ ಕಿತ್ತೂರು ರಾಣಿ ಚನ್ನಮ್ಮ ಅವರ 200ನೇ ಜಯಂತಿ ಅಂಗವಾಗಿ ಕೇಂದ್ರ ಸರ್ಕಾರವು ₹200 ಮೌಲ್ಯದ ವಿಶೇಷ ನಾಣ್ಯ ರೂಪಿಸಿದೆ.**

- **ಈ ನಾಣ್ಯವು ಶೇ 50ರಷ್ಟು ಬೆಳ್ಳಿಯನ್ನು ಒಳಗೊಂಡಿದೆ. ಉಳಿದಂತೆ ಶೇ 40ರಷ್ಟು ತಾಮ್ರ, ಶೇ 5ರಷ್ಟು ಸತು ಮತ್ತು ಶೇ 5ರಷ್ಟು ನಿಕೆಲ್** ಅನ್ನು ಈ ನಾಣ್ಯ ತಯಾರಿಕೆಯಲ್ಲಿ ಬಳಸಲಾಗಿದೆ ಎಂದು ಕೇಂದ್ರ ಹಣಕಾಸು ಸಚಿವಾಲಯವು ಅಧಿಸೂಚನೆಯಲ್ಲಿ ತಿಳಿಸಿದೆ.
- **ಹೈದರಾಬಾದ್‌ನಲ್ಲಿ ಈ ನಾಣ್ಯ ತಯಾರಾಗಿದೆ**.
- ನಾಣ್ಯದ ಒಂದು ಬದಿಯಲ್ಲಿ ರಾಣಿ ಚನ್ನಮ್ಮರ ಚಿತ್ರವಿರಲಿದೆ. ನಾಣ್ಯದ ಮೇಲೆ ಮತ್ತು ಕೆಳಭಾಗದಲ್ಲಿ 'ಕಿತ್ತೂರಿನ ರಾಣಿ ಚನ್ನಮ್ಮರ ಜಯದ 200ನೇ ವರ್ಷಾಚರಣೆ' ಎಂಬ ಬರಹ ಇರಲಿದೆ. ಇನ್ನೊಂದು ಬದಿಯಲ್ಲಿ ₹200 ಸಂಕೇತ ಮತ್ತು ರಾಷ್ಟ್ರ ಲಾಂಛನ ಇರಲಿದೆ. ನಾಣ್ಯದ ಸುತ್ತಳತೆ 44 ಮಿ.ಮೀ. ಇದ್ದು, 35 ಗ್ರಾಂ ತೂಕ ಹೊಂದಿದೆ ಎಂದು ತಿಳಿಸಿದೆ.

## ❖ ಅಸಿಯಾನ್ ಶೃಂಗ: ವರ್ಚುವಲ್ ಮೂಲಕ ಮೋದಿ ಭಾಗಿ

**ಸಂದರ್ಭ:ಮುಂದಿನ ವಾರ ಮಲೇಷ್ಯಾದಲ್ಲಿ ನಡೆಯಲಿರುವ ಅಸಿಯಾನ್ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ವರ್ಚುವಲ್ ಆಗಿ ಹಾಜರಾಗಲಿದ್ದಾರೆ.**

- ಅಸಿಯಾನ್ ಸಭೆಯು ಅಕ್ಟೋಬರ್ 26ರಿಂದ 28ರವರೆಗೆ ನಡೆಯಲಿದೆ.
- 'ಅಸಿಯಾನ್ ಶೃಂಗಸಭೆಯಲ್ಲಿ ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿಯಾಗುವುದನ್ನು ತಪ್ಪಿಸಿಕೊಳ್ಳಲು ಪ್ರಧಾನಿ ಮೋದಿ ಅವರು ವರ್ಚುವಲ್ ಆಗಿ ಭಾಗಿಯಾಗುತ್ತಿದ್ದಾರೆ' ಎಂದು ಕಾಂಗ್ರೆಸ್ ಟೀಕಿಸಿದೆ.

## ❖ ₹79,000 ಕೋಟಿ ಮೌಲ್ಯದ ಶಸ್ತ್ರಾಸ್ತ್ರ ಖರೀದಿಗೆ ಒಪ್ಪಿಗೆ

**ಸಂದರ್ಭ: ಸೇನಾ ಯುದ್ಧ ಸಾಮರ್ಥ್ಯಗಳನ್ನು ಹೆಚ್ಚಿಸಲು ₹79,000 ಕೋಟಿ ಮೌಲ್ಯದ ಖರೀದಿ ಪ್ರಸ್ತಾವನೆ ಗಳಿಗೆ ರಕ್ಷಣಾ ಸಚಿವಾಲಯ ಗುರುವಾರ ಅನುಮೋದನೆ ನೀಡಿದೆ. ರಕ್ಷಣಾ ಸಚಿವ ರಾಜನಾಥ ಸಿಂಗ್ ಅವರ ಅಧ್ಯಕ್ಷತೆಯಲ್ಲಿ ನಡೆದ ರಕ್ಷಣಾ ಸ್ವಾಧೀನ ಮಂಡಳಿ (ಡಿಎಸಿ) ಸಭೆಯಲ್ಲಿ ಈ ಅನುಮೋದನೆ ನೀಡಲಾಗಿದೆ.**

- ನಾಗ್ ಕ್ಷಿಪಣಿಗಳು, ಮೂರೂ ಸಶಸ್ತ್ರ ಪಡೆಗಳು ಬಳಸಬಹುದಾದ ಯುದ್ಧ ಹಡಗುಗಳು ಮತ್ತು ಎಲೆಕ್ಟ್ರಾನಿಕ್ ಗುಪ್ತಚರ ಹಾಗೂ ಕಣ್ಗಾವಲು ವ್ಯವಸ್ಥೆಗಳು ಸೇರಿದಂತೆ ಶಸ್ತ್ರಾಸ್ತ್ರ ಮತ್ತು ಸೇನಾ ಹಾರ್ಡ್‌ವೇರ್‌ಗಳ ಖರೀದಿಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು.
- 'ಆಪರೇಷನ್ ಸಿಂಧೂರ' ನಡೆದ ನಂತರ ಶಸ್ತ್ರಾಸ್ತ್ರ ಖರೀದಿಗೆ ಸಂಬಂಧಿಸಿದ ಎರಡನೇ ನಿರ್ಧಾರ ಇದಾಗಿದೆ. ಆಗಸ್ಟ್ 5ರಂದು ₹67,000 ಕೋಟಿ ಮೌಲ್ಯದ ಖರೀದಿ ಯೋಜನೆಗಳಿಗೆ ಅನುಮೋದನೆ ನೀಡಲಾಗಿತ್ತು.

## ❖ ಭಾರತ ಕಬಡ್ಡಿ ತಂಡಗಳಿಗೆ ಚಿನ್ನ

**ಸಂದರ್ಭ: ಭಾರತದ ಪುರುಷರ ಮತ್ತು ಮಹಿಳೆಯರ ತಂಡಗಳು ಗುರುವಾರ ಏಷ್ಯನ್ ಯೂತ್ ಗೇಮ್ಸ್ ನಲ್ಲಿ ಚಿನ್ನದ ಪದಕ ಗೆದ್ದುಕೊಂಡವು.**

- ಭಾರತ ಎರಡು ಚಿನ್ನ, ಮೂರು ಬೆಳ್ಳಿ ಮತ್ತು ಐದು ಕಂಚು ಗೆದ್ದು ಪದಕ ಪಟ್ಟಿಯಲ್ಲಿ ಐದನೇ ಸ್ಥಾನದಲ್ಲಿದೆ. ಚೀನಾ ಆರು ಚಿನ್ನ, 10 ಬೆಳ್ಳಿ ಮತ್ತು ಒಂದು ಕಂಚಿನೊಂದಿಗೆ ಅಗ್ರಸ್ಥಾನದಲ್ಲಿದೆ, ನಂತರದಲ್ಲಿ ಥಾಯ್ಲೆಂಡ್, ಉಜ್ಬೇಕಿಸ್ತಾನ ದೇಶಗಳಿವೆ.

Dr.Rajkumar IAS/KAS Academy

- ಮಹಿಳೆಯರ ಕಬಡ್ಡಿ ಫೈನಲ್‌ನಲ್ಲಿ ಭಾರತ 75–21ರಿಂದ ಇರಾನ್ ತಂಡವನ್ನು ಮಣಿಸಿತು. ಪುರುಷರ ತಂಡವು 35–32ರಿಂದ ಇರಾನ್ ತಂಡವನ್ನು ಸೋಲಿಸಿತು.

IAS/KAS Academy




## ❖ ಮೊಬೈಲ್‌ನಲ್ಲಿ ಟ್ರಾಫಿಕ್ ಸಿಗ್ನಲ್ ಮಾಹಿತಿ

**ಸಂದರ್ಭ: 'ಸಿಲಿಕಾನ್ ಸಿಟಿ' ಯ ಟ್ರಾಫಿಕ್ ಸಿಗ್ನಲ್‌ಗಳಲ್ಲಿ ಹಸಿರು, ಕೆಂಪು ನಿಶಾನೆ ತೋರುವ ಸಮಯ ಎಷ್ಟು ಸೆಕೆಂಡ್‌ಗಳವರೆಗೆ ಇರಲಿದೆ ಎಂಬ ರಿಯಲ್ ಟೈಮ್ ಮಾಹಿತಿಯನ್ನು ಮ್ಯಾಪಲ್ಸ್ ಆ್ಯಪ್‌ನಲ್ಲಿ ಲೈವ್ ಆಗಿ ನೀಡ ಲಾಗುತ್ತದೆ. ಬೆಂಗಳೂರು ನಗರದಲ್ಲಿ ಮೊದಲ ಬಾರಿಗೆ ಇದನ್ನು ಪ್ರಾಯೋಗಿಕ ವಾಗಿ ಜಾರಿಗೊಳಿಸಲಾಗಿದೆ. ಇದರಿಂದ ಯಾವ ರಸ್ತೆಯಲ್ಲಿ ಎಷ್ಟು ಸಮಯ ದವರೆಗೆ ಸಂಚಾರ ದಟ್ಟಣೆ ಇರಲಿದೆ ಎಂಬ ಮಾಹಿತಿಯನ್ನು ಪ್ರಯಾಣಿಕರು ಅಂಗೈಯಲ್ಲಿ ಪಡೆದುಕೊಳ್ಳಬಹುದು.**


- ಬೆಂಗಳೂರು ನಗರ ಸಂಚಾರ ಪೊಲೀಸ್ ವಿಭಾಗ, ಅರ್ಕಾಡಿಸ್ ಇಂಡಿಯಾ ಮತ್ತು ಮ್ಯಾಪಲ್ಸ್ (ಮ್ಯಾಪ್ ಮೈ ಇಂಡಿಯಾ) ಜಂಟಿಯಾಗಿ ಈ ಉಪಕ್ರಮವನ್ನು ಜಾರಿಗೊಳಿಸಿವೆ.
- ಮ್ಯಾಪಲ್ಸ್ ಆ್ಯಪ್ ಬಳಕೆದಾರರು ಬೆಂಗಳೂರು ನಗರದ ಟ್ರಾಫಿಕ್ ಸಿಗ್ನಲ್‌ಗಳು ಸಮೀಪಿಸುತ್ತಿದ್ದಂತೆಯೇ ಟ್ರಾಫಿಕ್ ಸಿಗ್ನಲ್‌ಗಳು ಕೆಂಪು ಅಥವಾ ಹಸಿರು ನಿಶಾನೆಗೆ ಬದಲಾಗಲು ಎಷ್ಟು ಸೆಕೆಂಡುಗಳಿವೆ ಎಂಬ ನಿಖರ ಮಾಹಿತಿಯನ್ನು ಈಗ ಮೊಬೈಲ್‌ನಲ್ಲಿಯೇ ವೀಕ್ಷಿಸಬಹುದು.
- ಪ್ರತಿ ಸಿಗ್ನಲ್‌ಗೂ ಕಾಲಮಿತಿ ಅಳವಡಿಸಿ ವಾಹನ ಸಂಚಾರ ನಿಯಂತ್ರಣ ಮಾಡುವ ಹಳೆಯ ವ್ಯವಸ್ಥೆಯ ಬದಲಿಗೆ ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನ ಬಳಸಿಕೊಂಡು ಆಯಾ ರಸ್ತೆಗಳಲ್ಲಿನ ವಾಹನ ದಟ್ಟಣೆಯನ್ನು ಗ್ರಹಿಸಿ ಹಸಿರು ನಿಶಾನೆ ನೀಡುವ ಅಡ್ಯಾಪ್ಟಿವ್ ಟ್ರಾಫಿಕ್ ಕಂಟ್ರೋಲ್ ಸಿಸ್ಟಮ್ (ಎಟಿಸಿಎಸ್) ನಗರದ 169 ಜಂಕ್ಷನ್‌ಗಳಲ್ಲಿ ಕಾರ್ಯಾಚರಣೆ ಮಾಡುತ್ತಿದೆ. ಈ ಟ್ರಾಫಿಕ್ ಸಿಗ್ನಲ್‌ಗಳು ಎಷ್ಟು ಸೆಕೆಂಡುಗಳ ಕಾಲ ಹಸಿರು, ಕೆಂಪು ನಿಶಾನೆ ತೋರುತ್ತವೆ ಎಂಬುದನ್ನು ಮ್ಯಾಪಲ್ಸ್ ಆ್ಯಪ್‌ನಲ್ಲಿ ನೋಡಬಹುದು.
- 'ಈ ಎಐ ಚಾಲಿತ ಸ್ಮಾರ್ಟ್ ಸಿಗ್ನಲ್‌ಗಳಲ್ಲಿ ವೆಹಿಕಲ್ ಆಕ್ಚುಯೇಟೆಡ್ ಕಂಟ್ರೋಲ್ಡ್ (ವಿಎಸಿ) ತಂತ್ರಜ್ಞಾನದ ಸಹಾಯದಿಂದ ಸಿಗ್ನಲ್‌ಗಳಲ್ಲಿ ಬಿತ್ತರಿಸುವ ನೈಜ ಸಮಯವನ್ನು ಮ್ಯಾಪಲ್ಸ್ ಆ್ಯಪ್‌ನಲ್ಲಿ ತೋರಿಸಲಾಗುತ್ತದೆ. ಇದನ್ನು ಸಂಚಾರ ವಿಭಾಗದ ಪೊಲೀಸರು ಮ್ಯಾನ್ಯುಯಲ್ ಆಗಿ ನಿರ್ವಹಣೆ ಮಾಡಿದರೆ, ಆ್ಯಪ್‌ನಲ್ಲಿ ಮಾಹಿತಿ ಸಿಗುವುದಿಲ್ಲ' ಎಂದು ಸಂಚಾರ ವಿಭಾಗದ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದರು.
- 'ಎಐ ಸಿಗ್ನಲ್‌ಗಳಲ್ಲಿ ಬರುವ ಕೌಂಟ್‌ಡೌನ್ ಅವಧಿಯನ್ನು ಮ್ಯಾಪಲ್ಸ್ ಆ್ಯಪ್‌ನಲ್ಲಿ ತೋರಿಸಲಾಗುತ್ತಿದೆ. ಇದರಿಂದ ವಾಹನ ಸವಾರರು ಟ್ರಾಫಿಕ್ ಸಿಗ್ನಲ್‌ನ 500 ಮೀಟರ್ ದೂರದಿಂದಲೇ ಹಸಿರು ಅಥವಾ ಕೆಂಪು ನಿಶಾನೆ ಬರಲು ಎಷ್ಟು ಸೆಕೆಂಡುಗಳಿವೆ ಎಂಬುದನ್ನು ತಿಳಿದುಕೊಂಡು, ಬೇರೆ ಮಾರ್ಗದ ಮೂಲಕ ತೆರಳಲು ಅವಕಾಶ ಕಲ್ಪಿಸುತ್ತದೆ. ನಗರದಲ್ಲಿ ಹೆಚ್ಚುತ್ತಿರುವ ಸಂಚಾರ ದಟ್ಟಣೆಯನ್ನು ನಿಯಂತ್ರಿಸಲು ಇದು ಸಹಾಯಕವಾಗಲಿದೆ' ಎಂದು ಅವರು ವಿವರಿಸಿದರು.

### 'ಹಲವು ಆವಿಷ್ಕಾರಗಳಿಗೆ ಮ್ಯಾಪಲ್ಸ್ ಸಾಕ್ಷಿ'

- 'ಟ್ರಾಫಿಕ್ ಸಿಗ್ನಲ್‌ನ ಹಸಿರು ಅಥವಾ ಕೆಂಪು ನಿಶಾನೆ ತೋರುವ ಸಮಯ ಎಷ್ಟು ಸೆಂಕಡ್‌ಗಳವರೆಗೆ ಇರಲಿದೆ ಎಂಬ ಮಾಹಿತಿಯನ್ನು ಈಗ ಮ್ಯಾಪಲ್ಸ್ ಆ್ಯಪ್‌ನಲ್ಲಿಯೂ ನೋಡಬಹುದು. ಸ್ವದೇಶಿ ನಿರ್ಮಿತ್ ಆ್ಯಪ್ ಇನ್ನೂ ಹಲವು ಆವಿಷ್ಕಾರಗಳಿಗೆ ಸಾಕ್ಷಿಯಾಗಲಿದೆ' ಎಂದು ಮ್ಯಾಪ್ ಮೈ ಇಂಡಿಯಾ ನಿರ್ದೇಶಕ ರೋಹನ್ ವರ್ಮಾ ಅವರು ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ.

Dr. Rajkumar IAS/KAS Academy

## ❖ ಸುಧಾರಣೆಯ ಹಾದಿಯಲ್ಲಿ ಎನ್‌ಪಿಎಸ್



# ಸುಧಾರಣೆಯ ಹಾದಿಯಲ್ಲಿ ಎನ್‌ಪಿಎಸ್

ರಾಷ್ಟ್ರೀಯ ಪಿಂಚಣಿ ವ್ಯವಸ್ಥೆ (ಎನ್‌ಪಿಎಸ್) ಬದಲಾವಣೆಯ ಹಾದಿಯಲ್ಲಿದೆ. ಈ ವ್ಯವಸ್ಥೆಯಿಂದ ಹೊರಬರುವ ಮತ್ತು ಅದರಲ್ಲಿ ತೊಡಗಿಸಿರುವ ಹಣ ಹಿಂಪಡೆಯುವ ಸಂಬಂಧದ ನಿಯಮಗಳನ್ನು ಸರಳೀಕರಣಗೊಳಿಸಲು ಪಿಂಚಣಿ ನಿಧಿ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರವು ಕರಡು ಪ್ರಕಟಿಸಿದೆ. ಮುಖ್ಯವಾಗಿ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನೌಕರರನ್ನು ಹೊರತುಪಡಿಸಿ ಉಳಿದೆಲ್ಲಾ ಚಂದಾದಾರರಿಗೆ (ಟೈರ್‌–1) ಪಿಂಚಣಿ ಯೋಜನೆಯಿಂದ ಹೊರಬರಲು ಪ್ರಸ್ತುತ ಇರುವ 60 ವರ್ಷ ವಯಸ್ಸಿನ ಮಿತಿಯನ್ನು ಕಡಿಮೆ ಮಾಡಲು ಪ್ರಸ್ತಾವಿಸಲಾಗಿದೆ. ಇದೇ ರೀತಿ, ಚಂದಾದಾರರ ಅಗತ್ಯಗಳಿಗೆ ತಕ್ಕಂತೆ ಹೆಚ್ಚು ಹಣ ಹಿಂಪಡೆಯಲು ಅವಕಾಶ ಕಲ್ಪಿಸುವ ಪ್ರಸ್ತಾವವನ್ನೂ ಕರಡು ಒಳಗೊಂಡಿದೆ

• ಕೆ.ಎಚ್.ಓಬಳೇಶ್

ಖಾಸಗಿ ವಲಯದ ಬಹುತೇಕ ಉದ್ಯೋಗಿಗಳು ಬಾಳಿನ ಮುಸ್ಸಂಜೆಯಲ್ಲಿ ಜೀವನ ನಿರ್ವಹಣೆಗೆ ಇಡುಗಂಟು ಇಲ್ಲದೆ ತೊಂದರೆಗೆ ಸಿಲುಕುತ್ತಾರೆ. ನಿವೃತ್ತಿ ನಂತರದ ಬದುಕಿನ ಬಂಡಿ ಎಳೆಯಲು ಪೂರ್ವಸಿದ್ಧತೆ ಇಲ್ಲದವರ ಕೊರಳಿಗೆ ಸಂಕಷ್ಟಗಳ ಸಂಕೋಲೆ ಬೀಳುತ್ತದೆ. ಅಂಥವರಿಗೆ ನೆರವಾಗಲೆಂದೇ ಕೇಂದ್ರ ಸರ್ಕಾರವು ಪಿಂಚಣಿ ಯೋಜನೆಯನ್ನು ಖಾಸಗಿಯವರಿಗೂ ವಿಸ್ತರಿಸಿತ್ತು.

2004ರಲ್ಲಿ ಕೇಂದ್ರ ಸರ್ಕಾರವು ಹಳೆಯ ಪಿಂಚಣಿ ವ್ಯವಸ್ಥೆಯನ್ನು (ಒಪಿಎಸ್) ರದ್ದುಪಡಿಸಿ, ಸಾಮಾಜಿಕ ಭದ್ರತೆಯ ಭಾಗವಾಗಿ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು (ಎನ್‌ಪಿಎಸ್) ಜಾರಿಗೊಳಿಸಿತು. ಆರಂಭದಲ್ಲಿ ಈ ಯೋಜನೆಯು ಕೇಂದ್ರ ಸರ್ಕಾರಿ ನೌಕರರಿಗಷ್ಟೇ ಸೀಮಿತವಾಗಿತ್ತು. 2009ರಿಂದ ಖಾಸಗಿ ವಲಯದ ಉದ್ಯೋಗಿಗಳಿಗೂ ಇದನ್ನು ವಿಸ್ತರಿಸಿತು. ಪ್ರಸ್ತುತ ಈ ಯೋಜನೆಯು ಸಾರ್ವಜನಿಕ, ಖಾಸಗಿ, ಅಸಂಘಟಿತ ವಲಯದ ಉದ್ಯೋಗಿಗಳು ಮತ್ತು ಮಕ್ಕಳೂ ಸೇರಿದಂತೆ ಎಲ್ಲಾ ನಾಗರಿಕರಿಗೂ ಮುಕ್ತವಾಗಿದೆ. ಪಿಂಚಣಿ ನಿಧಿ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರವು (ಪಿಎಫ್‌ಆರ್‌ಡಿಎ) ಇದರ ನಿರ್ವಹಣೆಯ ಹೊಣೆ ಹೊತ್ತಿದೆ.

ಎನ್‌ಪಿಎಸ್, ಷೇರು ಮಾರುಕಟ್ಟೆ ಸಂಯೋಜಿತ ಹೂಡಿಕೆ ಮತ್ತು ಉಳಿತಾಯ ಯೋಜನೆ. ನಿವೃತ್ತಿ ನಂತರವೂ ನಿಯಮಿತ ಆದಾಯವನ್ನು ಒದಗಿಸುತ್ತದೆ. ಜೊತೆಗೆ, ಚಂದಾದಾರರಿಗೆ ಆರ್ಥಿಕ ಸ್ಥಿರತೆ ಮತ್ತು ಭದ್ರತೆಯನ್ನೂ ಖಾತರಿಪಡಿಸುತ್ತದೆ. ಇದರಡಿ ಹೂಡಿಕೆ ಮಾಡುವವರಿಗೆ ಆದಾಯ ತೆರಿಗೆಯ ವಿನಾಯಿತಿ ಲಭಿಸುತ್ತದೆ. ಎನ್‌ಪಿಎಸ್‌ನಡಿ ಹೂಡಿಕೆ ಮಾಡಿದರೆ ಸೆಕ್ಷನ್ 80ಸಿ ಅಡಿ ₹1.50 ಲಕ್ಷ ಹಾಗೂ ಸೆಕ್ಷನ್ 80ಸಿಸಿಡಿ (1ಬಿ) ಅಡಿ ₹50 ಸಾವಿರ ವಿನಾಯಿತಿ ದೊರೆಯುತ್ತದೆ.

ಮತ್ತೊಂದೆಡೆ, ಮ್ಯೂಚುವಲ್ ಫಂಡ್‌ಗಳ ನಿರ್ವಹಣಾ ಶುಲ್ಕಕ್ಕೆ ಹೋಲಿಸಿದರೆ ಎನ್‌ಪಿಎಸ್ ನಿರ್ವಹಣಾ ಶುಲ್ಕ ಅತ್ಯಲ್ಪ. ಮ್ಯೂಚುವಲ್ ಫಂಡ್‌ಗಳ ವಾರ್ಷಿಕ ನಿರ್ವಹಣಾ ಶುಲ್ಕ ಶೇ 1ರಿಂದ ಶೇ 2.5ರಷ್ಟಿದೆ. ಎನ್‌ಪಿಎಸ್‌ನಲ್ಲಿ ವಾರ್ಷಿಕ ನಿರ್ವಹಣಾ ಶುಲ್ಕ ಶೇ 0.09ರಷ್ಟಿದೆ. ಅಂದರೆ ₹1 ಲಕ್ಷ ಹೂಡಿಕೆ ಮೊತ್ತಕ್ಕೆ ಚಂದಾದಾರರು ಕೇವಲ ₹90 ಶುಲ್ಕವನ್ನಷ್ಟೆ ಭರಿಸುತ್ತಾರೆ. ಈ ಯೋಜನೆಯಡಿ ಇಂಥ ಸಾಕಷ್ಟು ಅನುಕೂಲಗಳಿದ್ದರೂ ಅರಿವಿನ ಕೊರತೆಯಿಂದಾಗಿ ಹೆಚ್ಚು ಜನಪ್ರಿಯತೆ ಪಡೆದಿಲ್ಲ.

**ನಿಯಮ ಇನ್ನಷ್ಟು ಸರಳ:** ಇದಕ್ಕಾಗಿಯೇ ಪಿಂಚಣಿ ನಿಧಿ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರವು ಎನ್‌ಪಿಎಸ್‌ನಲ್ಲಿ ಹೂಡಿಕೆ, ಚಂದಾದಾರಿಕೆ ಅಂತ್ಯಗೊಳಿಸುವ ಮತ್ತು ಹಣ ಹಿಂಪಡೆಯುವಿಕೆ ಪ್ರಕ್ರಿಯೆಯನ್ನು ಮತ್ತಷ್ಟು ಸರಳಗೊಳಿಸಲು ಅಣಿಯಾಗಿದೆ. ಇದಕ್ಕಾಗಿ ಪಿಂಚಣಿ ನಿಧಿ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರ (ರಾಷ್ಟ್ರೀಯ ಪಿಂಚಣಿ ವ್ಯವಸ್ಥೆಯಡಿ ನಿರ್ಗಮನ ಮತ್ತು ಹಿಂಪಡೆಯುವಿಕೆ) ನಿಯಮಗಳು–2015ರ ತಿದ್ದುಪಡಿ ಕರಡು ಪ್ರಕಟಿಸಿದೆ. ಉದ್ದೇಶಿತ ತಿದ್ದುಪಡಿ ನಿಯಮಗಳು ಕೇಂದ್ರ ಮತ್ತು ರಾಜ್ಯ ಸರ್ಕಾರಿ ನೌಕರರನ್ನು ಹೊರತುಪಡಿಸಿ ಉಳಿದ ಎಲ್ಲ ರೀತಿಯ ಉದ್ಯೋಗಿಗಳಿಗೂ ಅನ್ವಯಿಸುತ್ತವೆ.

ಎನ್‌ಪಿಎಸ್ ಸ್ವಾವಲಂಬನೆ (ಅಸಂಘಟಿತ ವಲಯ), ಎನ್‌ಪಿಎಸ್ ವಾತ್ಸಲ್ಯ (ಮಕ್ಕಳ ಹೆಸರಿನಲ್ಲಿ ಚಂದಾದಾರಿಕೆ), ಎಲ್ಲ ನಾಗರಿಕರು, ಕಾರ್ಪೊರೇಟ್ ವಲಯಗಳ ಸಿಬ್ಬಂದಿಗೆ (ಎನ್‌ಪಿಎಸ್‌ನ ಟೈರ್‌–1 ಖಾತೆ) ಈ ನಿಯಮಗಳು ಅನ್ವಯಿಸುತ್ತವೆ.



**ಎನ್‌ಪಿಎಸ್: ಸರ್ಕಾರೇತರ ಚಂದಾದಾರರು** (ಲಕ್ಷಗಳಲ್ಲಿ)

| | |
|---|---|
| ಕಾರ್ಪೊರೇಟ್ | 25.03 |
| ಎಲ್ಲ ನಾಗರಿಕರು | 45.19 |
| ಸ್ವಾವಲಂಬನೆ | 33.47 |
| ವಾತ್ಸಲ್ಯ | 1.42 |

**ಎನ್‌ಪಿಎಸ್ ನಿಧಿಯಲ್ಲಿರುವ ಮೊತ್ತ** (ಎಯುಎಂ)

| | |
|---|---|
| ಕಾರ್ಪೊರೇಟ್ | ₹2.48 ಲಕ್ಷ ಕೋಟಿ |
| ಎಲ್ಲ ನಾಗರಿಕರು | ₹77,170 ಕೋಟಿ |
| ಸ್ವಾವಲಂಬನೆ | ₹6,266 ಕೋಟಿ |
| ವಾತ್ಸಲ್ಯ | ₹183 ಕೋಟಿ |

* 2025ರ ಸೆಪ್ಟೆಂಬರ್ 30ರವರೆಗೆ

### 15 ವರ್ಷಕ್ಕೆ ಹೊರಬರಲು ಅವಕಾಶ

ಪ್ರಸ್ತಾವಿತ ತಿದ್ದುಪಡಿ ನಿಯಮದಲ್ಲಿ 15 ವರ್ಷಗಳಿಗೆ ಎನ್‌ಪಿಎಸ್‌ನಿಂದ ಹೊರಬರುವುದಕ್ಕೆ ಅವಕಾಶ ಕಲ್ಪಿಸಲಾಗಿದೆ (ಹಾಲಿ ನಿಯಮದಡಿ 60 ವರ್ಷ ಆಗಿರಬೇಕು). ಉದಾಹರಣೆಗೆ, ಒಬ್ಬ ಖಾಸಗಿ ವಲಯದ ಉದ್ಯೋಗಿಯು 30ನೇ ವಯಸ್ಸಿಗೆ ಎನ್‌ಪಿಎಸ್ ಖಾತೆ ತೆರೆದು 45ನೇ ವಯಸ್ಸಿಗೆ ತನ್ನ ಚಂದಾದಾರಿಕೆಯನ್ನು ಕೊನೆಗೊಳಿಸಬಹುದು.

ಆ ಸಮಯದಲ್ಲಿ ಆ ಉದ್ಯೋಗಿಯ ಎನ್‌ಪಿಎಸ್ ಖಾತೆಯಲ್ಲಿ ₹50 ಲಕ್ಷ ಹೊಂದಿದ್ದರೆ, ಆ ಪೈಕಿ ಶೇ 60ರಷ್ಟು ಮೊತ್ತ (₹30 ಲಕ್ಷ) ಹಿಂಪಡೆಯಬಹುದು. ಉಳಿದ ಶೇ 40ರಷ್ಟು ಮೊತ್ತವನ್ನು (₹20 ಲಕ್ಷ) ನಿಯಮಿತವಾಗಿ ಆದಾಯ ತರುವ ಯೋಜನೆಯಲ್ಲಿ ಹೂಡಿಕೆ ಮಾಡಲು ಮೀಸಲಿಡಬೇಕಿದೆ.

### 18 ತುಂಬಿದ ನಂತರವಷ್ಟೇ ಚಂದಾದಾರಿಕೆ ಅಂತ್ಯ

ಎನ್‌ಪಿಎಸ್–ವಾತ್ಸಲ್ಯ ಚಂದಾದಾರರಿಗೆ ಸಂಬಂಧಿಸಿದಂತೆ ಮಕ್ಕಳಿಗೆ 18 ವರ್ಷ ತುಂಬಿದ ಬಳಿಕಷ್ಟೇ ಅವರು ಚಂದಾದಾರಿಕೆಯಿಂದ ಹೊರಬರಬಹುದು ಎಂದು ಕರಡು ನಿಯಮದಲ್ಲಿ ಹೇಳಲಾಗಿದೆ. ಚಂದಾದಾರಿಕೆ ಅಂತ್ಯಗೊಳಿಸಿದ ನಂತರ ನಿಧಿಯಲ್ಲಿ ಸಂಗ್ರಹವಾಗಿರುವ ಮೊತ್ತದಲ್ಲಿ ಶೇ 80ರಷ್ಟನ್ನು ನಿಯಮಿತವಾಗಿ ಆದಾಯ ತರುವ ಯೋಜನೆಯಲ್ಲಿ ಹೂಡಿಕೆ ಮಾಡಬೇಕು. ಶೇ 20ರಷ್ಟನ್ನು ಇಡುಗಂಟು ರೂಪದಲ್ಲಿ ನೀಡಲಾಗುತ್ತದೆ. ಒಂದು ವೇಳೆ, ಎನ್‌ಪಿಎಸ್ ಖಾತೆಯಲ್ಲಿ ಸಂಗ್ರಹವಾದ ಮೊತ್ತ ₹4 ಲಕ್ಷ ಅಥವಾ ಅದಕ್ಕಿಂತ ಕಡಿಮೆ ಇದ್ದರೆ, ಒಂದೇ ಸಲಕ್ಕೆ ಪೂರ್ಣ ಮೊತ್ತವನ್ನು ವಾಪಸ್ ಪಡೆಯುವುದಕ್ಕೂ ಅವಕಾಶ ಇದೆ. ಇದನ್ನು ಆಯ್ಕೆ ಮಾಡಿಕೊಂಡವರಿಗೆ ನಂತರ ಪಿಂಚಣಿ ಆದಾಯ ಸಿಗುವುದಿಲ್ಲ.

ಮಕ್ಕಳಿಗೆ 18 ವರ್ಷ ಪೂರ್ಣವಾದ ನಂತರವೂ ಚಂದಾದಾರಿಕೆಯಿಂದ ಹೊರಬಾರದೇ ಇದ್ದ ಪಕ್ಷದಲ್ಲಿ ಚಂದಾದಾರಿಕೆಯು ಎನ್‌ಪಿಎಸ್‌ನ ಎಲ್ಲ ನಾಗರಿಕರು (All citizens) ವಿಭಾಗದಲ್ಲಿ ಮುಂದುವರಿಯುತ್ತದೆ.

### ಶೇ 80ರಷ್ಟು ಇಡುಗಂಟು ಲಭ್ಯ

ಪಿಎಫ್‌ಆರ್‌ಡಿಎ ಪ್ರಕಟಿಸಿರುವ ಹೊಸ ಪ್ರಸ್ತಾವದನ್ವಯ ಚಂದಾದಾರರಿಗೆ ಹೆಚ್ಚಿನ ಅನುಕೂಲ ಲಭಿಸಲಿದೆ. ಹಾಲಿ ನಿಯಮದ (ಸಾಮಾನ್ಯ ಯೋಜನೆ) ಅನ್ವಯ ಚಂದಾದಾರರಿಗೆ ಯೋಜನೆಯಿಂದ ಹೊರಬರಲು ನಿವೃತ್ತಿಯ ವಯಸ್ಸು ಅಂದರೆ 60 ವರ್ಷದ ಮಿತಿ ನಿಗದಿಪಡಿಸಲಾಗಿತ್ತು. ಈ ವೇಳೆ ದೊರೆಯುವ ಪಿಂಚಣಿಯ ಇಡುಗಂಟಿನಲ್ಲಿ (ಕಾರ್ಪಸ್) ಶೇ 60ರಷ್ಟು ಮೊತ್ತ ಹಿಂಪಡೆಯಲು ಅವಕಾಶವಿತ್ತು. ಈ ಮೊತ್ತವು ಆದಾಯ ತೆರಿಗೆಯಿಂದ ಮುಕ್ತವಾಗಿದೆ. ಉಳಿದ ಶೇ 40ರಷ್ಟು ನಿಧಿಯನ್ನು ನಿಯಮಿತವಾಗಿ ಆದಾಯ ತರುವ ಯೋಜನೆಯಲ್ಲಿ (ಪರ್ಚೇಸ್ ಆಫ್ ಆ್ಯನುಟಿ) ಕಡ್ಡಾಯವಾಗಿ ಹೂಡಿಕೆ ಮಾಡಬೇಕಿತ್ತು.

ಕರಡಿನಲ್ಲಿ ಇಡುಗಂಟು ಹಿಂಪಡೆಯುವಿಕೆ ಪ್ರಮಾಣವನ್ನು ಶೇ 80ಕ್ಕೆ ಹೆಚ್ಚಿಸುವ ಕುರಿತು ಪ್ರಸ್ತಾಪಿಸಲಾಗಿದೆ (ಈ ಪೈಕಿ ಶೇ 60ರಷ್ಟು ಮೊತ್ತಕ್ಕೆ ತೆರಿಗೆ ವಿನಾಯಿತಿ ಇದ್ದರೆ, ಉಳಿದ ಶೇ 20ರಷ್ಟು ಮೊತ್ತವು ಆದಾಯ ತೆರಿಗೆ ವ್ಯಾಪ್ತಿಗೆ ಒಳಪಡುತ್ತದೆ). ಉಳಿದ ಶೇ 20ರಷ್ಟು ಮೊತ್ತವನ್ನು ಚಂದಾದಾರರು ನಿಯಮಿತವಾಗಿ ಆದಾಯ ತರುವ ಯೋಜನೆಯಲ್ಲಿ ಹೂಡುವುದು ಕಡ್ಡಾಯ. ಹೊಸ ಪ್ರಸ್ತಾವವು ಖಾತೆದಾರರಿಗೆ ಹೆಚ್ಚಿನ ಆರ್ಥಿಕ ಭದ್ರತೆ ಒದಗಿಸಲಿದೆ. ಅಲ್ಲದೆ, ಆರ್ಥಿಕ ಸಂಕಷ್ಟಗಳನ್ನು ಪರಿಹರಿಸಿಕೊಳ್ಳಲು ನೆರವಾಗಲಿದೆ ಎನ್ನುತ್ತಾರೆ ಹೂಡಿಕೆ ತಜ್ಞರು.

ಸಾಮಾನ್ಯ ಚಂದಾದಾರಿಕೆ ಹೊರಬರುವ ವ್ಯವಸ್ಥೆಯಡಿ (60 ವರ್ಷಕ್ಕೆ) ಚಂದಾದಾರರ ಖಾತೆಯಲ್ಲಿ ₹2.5 ಲಕ್ಷ ಇಡುಗಂಟು ಇದ್ದರೆ, ಇಡೀ ಮೊತ್ತ ಹಿಂಪಡೆಯಲು ಹಾಲಿ ನಿಯಮದಲ್ಲಿ ಅವಕಾಶವಿದೆ. ಈ ಮೊತ್ತದ ಪ್ರಮಾಣ ಹೆಚ್ಚಿಸಲು ತಿದ್ದುಪಡಿಯಲ್ಲಿ ಪ್ರಸ್ತಾಪಿಸಲಾಗಿದೆ. ಇಡುಗಂಟು ₹12 ಲಕ್ಷಕ್ಕಿಂತ ಕಡಿಮೆ ಇದ್ದರೆ ಆ ಮೊತ್ತದಲ್ಲಿ ಶೇ 50ರಷ್ಟನ್ನು ಒಂದೇ ಬಾರಿಗೆ ಹಿಂಪಡೆಯಬಹುದಾಗಿದೆ. ಉಳಿದ ಶೇ 50ರಷ್ಟು ಮೊತ್ತವನ್ನು ಐದು ವರ್ಷಗಳಲ್ಲಿ ವ್ಯವಸ್ಥಿತವಾಗಿ ಹಿಂಪಡೆಯಲು ಅವಕಾಶವಿದೆ ಅಥವಾ ಚಂದಾದಾರರು ಇಚ್ಛಿಸಿದರೆ ಈ ಮೊತ್ತವನ್ನು ನಿಯಮಿತವಾಗಿ ಆದಾಯ ತರುವ ಯೋಜನೆಯಲ್ಲಿ ಹೂಡಿಕೆ ಮಾಡಬಹುದಾಗಿದೆ.

ಕೆಲವು ಚಂದಾದಾರರು ಅವಧಿ ಮುಗಿಯುವ ಮೊದಲೇ ಇಡುಗಂಟು ಹಿಂಪಡೆಯಲು ಇಚ್ಛಿಸುವುದುಂಟು. ಹಾಲಿ ನಿಯಮದಡಿ ₹2.5 ಲಕ್ಷ ಇಡುಗಂಟು ಇದ್ದರೆ ಇಡೀ ಮೊತ್ತವನ್ನು ಹಿಂಪಡೆಯಬಹುದಾಗಿದೆ. ಈ ಮೊತ್ತ ಹೆಚ್ಚಿಸುವ ಕುರಿತು ತಿದ್ದುಪಡಿಯಲ್ಲಿ ಉಲ್ಲೇಖಿಸಲಾಗಿದೆ. ₹4 ಲಕ್ಷ ಅಥವಾ ಅದಕ್ಕಿಂತ ಕಡಿಮೆ ಮೊತ್ತ ಇದ್ದರೆ ಸಂಪೂರ್ಣವಾಗಿ ಹಿಂಪಡೆಯಲು ಅವಕಾಶ ಕಲ್ಪಿಸುವ ಬಗ್ಗೆ ಪ್ರಸ್ತಾಪಿಸಲಾಗಿದೆ. ಅಂತಹ ಚಂದಾದಾರರು ನಿಯಮಿತವಾಗಿ ಆದಾಯ ತರುವ ಯೋಜನೆಯಲ್ಲಿ ಹೂಡಿಕೆ ಮಾಡುವ ಪ್ರಮೇಯ ಇರುವುದಿಲ್ಲ.

ಪ್ರಸ್ತುತ ಎನ್‌ಪಿಎಸ್ ಸೇರ್ಪಡೆಗೆ ಗರಿಷ್ಠ ವಯಸ್ಸು 70 ವರ್ಷ. 75 ವರ್ಷದವರೆಗೂ ಖಾತೆ ಮುಂದುವರಿಸಬಹುದು. ತಿದ್ದುಪಡಿಯಲ್ಲಿ ಸೇರ್ಪಡೆ ಮತ್ತು ಖಾತೆ ಮುಂದುವರಿಸುವ ಅವಧಿಯನ್ನು 85 ವರ್ಷದವರೆಗೆ ವಿಸ್ತರಿಸುವ ಕುರಿತು ಉಲ್ಲೇಖಿಸಲಾಗಿದೆ. ಪ್ರಸ್ತುತ ಚಂದಾದಾರರ ಎನ್‌ಪಿಎಸ್ ಮೊತ್ತಕ್ಕೆ ಸಾಲ ಸೌಲಭ್ಯವಿಲ್ಲ. ಕರಡಿನಲ್ಲಿ, ಸಾಲ ನೀಡುವ ಬಗ್ಗೆಯೂ ಪ್ರಸ್ತಾಪಿಸಲಾಗಿದೆ.

### ಬಹು ಯೋಜನೆಯ ಚೌಕಟ್ಟು

ಎನ್‌ಪಿಎಸ್ ಬಲವರ್ಧನೆಗೆ ಪ್ರಾಧಿಕಾರವು ಬಹು ಯೋಜನೆ ಚೌಕಟ್ಟು (ಎಂಎಸ್‌ಎಫ್) ರೂಪಿಸಿದೆ. ಇದರಡಿ ಅನುಷ್ಠಾನಗೊಳಿಸಿರುವ ಹೊಸ ಯೋಜನೆಯು ಚಂದಾದಾರರಿಗೆ ಹೆಚ್ಚಿನ ಅನುಕೂಲ ಕಲ್ಪಿಸಲಿದೆ.

ಪ್ರಸ್ತುತ ಎನ್‌ಪಿಎಸ್ ಚಂದಾದಾರರ ಕೊಡುಗೆಯನ್ನು ಷೇರುಪೇಟೆ, ಸರ್ಕಾರಿ ಬಾಂಡ್, ಕಾರ್ಪೊರೇಟ್ ಬಾಂಡ್ ಮತ್ತು ಇತರ ನಿಧಿಗಳಲ್ಲಿ ಹೂಡಿಕೆ ಮಾಡಲಾಗುತ್ತದೆ. ಯಾವ ಹೂಡಿಕೆಗೆ ಎಷ್ಟು ಮೊತ್ತ ಹಂಚಿಕೆ ಮಾಡಬೇಕು ಎಂಬುದನ್ನು ಚಂದಾದಾರರೇ ನಿರ್ಧರಿಸಬಹುದು. ಚಂದಾದಾರರ ಸೂಚನೆ ಅನ್ವಯ ಫಂಡ್ ಮ್ಯಾನೇಜರ್‌ಗಳು ಹೂಡಿಕೆಯನ್ನು ನಿರ್ವಹಣೆ ಮಾಡುತ್ತಾರೆ.

ಷೇರು ಮಾರುಕಟ್ಟೆಯಲ್ಲಿ ಹೂಡಿಕೆಯಾಗಿರುವ ಎನ್‌ಪಿಎಸ್ ಮೊತ್ತವು ವಾರ್ಷಿಕ ಶೇ 13ರಷ್ಟು ರಿಟರ್ನ್ಸ್ ತಂದುಕೊಟ್ಟಿದೆ. ಕಾರ್ಪೊರೇಟ್ ಬಾಂಡ್ ಮತ್ತು ಸರ್ಕಾರಿ ಬಾಂಡ್‌ಗಳಲ್ಲಿನ ಹೂಡಿಕೆಯು ಶೇ 9ರಷ್ಟು ರಿಟರ್ನ್ಸ್ ನೀಡಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.

ಸದ್ಯ ಎನ್‌ಪಿಎಸ್ ಚಂದಾದಾರರು ತಮ್ಮ ಕೊಡುಗೆಯ ಶೇ 75ರಷ್ಟು ಮೊತ್ತವನ್ನಷ್ಟೇ ಷೇರುಪೇಟೆಯಲ್ಲಿ ಹೂಡಲು ಅವಕಾಶವಿದೆ. ಆದರೆ, ಬಹಳಷ್ಟು ಚಂದಾದಾರರು ಹೆಚ್ಚಿನ ರಿಟರ್ನ್ಸ್ ಅನ್ನು ಅಪೇಕ್ಷಿಸುತ್ತಾರೆ. ಅಂತಹ ಚಂದಾದಾರರಿಗೆ ತಮ್ಮ ಕೊಡುಗೆಯ ಶೇ 100ರಷ್ಟು ಮೊತ್ತವನ್ನೂ ಷೇರುಪೇಟೆಯಲ್ಲಿ ಹೂಡಿಕೆಗೆ ಬಹು ಯೋಜನೆ ಚೌಕಟ್ಟಿನಡಿ ಅವಕಾಶ ಕಲ್ಪಿಸಲಾಗಿದೆ. ಅಕ್ಟೋಬರ್ 1ರಿಂದಲೇ ಇದು ಜಾರಿಗೆ ಬಂದಿದೆ.

'ಜೆನ್-ಝೀ' ಪೀಳಿಗೆ ಮತ್ತು ಗಿಗ್ ಕಾರ್ಮಿಕರು ಎನ್‌ಪಿಎಸ್‌ನಿಂದ ದೂರವಿದ್ದಾರೆ. ಅವರನ್ನು ಈ ಯೋಜನೆಯತ್ತ ಆಕರ್ಷಿಸುವ ಉದ್ದೇಶದಿಂದ ಪಿಎಫ್‌ಆರ್‌ಡಿಎ ಈ ಚೌಕಟ್ಟು ರೂಪಿಸಿದೆ. ಆದರೆ, ಜಾಗತಿಕ ಹಾಗೂ ದೇಶೀಯ ವಿದ್ಯಮಾನಗಳು ದೇಶೀಯ ಷೇರುಪೇಟೆ ಮೇಲೆ ಪರಿಣಾಮ ಬೀರುತ್ತವೆ. ಹಾಗಾಗಿ, ಹೆಚ್ಚಿನ ರಿಟರ್ನ್ಸ್ ನಿರೀಕ್ಷಿಸುವ ಚಂದಾದಾರರು ರಿಸ್ಕ್ ಭರಿಸಲೂ ಸಿದ್ಧವಿರಬೇಕಿದೆ.

ಆಧಾರ: ಪಿಂಚಣಿ ನಿಧಿ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರ ವೆಬ್‌ಸೈಟ್, ಎನ್‌ಪಿಎಸ್‌ಟ್ರಸ್ಟ್.ಒಆರ್‌ಜಿ.ಇನ್.

## ❖ 'ನಲಿಕಲಿ' ಮಕ್ಕಳಿಗೆ ದಿನಕ್ಕೊಂದು ರೂಪಾಯಿ

**ಸಂದರ್ಭ: ಕೊಪ್ಪಳ ತಾಲ್ಲೂಕಿನ ಲಿಂಗದೇವರಕೊಪ್ಪ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಶಾಲೆಯಲ್ಲಿ 'ನಲಿ ಕಲಿ ' ಶಿಕ್ಷಣದ ಮಕ್ಕಳಿಗೆ ದಿನಕ್ಕೆ ₹ 1 ನೀಡಲು ಮುಖ್ಯ ಶಿಕ್ಷಕ ಎಂ.ಕೆ. ಹೊಳಜೋಗಿ ತೀರ್ಮಾನಿಸಿದ್ದು, ದಾಖಲಾತಿ ಹೆಚ್ಚಿಸಲು ಪ್ರಯತ್ನಿಸುತ್ತಿದ್ದಾರೆ.**

- **ಶಾಲೆಯಲ್ಲಿ 1ರಿಂದ 3ನೇ ತರಗತಿಯವರೆಗೆ ನಲಿ-ಕಲಿ ಶಿಕ್ಷಣ ಕ್ರಮವಿದೆ**. 1, 2ನೇ ತರಗತಿಯಲ್ಲಿ 7 ಮಕ್ಕಳಿದ್ದಾರೆ. 3ನೇ ತರಗತಿಯಲ್ಲಿ ಮಕ್ಕಳಿಲ್ಲ. ಹೀಗಾಗಿ, ದಾಖಲಾತಿ ಹೆಚ್ಚಳಕ್ಕಾಗಿ ಹೊಳಜೋಗಿ ಅವರು 'ದಿನಕ್ಕೆ ₹ 1 ಯೋಜನೆ' ರೂಪಿಸಿದ್ದಾರೆ.
- ಸರ್ಕಾರಿ ಕನ್ನಡ ಶಾಲೆಗೆ ದಾಖಲಾಗುವ ಮಕ್ಕಳ ಹೆಸರಿನಲ್ಲಿ ಸದ್ಯ ₹ 1,111 ಠೇವಣಿ ಇರಿಸಿರುವ ಹೊಳಜೋಗಿ, ಅದರ ಜೊತೆಗೆ ದಿನಕ್ಕೆ ₹ 1 ನೀಡುವುದಾಗಿ ಘೋಷಿಸಿದ್ದಾರೆ.
- 'ಮಕ್ಕಳ ಹೆಸರಿನಲ್ಲಿ ಪೋಷಕರು ಈಗಾಗಲೇ ಬ್ಯಾಂಕ್ ಖಾತೆ ತೆರೆದಿದ್ದಾರೆ. ಅದೇ ಖಾತೆಗೆ ದಿನದ ಲೆಕ್ಕದಲ್ಲಿ ಪ್ರತಿ ತಿಂಗಳೂ ಹಣ ಜಮೆ ಮಾಡುತ್ತೇನೆ. ಮಕ್ಕಳು ಸರ್ಕಾರಿ ಶಾಲೆಗೆ ಬರಲಿ ಎಂಬ ಕಾರಣಕ್ಕೆ ಈ ಕ್ರಮವಹಿಸಿದ್ದೇನೆ. ಜೊತೆಗೆ, ಹಣ ಉಳಿತಾಯದ ಬಗ್ಗೆಯೂ ಮಕ್ಕಳಲ್ಲಿ ಜಾಗೃತಿ ಮೂಡುತ್ತದೆ' ಎಂದು ಅವರು ಅಭಿಪ್ರಾಯಪಟ್ಟರು.

## ❖ ಪಶ್ಚಿಮ ಏಷ್ಯಾ ದೇಶಗಳಿಂದ ಕಚ್ಚಾ ತೈಲ ಖರೀದಿ?

**ಸಂದರ್ಭ: ರಷ್ಯಾದ ತೈಲ ಕಂಪನಿಗಳ ಮೇಲಿನ ನಿರ್ಬಂಧ: ಬೇರೆಡೆ ಖರೀದಿಗೆ ಮುಂದಾದ ಭಾರತದ ಕಂಪನಿಗಳು ರಷ್ಯಾದಿಂದ ತೈಲ ಖರೀದಿಗೆ ಸಂಬಂಧಿಸಿದಂತೆ ಅಮೆರಿಕ ಮತ್ತು ಇತರೆ ಪಾಶ್ಚಿಮಾತ್ಯ ದೇಶಗಳು ವಿಧಿಸಿರುವ ನಿರ್ಬಂಧಗಳನ್ನು ಪಾಲಿಸಲಾಗುವುದುರಿಲಯನ್ಸ್ ಇಂಡಸ್ಟ್ರೀಸ್ ರಷ್ಯಾದ ಎರಡು ಪ್ರಮುಖ ತೈಲ ಕಂಪನಿಗಳ ಮೇಲೆ ಅಮೆರಿಕ ನಿರ್ಬಂಧ ವಿಧಿಸಿದೆ. ಇದರಿಂದಾಗಿ, ಕಚ್ಚಾ ತೈಲ ಆಮದಿನಲ್ಲಿ ಉಂಟಾಗುವ ಕೊರತೆಯನ್ನು ಸರಿದೂಗಿಸಿ ಕೊಳ್ಳಲು ಭಾರತೀಯ ತೈಲ ಸಂಸ್ಕರಣಾ ಕಂಪನಿಗಳು ಪಶ್ಚಿಮ ಏಷ್ಯಾ, ಲ್ಯಾಟಿನ್ ಅಮೆರಿಕ ಮತ್ತು ಅಮೆರಿಕದಿಂದ ಕಚ್ಚಾ ತೈಲ ಖರೀದಿಯನ್ನು ಹೆಚ್ಚಿಸುವ ಸಾಧ್ಯತೆಯಿದೆ.**

- **ಕಚ್ಚಾ ತೈಲ ಉತ್ಪನ್ನ ಮಾಡುವ ರಷ್ಯಾದ ಅತಿದೊಡ್ಡ ಕಂಪನಿಗಳಾದ 'ರೊಸ್ನೆಫ್ಟ್' ಮತ್ತು 'ಲುಕಾಯಿಲ್'** ಮೇಲೆ ಅಕ್ಟೋಬರ್ 22ರಂದು ಅಮೆರಿಕ ನಿರ್ಬಂಧ ವಿಧಿಸಿದೆ. ಆ ಮೂಲಕ, ಈ ಕಂಪನಿಗಳು ಮತ್ತು ಅವುಗಳ ಅಂಗ ಸಂಸ್ಥೆಗಳೊಂದಿಗೆ ಅಮೆರಿಕದ ಕಂಪನಿಗಳು ಮತ್ತು ವ್ಯಕ್ತಿಗಳು ವಹಿವಾಟು ನಡೆಸುವುದನ್ನು ನಿಷೇಧಿಸಲಾಗಿದೆ. ಅಲ್ಲದೆ, ಅವುಗಳಿಂದ ಅಮೆರಿಕದ್ದಲ್ಲದ ಕಂಪನಿಗಳು ತೈಲ ಖರೀದಿಸಿದರೆ ಅಂತಹ ಸಂಸ್ಥೆಗಳೂ ನಿರ್ಬಂಧದ ಪರಿಣಾಮವನ್ನು ಎದುರಿಸುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.
- ರಷ್ಯಾದ ಈ ಎರಡೂ ಕಂಪನಿಗಳ ಜತೆಗಿನ ವಹಿವಾಟುಗಳನ್ನು ನವೆಂಬರ್ 21ರೊಳಗೆ ಅಂತ್ಯಗೊಳಿಸಬೇಕು ಎಂದು ಅಮೆರಿಕ ಹೇಳಿದೆ.
- **ಪ್ರಸ್ತುತ ಭಾರತವು ರಷ್ಯಾದಿಂದ ನಿತ್ಯ 17 ಲಕ್ಷ ಬ್ಯಾರಲ್‌ನಷ್ಟು ಕಚ್ಚಾ ತೈಲ ಖರೀದಿಸುತ್ತಿದೆ. ಈ ಪೈಕಿ 'ರೊಸ್ನೆಫ್ಟ್' ಮತ್ತು 'ಲುಕಾಯಿಲ್' ನಿಂದಲೇ 12 ಲಕ್ಷ ಬ್ಯಾರಲ್ ತೈಲವನ್ನು ಖರೀದಿ ಮಾಡುತ್ತಿದೆ. ಖಾಸಗಿ ಕಂಪನಿಗಳಾದ ರಿಲಯನ್ಸ್ ಇಂಡಸ್ಟ್ರೀಸ್ ಮತ್ತು ನಯಾರಾ ಎನರ್ಜಿ ಕಂಪನಿಗಳು ಈ ತೈಲದಲ್ಲಿ ಹೆಚ್ಚಿನ ಪ್ರಮಾಣವನ್ನು ಖರೀದಿಸುತ್ತಿವೆ. ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳು ಕಡಿಮೆ ಪ್ರಮಾಣದಲ್ಲಿ ಖರೀದಿ ಮಾಡುತ್ತಿವೆ.**
- 'ರಷ್ಯಾದಿಂದ ನವೆಂಬರ್ 21ರವರೆಗೆ ನಿಗದಿಯಂತೆ ಕಚ್ಚಾ ತೈಲ ಆಮದು ಆಗಲಿದೆ. ಆ ನಂತರ ತೈಲ ಖರೀದಿ ಪ್ರಮಾಣ ಇಳಿಕೆಯಾಗಲಿದೆ. ಅಮೆರಿಕ ವಿಧಿಸಿರುವ ನಿರ್ಬಂಧದ ಪರಿಣಾಮಗಳನ್ನು ತಪ್ಪಿಸಿಕೊಳ್ಳಲು ಭಾರತದ ತೈಲ ಸಂಸ್ಕರಣಾಗಾರಗಳು ಪ್ರಯತ್ನಿಸುತ್ತಿವೆ' ಎಂದು ಕೆಪ್ಲೆರ್‌ನ ಸಂಶೋಧನಾ ವಿಶ್ಲೇಷಕ (ಸಂಸ್ಕರಣೆ ಮತ್ತು ಮಾಡೆಲಿಂಗ್) ಸುಮಿತ್ ರಿಟೋಲಿಯಾ ಹೇಳಿದ್ದಾರೆ.
- 'ದಿನಕ್ಕೆ 5 ಲಕ್ಷ ಬ್ಯಾರಲ್‌ನಂತೆ 25 ವರ್ಷ ಕಚ್ಚಾ ತೈಲ ಪೂರೈಕೆ ಮಾಡಲು ರಿಲಯನ್ಸ್, ರೊಸ್ನೆಫ್ಟ್ ಜೊತೆ ಈಗಾಗಲೇ ಒಪ್ಪಂದ ಮಾಡಿಕೊಂಡಿದೆ. ನಯಾರಾ ಎನರ್ಜಿ, ರಷ್ಯಾದ ತೈಲ ಕಂಪನಿಗಳ ಮೇಲೆಯೇ ಸಂಪೂರ್ಣವಾಗಿ ಅವಲಂಬಿತವಾಗಿದೆ. ಅದಕ್ಕಿರುವ ಆಯ್ಕೆ ಕಡಿಮೆ. ಆದರೂ, ಸಂಸ್ಕರಣಾಗಾರರು ಮಧ್ಯವರ್ತಿಗಳ ಮೂಲಕ ಖರೀದಿಯನ್ನು ಮುಂದುವರಿಸಬಹುದು' ಎಂದು ಅವರು ಹೇಳಿದ್ದಾರೆ.
- ಕಚ್ಚಾ ತೈಲ ಆಮದಿನಲ್ಲಿ ಉಂಟಾಗುವ ಕೊರತೆಯನ್ನು ಸರಿದೂಗಿಸಿಕೊಳ್ಳಲು **ಭಾರತವು ಪಶ್ಚಿಮ ಏಷ್ಯಾ, ಬ್ರೆಜಿಲ್, ಲ್ಯಾಟಿನ್ ಅಮೆರಿಕ, ಪಶ್ಚಿಮ ಆಫ್ರಿಕಾ, ಕೆನಡಾ, ಅಮೆರಿಕದಿಂದ ಹೆಚ್ಚಿನ ಪ್ರಮಾಣದಲ್ಲಿ ತೈಲ ಖರೀದಿಸುವ ನಿರೀಕ್ಷೆಯಿದೆ.** ಅಮೆರಿಕದ ನಿರ್ಬಂಧಗಳು ಭಾರತದ ತೈಲ ಖರೀದಿ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದ್ದು, ಭಾರತವು ಬೇರೆ ದೇಶಗಳಿಂದ ತೈಲ ಖರೀದಿಸಿದರೆ ವೆಚ್ಚ ಹೆಚ್ಚಳವಾಗ ಬಹುದು ಎಂದು ಅವರು ವಿವರಿಸಿದ್ದಾರೆ.

Dr. Rajkumar IAS/KAS Academy

## ❖ ಕೇರಳ: ಎಡಪಕ್ಷಗಳಲ್ಲಿ ಆಂತರಿಕ ಸ್ಫೋಟ: 'ಪಿ.ಎಂ.ಶ್ರೀ ಶಾಲಾ ಯೋಜನೆ' ಗೆ ಸೇರಲು ಕೇರಳ ಸರ್ಕಾರ- ಕೇಂದ್ರ ಸರ್ಕಾರ ಒಪ್ಪಂದ

**ಸಂದರ್ಭ: ಕೇಂದ್ರ ಸರ್ಕಾರ ಪ್ರಾಯೋಜಿತ 'ಪಿ.ಎಂ.ಶ್ರೀ ಶಾಲಾ ಯೋಜನೆ' ಗೆ ಸೇರ್ಪಡೆಯಾಗಲು ಕೇರಳದ ಶಾಲಾ ಶೈಕ್ಷಣಿಕ ಇಲಾಖೆ ಒಪ್ಪಿಗೆ ಸೂಚಿಸಿರುವುದು ರಾಜ್ಯದ ಎಡಪಕ್ಷಗಳ ನೇತೃತ್ವದ ಸರ್ಕಾರದಲ್ಲಿ ಆಂತರಿಕ ಕಲಹಕ್ಕೆ ಕಾರಣವಾಗಿದೆ. ಎಲ್‌ಡಿಎಫ್ ಒಕ್ಕೂಟದಲ್ಲಿ ಸಿಪಿಐ ಎರಡನೇ ಅತೀ ದೊಡ್ಡ ಮೈತ್ರಿ ಪಕ್ಷವಾಗಿದ್ದು, ಶಿಕ್ಷಣ ಖಾತೆ ಹೊಂದಿರುವ ಸಿಪಿಎಂ ನಿಲುವಿನಿಂದ ಅಸಮಾಧಾನ ಗೊಂಡಿದೆ.**

**<u>ವಿವಾದ ಏಕೆ?:</u>**

- 'ಪಿ.ಎಂ.ಶ್ರೀ ಶಾಲಾ ಯೋಜನೆ' ಮೂಲಕ ರಾಜ್ಯದಲ್ಲಿ ಸಂಘ ಪರಿವಾರದ ಕಾರ್ಯಸೂಚಿಯನ್ನು ಜಾರಿಗೊಳಿಸುವ ಯತ್ನ ನಡೆಯುತ್ತಿದೆ ಎಂದು ಆರೋಪಿಸಿ ಸಿಪಿಐ ಈ ಹಿಂದೆ ಸೇರ್ಪಡೆಯಾಗದಂತೆ ತಡೆ ಹಿಡಿದಿತ್ತು. ಆದರೆ, ಈ ಬಾರಿ ಸಚಿವ ಸಂಪುಟದಲ್ಲಿ ಚರ್ಚೆ ನಡೆಸದೇ, ಕೇಂದ್ರ ಸರ್ಕಾರದ ಯೋಜನೆಗೆ ಸೇರ್ಪಡೆಯಾಗಲು ರಾಜ್ಯ ಸರ್ಕಾರ ಒಪ್ಪಿಗೆ ನೀಡಿದೆ. ಶಿಕ್ಷಣ ಇಲಾಖೆ ಕಾರ್ಯದರ್ಶಿ ಕೆ. ವಾಸುಕಿ ಅವರು ನವದೆಹಲಿಯಲ್ಲಿ ಕೇಂದ್ರ ಶಿಕ್ಷಣ ಇಲಾಖೆಯ ಅಧಿಕಾರಿಗಳನ್ನು ಭೇಟಿಯಾಗಿ ಒಪ್ಪಂದಕ್ಕೆ ಸಹಿ ಹಾಕಿರುವುದೇ ವಿವಾದ ಸೃಷ್ಟಿಸಿದೆ.
- ಸಿಪಿಐ ಈ ಹಿಂದೆ ಎರಡು ಸಲ ರಾಜ್ಯ ಸರ್ಕಾರದ ನಿರ್ಧಾರವನ್ನು ತಡೆಹಿಡಿದಿತ್ತು. ಮೈತ್ರಿ ಪಕ್ಷ ಸಿಪಿಐ ಅನ್ನು ಹಿರಿಯ ಪಾಲುದಾರ ಸಿಪಿಎಂ ಪಕ್ಕಕ್ಕೆ ತಳ್ಳುತ್ತಿದೆ ಎಂದು ಆರೋಪಿಸಿತ್ತು. ಇದರಿಂದಾಗಿಯೇ, ಒಪ್ಪಂದಕ್ಕೆ ಸಹಿಹಾಕಲು ಒಂದು ತಿಂಗಳ ಕಾಲ ಹಿಂಜರಿದಿದ್ದ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ನೇತೃತ್ವದ ಸರ್ಕಾರವು, ಸಿಪಿಐ ಪ್ರಬಲ ವಿರೋಧದ ಹೊರತಾಗಿಯೂ 'ಪ್ರಧಾನಮಂತ್ರಿ ಸ್ಕೂಲ್ಸ್ ಫಾರ್ ರೈಸಿಂಗ್' (ಪಿಎಂ-ಶ್ರೀ) ಸಹಿಹಾಕಲು ಒಪ್ಪಿಗೆ ಸೂಚಿಸಿದ್ದರು.

## ❖ ಭಾರತದ ಅಥ್ಲೀಟ್‌ಗಳಿಗೆ ನಾಲ್ಕು ಪದಕ: ಏಷ್ಯನ್ ಯೂತ್ ಗೇಮ್ಸ್: ಎಡ್ವಿನಾ, ಓಶಿನ್‌ಗೆ ಬೆಳ್ಳಿ

**ಸಂದರ್ಭ: ಭಾರತದ ಅಥ್ಲೀಟ್‌ಗಳಾದ ಎಡ್ವಿನಾ ಜೇಸನ್ ಮತ್ತು ಓಶಿನ್ ಅವರು ಏಷ್ಯನ್ ಯೂತ್ ಗೇಮ್ಸ್‌ನಲ್ಲಿ ಕ್ರಮವಾಗಿ ಮಹಿಳೆಯರ 400 ಮೀಟರ್ ಓಟ ಮತ್ತು ಡಿಸ್ಕಸ್ ಥ್ರೋ ಸ್ಪರ್ಧೆಯಲ್ಲಿ ಬೆಳ್ಳಿ ಪದಕ ಗೆದ್ದರು.**

- **ಟ್ರ್ಯಾಕ್ ಮತ್ತು ಫೀಲ್ಡ್ ಸ್ಪರ್ಧೆ ಗಳಲ್ಲಿ ಭಾರತ ಎರಡು ಬೆಳ್ಳಿ ಮತ್ತು ಎರಡು ಕಂಚು ಗೆದ್ದಿತು. ಇದರೊಂದಿಗೆ ಪದಕಗಳ ಸಂಖ್ಯೆ 15ಕ್ಕೆ (ಎರಡು ಚಿನ್ನ, ಐದು ಬೆಳ್ಳಿ ಮತ್ತು ಎಂಟು ಕಂಚು) ಏರಿಕೆಯಾಯಿತು. ಪದಕ ಪಟ್ಟಿಯಲ್ಲಿ ಭಾರತ ಐದನೇ ಸ್ಥಾನದಲ್ಲಿದೆ.**
- ಎಡ್ವಿನಾ ಅವರು ಫೈನಲ್‌ನಲ್ಲಿ 55.43 ಸೆಕೆಂಡುಗಳಲ್ಲಿ ಗುರಿ ತಲುಪಿದರು. ಯುಎಇಯ ಆಯಿಷಾ ತಾರಿಕ್ (54.26ಸೆ) ಚಿನ್ನ ಗೆದ್ದರೆ, ತೈವಾನ್‌ನ ಚಿಯಾ ಯಿಂಗ್ (56.60ಸೆ) ಕಂಚಿನ ಪದಕ ತಮ್ಮದಾಗಿಸಿಕೊಂಡರು.




ಎಡ್ವಿನಾ ಜೇಸನ್ ಎಕ್ಸ್ ಚಿತ್ರ

- ಡಿಸ್ಕಸ್ ಥ್ರೋನಲ್ಲಿ ಓಶಿನ್ 43.38 ಮೀಟರ್ ಸಾಧನೆಯೊಂದಿಗೆ ಭಾರತಕ್ಕೆ ಮತ್ತೊಂದು ಬೆಳ್ಳಿ ಪದಕ ತಂದುಕೊಟ್ಟರು. ಚೀನಾದ ಕ್ಸಿನ್ಯಿ ವಾಂಗ್ (55.38 ಮೀ) ಚಿನ್ನ ಗೆದ್ದರು. ತೈವಾನ್‌ನ ಶಿಹ್ ಯುಹ್-ಜೆನ್ (43 ಮೀ) ಕಂಚಿನ ಪದಕಕ್ಕೆ ತೃಪ್ತಿಪಟ್ಟರು.

- ಪಲಾಶ್ ಮಂಡಲ್ ಅವರು ಬಾಲಕರ 5,000 ಮೀ. ನಡಿಗೆ ಸ್ಪರ್ಧೆಯಲ್ಲಿ ಶುಕ್ರವಾರ ಕಂಚಿನ ಪದಕ ಗೆದ್ದುಕೊಂಡರು. ಮಂಡಲ್ ಈ ದೂರವನ್ನು 24ನಿ.48.92 ಸೆ. ಗಳಲ್ಲಿ ಕ್ರಮಿಸಿದರು. ಚೀನಾದ ಹಾವ್ರೊಝು ಝೂಂಗ್ (21ನಿ.43.82 ಸೆ.) ಚಿನ್ನ ಗೆದ್ದರೆ, ಅದೇ ದೇಶದ ಯುಜೀ ಲು (22ನಿ.28.64 ಸೆ.) ಬೆಳ್ಳಿ ಪದಕ ತಮ್ಮದಾಗಿಸಿಕೊಂಡರು.
- ಪುರುಷರ ಹೈಜಂಪ್‌ನಲ್ಲಿ ಜುಬಿನ್ ಗೊಹೈನ್ ಭಾರತಕ್ಕೆ ಮತ್ತೊಂದು ಕಂಚಿನ ಪದಕವನ್ನು ತಂದುಕೊಟ್ಟರು. ಅವರು ತಮ್ಮ ಎರಡನೇ ಪ್ರಯತ್ನದಲ್ಲಿ 2.03 ಮೀ ಎತ್ತರ ಜಿಗಿದರು.
- ಭಾರತದ ಶೌರ್ಯಾ ಅಂಬುರೆ ಅವರು ಮಹಿಳೆಯರ 100 ಮೀಟರ್ ಹರ್ಡಲ್ಸ್‌ನಲ್ಲಿ ಬೆಳ್ಳಿ ಪದಕ ಗೆದ್ದರು. ಅವರು 13.73 ಸೆಕೆಂಡ್‌ಗಳಲ್ಲಿ ಗುರಿ ತಲುಪಿದರು.

## ❖ ದಕ್ಷಿಣ ಏಷ್ಯಾ ಅಥ್ಲೆಟಿಕ್ಸ್: ಸಮರ್‌ದೀಪ್ ಕೂಟ ದಾಖಲೆ

**ಸಂದರ್ಭ: ಭಾರತದ ಉದಯೋನ್ಮುಖ ಶಾಟ್‌ಪಟ್ ಸ್ಪರ್ಧಿ ಸಮರ್‌ದೀಪ್ ಸಿಂಗ್ ಗಿಲ್ ಅವರು ಶುಕ್ರವಾರ ಇಲ್ಲಿ ಆರಂಭವಾದ ದಕ್ಷಿಣ ಏಷ್ಯಾ ಅಥ್ಲೆಟಿಕ್ಸ್ ಫೆಡರೇಷನ್ ಸೀನಿಯರ್ ಚಾಂಪಿಯನ್ ಷಿಪ್‌ನಲ್ಲಿ ಕೂಟ ದಾಖಲೆಯೊಂದಿಗೆ ಚಿನ್ನ ಗೆದ್ದರು.**

- ಉದ್ಘಾಟನಾ ಸಮಾರಂಭದಲ್ಲಿ ಭಾರತ ತಂಡದ ಧ್ವಜಧಾರಿಯಾಗಿದ್ದ ಗಿಲ್ ಅವರು ಪುರುಷರ ಶಾಟ್ ಪಟ್ ಸ್ಪರ್ಧೆಯಲ್ಲಿ 19.59 ಮೀಟರ್ ಸಾಧನೆ ಮೆರೆದರು. 2008ರ ಆವೃತ್ತಿಯಲ್ಲಿ ಎಸ್. ಕುಮಾರ್ ಸಿಂಗ್ ಸ್ಥಾಪಿಸಿದ (17.71 ಮೀಟರ್) ದಾಖಲೆಯನ್ನು ಮುರಿದರು. ಭಾರತದವರೇ ಆದ ರವಿ ಕುಮಾರ್ (17.95 ಮೀ) ಬೆಳ್ಳಿ ಗೆದ್ದರೆ, ಶ್ರೀಲಂಕಾದ ಮಿಥುನ್ರಾಜ್ ಕಂಚಿನ ಪದಕ ಪಡೆದರು.
- 5000 ಮೀಟರ್ ಓಟದಲ್ಲಿ ಭಾರತದ ಅಥ್ಲೀಟ್‌ಗಳು ಪಾರಮ್ಯ ಮೆರೆದರು. ಪುರುಷರ ವಿಭಾಗದಲ್ಲಿ ಪ್ರಿನ್ಸ್ ಕುಮಾರ್ 14 ನಿಮಿಷ 22.17 ಸೆಕೆಂಡುಗಳಲ್ಲಿ ಗುರಿ ತಲುಪಿ ಚಿನ್ನ ಗೆದ್ದರು. ಶ್ರೀಲಂಕಾದ ವಕ್ಷನ್ ವಿಕ್ನರಾಜ್ (14:23.21) ಬೆಳ್ಳಿ ಪದಕ ಗೆದ್ದರು. ಮಹಿಳೆಯರ ವಿಭಾಗದಲ್ಲಿ ಸಂಜನಾ ಸಿಂಗ್ ಚಿನ್ನ, ಸೀಮಾ ಬೆಳ್ಳಿ ಪದಕವನ್ನು ಗೆದ್ದರು.
- ಪುರುಷರ 100 ಮೀಟರ್ ಓಟದಲ್ಲಿ ಶ್ರೀಲಂಕಾದ ಯೊಡಸಿಂಘೆ ಚಾಮೊ (10.30ಸೆ) ಚಿನ್ನ ಗೆದ್ದರು. ಭಾರತದ ಪ್ರಣವ್ ಗುರವ್ (10.32) ಮತ್ತು ಹರ್ಷ್ ರಾವತ್ (10.42) ಕ್ರಮವಾಗಿ ಎರಡನೇ ಮತ್ತು ಮೂರನೇ ಸ್ಥಾನ ಪಡೆದರು.

-----------------------------------------ಶುಭವಂದನೆಗಳು-----------------------------------------

